ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 33 ಸಂಚಿಕೆ- 33 | PAGE- 8 ಪುಟ-8 | ಭಾನುವಾರ 09.03.2025 | RS.2/- ಬೆಲೆ 2/-

# ರಾಜ್ಯ ಸರ್ಕಾರಕ್ಕೆ ರಾಜಕೀಯ ಶಕ್ತಿ ನೀಡಿದ್ದು ಕಲ್ಯಾಣ ಕರ್ನಾಟಕ
# ಪ್ರದೇಶದ ಅಭಿವೃದ್ಧಿಗೆ ಹೆಚ್ಚಿನ ಒತ್ತು ಕೊಡಿ, ಪ್ರೋಟೀನ್ ನೀಡಿ:ಡಾ.ಖರ್ಗೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಮಾ.8:ರಾಜ್ಯ ಸರ್ಕಾರ–ಕ್ಕೆ ರಾಜಕೀಯ ಶಕ್ತಿ ನೀಡಿದ ನೆಲ ಕಲ್ಯಾಣ ಕರ್ನಾಟಕ ಪ್ರದೇಶ. ರಾಜ್ಯದಲ್ಲಿಯೇ ಅತ್ಯಂತ ಹಿಂದುಳಿದಿರುವ ಈ ಪ್ರದೇಶದಲ್ಲಿ ಅಪೌಷ್ಟಿಕತೆಯು ಹೆಚ್ಚು. ಹೀಗಾಗಿ ಇಲ್ಲಿ ಹೆಚ್ಚಿನ ಪ್ರೋಟೀನ್ (ಅಭಿವೃದ್ಧಿ ಕೆಲಸಕ್ಕೆ ಒತ್ತು) ನೀಡುವ ಕೆಲಸ ರಾಜ್ಯ ಸರ್ಕಾರ ಮಾಡಬೇಕು ಎಂದು ರಾಜ್ಯಸಭೆ ವಿಪಕ್ಷ ನಾಯಕ ಡಾ.ಮಲ್ಲಿಕಾರ್ಜುನ ಖರ್ಗೆ ಹೇಳಿದರು.

ಶನಿವಾರ ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಜೇವರ್ಗಿ ತಾಲೂಕಿನ ಕಟ್ಟಿಸಂಗಾವಿಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ 38 ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆಯ ಮಾದರಿಯಲ್ಲಿ 1,000 ಕೋಟಿ ರೂ. ವೆಚ್ಚದಲ್ಲಿ 1,166 ಕಿ.ಮೀ. ಉದ್ದದ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಕಲ್ಯಾಣ ಪಥ ಯೋಜನೆಯ ಚಾಲನಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹಳೇ ಮೈಸೂರು, ಬೆಂಗಳೂರು ಪ್ರದೇಶಕ್ಕೆ ಹೋಲಿಕೆ ಮಾಡಿದಲ್ಲಿ ಹೈದ್ರಾಬಾದ್ ಕರ್ನಾಟಕ ಪ್ರದೇಶ ಹಿಂದುಳಿದಿರುವದು ಸರ್ವಾತೀತ ಸತ್ಯ. ಅದಕ್ಕೆ ಇಲ್ಲಿನ ನಾಯಕರ ಇಚ್ಛಾಶಕ್ತಿ ಕೊರತೆಯು ಹೌದು ಎಂದ ಅವರು, ಸರ್ಕಾರ ಯಾವುದೇ ಯೋಜನೆ ಅರಂಭಿಸಬೇಕಾದರೆ ಕಲ್ಯಾಣದಿಂದ ಆರಂಭಿಸಿದಲ್ಲಿ ಅದು ಕೊಳ್ಳೆಗಾಲ ವರೆಗೂ ತಲುಪಲಿದೆ. ಇದರಿಂದ ಸರ್ಕಾರಕ್ಕೂ ಮತ್ತು ನಿಮಗೂ ಕಲ್ಯಾಣವಾಗಲಿದೆ. ಇನ್ನು ಮೈಸೂರಿನಿಂದ ಆರಂಭಿಸಿದರೆ ಅದು ಬೆಂಗಳೂರಿಗೆ ಬಂದು ನಿಲ್ಲುತ್ತದೆ ಎಂದು ಮಾರ್ಮಿಕವಾಗಿ ನುಡಿದರು.




ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಕಲ್ಯಾಣ ಪಥ ಯೋಜನೆಯಡಿ 1,000 ಕೋಟಿ ರೂ. ಖರ್ಚು ಮಾಡಿ 1,150 ಕಿ.ಮೀ ಮತ್ತು ರಾಜ್ಯದಾದ್ಯಂತ ಪ್ರಗತಿ ಪಥ ಯೋಜನೆಯಡಿ 5,190 ಕೋಟಿ ರೂ. ಮೊತ್ತದಲ್ಲಿ 7,110 ಕಿ.ಮೀ ರಸ್ತೆ ನಿರ್ಮಿಸುವ ಐತಿಹಾಸಿಕ ನಿರ್ಣಯ ಕೈಗೊಂಡಿದ್ದು, ಮುಂದಿನ ದಿನದಲ್ಲಿ ಹಳ್ಳಿಯಲ್ಲಿ ರಸ್ತೆ ಕ್ರಾಂತಿ ನಿರೀಕ್ಷಿಬಹುದಾಗಿದೆ ಎಂದರು.

ಹಿಂದೆ ಯು.ಪಿ.ಎ. ಸರ್ಕಾರದ ಅವಧಿಯಲ್ಲಿ 2/3 ಮೆಜಾರಿಟಿ ಪಡೆದು 371ಜೆ ಕಾಯ್ದೆ ಜಾರಿಗೆ ತಂದ ಪರಿಣಾಮ ಈ ಎಲ್ಲಾ ಅಭಿವೃದ್ಧಿ ಕೆಲಸಗಳು ಸಾಗುತ್ತಿವೆ ಎಂದ ಅವರು, ಪ್ರದೇಶದ ಅಭಿವೃದ್ಧಿಗೆ ಶಿಕ್ಷಣ ಅತಿ ಅವಶ್ಯಕ. ಸರ್ಕಾರ–ಕ್ಕೆ ಪ್ರಶ್ನೆ ಮನೋಭಾವ ಬರಬೇಕಾದಲ್ಲಿ ಶಿಕ್ಷಣ ಮುಖ್ಯ. ಹೀಗಾಗಿ ಶಿಕ್ಷಣ, ಅರೋಗ್ಯಕ್ಕೆ ಹೆಚ್ಚಿನ ಒತ್ತು ಕೊಡಿ ಎಂದು ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದರು.

ಕೇಂದ್ರ ಸರ್ಕಾರ ನರೇಗಾ ಯೋಜನೆಯಡಿ ರಾಜ್ಯಕ್ಕೆ ಸಮರ್ಪಕವಾಗಿ ಅನುದಾನ ನೀಡುತ್ತಿಲ್ಲವಾದರಿಂದ ಕೂಲಿ ಕಾರ್ಮಿಕರಿಗೆ ಉದ್ಯೋಗ ಕೊಡಲು ಸಾಧ್ಯವಾಗುತ್ತಿಲ್ಲ. ಯಾದಗಿರಿ ಬಳಿ ರೈಲ್ವೆ ಬೋಗಿ ಕಾರ್ಖಾನೆ ಕಾರ್ಯಾನುಷ್ಠಾನಕ್ಕೆ ಹಲವು ಬಾರಿ ಪತ್ರ ಬರೆದಿರುವೆ, ಕೇಂದ್ರದಿಂದ ಇನ್ನು ಉತ್ತರ ಬಂದಿಲ್ಲ ಎಂದು ಬೇಸರದಿಂದ ನುಡಿದರು.

ರಾಷ್ಟ್ರೀಯ ಹೆದ್ದಾರಿ ಪೂರ್ಣಗೊಳಿಸಲು ಭೂಮಿ ಸ್ವಾಧೀನಪಡಿಸಿ ಕೊಡಿ: ಹಿಂದೆ ತಾವು ಕೇಂದ್ರ ಸಚಿವರಾಗಿದ್ದಾಗ ಸೋಲಾಪೂರ–ಅಕ್ಕಲಕೋಟ್–ಅಫಜಲಪೂರ–ಯಾದಗಿರಿ–ರಾಯಚೂರು ಮಾರ್ಗವಾಗಿ ಬೆಂಗಳೂರು ಮತ್ತು ಬೀದರ–ಕಲಬುರಗಿ–ಜೇವರ್ಗಿ–ಶಹಾಪುರ–ಸುರಪುರ–ಹಿರಿಯೂರು ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿ ಘೋಷಿಸಿದ್ದು, ಭೂಮಿ ಸ್ವಾಧೀನ ಸೇರಿದಂತೆ ಇತರೆ ಕಾರಣದಿಂದ ಇನ್ನು ಅದು ಪೂರ್ಣಗೊಂಡಿಲ್ಲ. ಈ ಕುರಿತು ಕೇಂದ್ರದ ರಸ್ತೆ ಅಭಿವೃದ್ಧಿ ಮತ್ತು ರಾಷ್ಟ್ರೀಯ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರೊಂದಿಗೆ ಚರ್ಚಿಸಿದ್ದು, ಜಮೀನು ಭೂಸ್ವಾದೀನ ಮಾಡಿಕೊಟ್ಟಲ್ಲಿ ರಸ್ತೆ ನಿರ್ಮಿಸಿ ಕೊಡುವೆ ಎಂದಿದ್ದಾರೆ. ಹೀಗಾಗಿ ರಾಜ್ಯ ಸರ್ಕಾರ ಕೂಡಲೆ ಇವರೆಡು ರಸ್ತೆ ಮಾರ್ಗದ ಭೂಮಿ ಸ್ವಾಧೀನಪಡಿಸಿಕೊಂಡು ರಸ್ತೆ ನಿರ್ಮಾಣಕ್ಕೆ ಅವಕಾಶ ಮಾಡಿಕೊಡಬೇಕೆಂದು ರಾಜ್ಯ ಸರ್ಕಾರಕ್ಕೆ ಸಲಹೆ ನೀಡಿದ್ದರು.

ಕಲ್ಯಾಣಕ್ಕೆ 5,000 ಕೋಟಿ ಶಪಥ: ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ 5,000 ಕೋಟಿ ರೂ. ನೀಡುವುದಾಗಿ ಚುನಾವಣೆ ಪೂರ್ವ ಭರವಸೆ ನೀಡಿದ್ದು, ನಾವು ಮಾಡಿದ ಶಪಥದಂತೆ 2024–25ರಲ್ಲಿ ಮತ್ತು ಶುಕ್ರವಾರ ಮಂಡಿಸಿದ ಆಯವ್ಯಯದಲ್ಲಿ 5,000 ಕೋಟಿ ರೂ. ಅನುದಾನ ಕೊಟ್ಟಿದ್ದೇವೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ಮಹಿಳಾ ಕೇಂದ್ರಿತವಾಗಿ ರಾಜ್ಯ ಸರ್ಕಾರ ಶಕ್ತಿ, ಗೃಹ ಲಕ್ಷ್ಮೀ, ಗೃಹ ಜ್ಯೋತಿ, ಅನ್ನ ಭಾಗ್ಯ ಹಾಗೂ ಯುವ ನಿಧಿ ಯೋಜನೆ ಜಾರಿಗೊಳಿಸಿದ್ದು, ಇದು ಮಹಿಳೆಯರಿಗೆ ಅರ್ಥಿಕ ಶಕ್ತಿ ತುಂಬಿದೆ. ಡಾ.ಮಲ್ಲಿಕಾರ್ಜುನ ಖರ್ಗೆ ಅವರ ಪರಿಶ್ರಮದಿಂದ ಈ ಭಾಗಕ್ಕೆ 371ಜೆ ಕಾಯ್ದೆ ಬಂದಿದ್ದು, ಪರಿಣಾಮ ಜಯದೇವ ಆಸ್ಪತ್ರೆ, ಕಿದ್ವಾಯಿ ಅಸ್ಪತ್ರೆ, ಸಿ.ಯು.ಕೆ. ಸ್ಥಾಪನೆ, ಇ.ಎಸ್.ಐ.ಸಿ ಹೀಗೆ ಅನೇಕ ಮೂಲಸೌ (2ನೇ ಪುಟ ನೋಡಿ)

# ಮಹಿಳೆಯರನ್ನು ಸ್ವಾವಲಂಬಿ ಮತ್ತು ಸ್ವಾಭಿಮಾನಿಗಳಾಗಿ
# ಮಾಡುವುದೇ ನಮ್ಮ ಸರ್ಕಾರದ ಮುಖ್ಯ ಗುರಿ



ಮಲ್ಲಮ್ಮನುಡಿ ವಾರ್ತೆ ಬೀದರ: ಮಾ.08: ಮಹಿಳೆಯರನ್ನು ಸ್ವಾವಲಂಬಿ ಮತ್ತು ಸ್ವಾಭಿಮಾನಿಗಳಾಗಿ ಮಾಡುವುದೇ ನಮ್ಮ ಸರ್ಕಾರದ ಮುಖ್ಯ ಗುರಿಯಾಗಿದೆ ಎಂದು ಸಚಿವ ಈಶ್ವರ ಖಂಡ್ರೆ ತಿಳಿಸಿದರು.

ಅವರು ಶನಿವಾರದಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬೀದರ ಅವರ ಸಂಯುಕ್ತಾಶ್ರಯದಲ್ಲಿ ನಗರದ ಪ್ರತಾಪ ನಗರದ ರಾಜ್ಯ ಸರಕಾರಿ ನೌಕರರ ಭವನದಲ್ಲಿ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸಾಮಾಜಿಕ, ರಾಜಕೀಯ, ಆರ್ಥಿಕ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಸಾಧನೆಯನ್ನು ಗುರುತಿಸಿ ಅವರಿಗೆ ಗೌರವ ಸಲ್ಲಿಸಲು ಪ್ರತಿ ವರ್ಷ ಮಾರ್ಚ್.8 ರಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಪ್ರಪಂಚದಾದ್ಯಂತ ಆಚರಿಸಲಾಗುತ್ತದೆ. ಮಹಿಳೆಯರ ಹಕ್ಕುಗಳು, ಸಮಾನತೆ ಮತ್ತು ಸಾಧನೆಗಳನ್ನು ತಿಳಿಸಲು 1975 ರಲ್ಲಿ ವಿಶ್ವಸಂಸ್ಥೆಯು ಮಾರ್ಚ್.8ನ್ನು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಎಂದು ಘೋಷಿಸಿತು. ಹೆಣ್ಣನ್ನು ದೇವರು ಎಂದು ಪೂಜಿಸುವ ದೇಶ ನಮ್ಮದು. ನಮ್ಮ ದೇಶ ಕೂಡ ತಾಯಿ ರೂಪದಲ್ಲಿ ಕಾಣುತ್ತೆವೆ, ಅದಕ್ಕೆ ಭಾರತಮಾತೆ ಎಂದು ಕರೆಯುತ್ತೇವೆ. ನಮ್ಮ ದೇಶದಲ್ಲಿ ಹರಿಯುವ ನದಿಗಳಿಗೂ ಕೂಡ ಹೆಣ್ಣಿನ ಹೆಸರಿನಿಂದ ಕರೆಯುತ್ತೇವೆ. ಹೆಣ್ಣಿಗೆ ಉನ್ನತ ಸ್ಥಾನಮಾನ ನೀಡುವ ದೇಶ ನಮ್ಮದಾಗಿದೆ. ನಾನು ಕೂಡ ಶಾಸಕನಾಗಿ, ಸಚಿವನಾಗಿ ಮತ್ತು ರಾಜಕೀಯವಾಗಿ ಬೆಳೆಯಲು ನನ್ನ ತಾಯಿಯ ಕೊಡುಗೆ ದೊಡ್ಡದಾಗಿದೆಂದರು.

ನಮ್ಮ ಸರ್ಕಾರ ಈ ವರ್ಷ ಪಂಚ ಗ್ಯಾರಂಟಿಗಾಗಿ 51000 ಕೋಟಿ ರೂ. ನೀಡಲಾಗಿದೆ. ಮಹಿಳೆಯರನ್ನು ಆರ್ಥಿಕ ಸಬಲೀಕರಣವನ್ನು ಹೆಚ್ಚಿಸಲು ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು 2000 ರೂ. ಗಳನ್ನು ನೀಡುವ (2ನೇ ಪುಟ ನೋಡಿ)

# ಮಹಿಳೆಯರಿಗೆ ಶೇ.33
# ಮೀಸಲು ಶತಸಿದ್ಧ:ಡಿ.ಕೆ.ಶಿವಕುಮಾರ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಮಾ.8:ಪಂಚಾಯತಿಯಿಂದ ಪಾರ್ಲಿಮೆಂಟ್‌ವರೆಗೂ ಹೆಣ್ಣು ಮಕ್ಕಳಿಗೆ ಮೀಸಲಾತಿ ಕಲ್ಪಿಸಿದೆ. ಮುಂದಿನ ದಿನದಲ್ಲಿ ವಿಧಾನಸಭೆ ಮತ್ತು ಲೋಕಸಭೆಯಲ್ಲಿ ಮಹಿಳೆಯರಿಗೆ ಶೇ.33 ಮೀಸಲಾತಿ ಸಿಗುವುದು ಶತಸಿದ್ಧ, ಅಧಿಕಾರ ಚಲಾಯಿಸಲು ನೀವು ಸಿದ್ಧರಾಗಿ ಎಂದು ರಾಜ್ಯದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಮಹಿಳೆಯರಿಗೆ ಕರೆ ನೀಡಿದರು.



ಶನಿವಾರ ಇಲ್ಲಿನ ಪಿ.ಡಿ.ಎ. ಕಾಲೇಜಿನ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕ ಇವರುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ "ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ" ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಮಹಿಳೆಯರ ಉನ್ನತಿಯನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ ಎಂದರು.

ಹೆಣ್ಣನ್ನು ತಾಯಿಗೆ ಮತ್ತು ಭೂಮಿ ತಾಯಿಗೆ ಹೋಲಿಸಿ ಗೌರವ ನೀಡುವ ಸಂಸ್ಕೃತಿ ನಮ್ಮದಾಗಿದೆ. ಹೆಣ್ಣು ಬೆಳೆದರೆ ಸಮಾಜ ಬೆಳೆಯುತ್ತದೆ ಎಂಬ ನಂಬಿಕೆಯಿಂದಲೆ ಮಹಿಳಾ ಕೇಂದ್ರಿತವಾಗಿ ಆರ್ಥಿಕ ಶಕ್ತಿ ತುಂಬುವ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ. ನುಡಿದಂತೆ ನಡೆದ ಸರ್ಕಾರ ನಮ್ಮದು ಎಂದ ಅವರು, ಹೆಣ್ಣು ಬೆಳೆದರೆ ಒಂದು ಕುಟುಂಬ ಬೆಳೆದಂತೆ ಎಂದರು. ಪೌಷ್ಟಿಕ ಅಹಾರ ಕಿಟ್ ವಿತರಣೆ: (2ನೇ ಪುಟ ನೋಡಿ)

# ಚಾಂಪಿಯನ್ ಪಟ್ಟಕ್ಕೆ ಭಾರತ ನ್ಯೂಜಿಲೆಂಡ್ ಫೈನಲ್ ಫೈಟ್




ಮಲ್ಲಮ್ಮ ನುಡಿ ವಾರ್ತೆ ದುಬೈ,ಮಾ.8– ಶತಕೋಟಿ ಭಾರತೀಯರು ಚಾತಕಪಕ್ಷಯಂತೆ ಎದುರು ನೋಡುತ್ತಿರುವ ಐಸಿಸಿ ಚಾಂಪಿಯನ್ಸ್ ಟ್ರೊಫಿ–2025 ಭಾರತ ಮತ್ತು ನ್ಯೂಜಿಲೆಂಡ್ ನಡುವಣ ಫೈನಲ್ ಪಂದ್ಯ ನಾಳೆ ನಡೆಯಲಿದೆ. ಎರಡು ತಂಡಗಳು ಪ್ರಶಸ್ತಿಗಾಗಿ ತೀವ್ರ ಪೈಪೋಟಿ ನಡೆಸಲಿದ್ದು, ಫೈನಲ್ ಪಂದ್ಯವು ನಾಳೆ ದುಬೈ ಅಂತಾರಾಷ್ಟ್ರಿಯ ಕ್ರಿಕೆಟ್ ಮೈದಾನದಲ್ಲಿ ನಡೆಯಲಿದೆ.

ಈ ಅಂತಿಮ ಪಂದ್ಯದಲ್ಲಿ ಭಾರತ ಗೆದ್ದು ಬರಲಿ ಎಂದು ಕ್ರಿ?ಡಾಭಿಮಾನಿಗಳು ದೇಶಾದ್ಯಂತ ಹೋಮ–ಹವನ ಪೂಜೆಪುನಸ್ಕಾರದಲ್ಲಿ ತೆ–ೂಡಗಿದ್ದಾರೆ. ವಿಶೇಷತೆ (2ನೇ ಪುಟ ನೋಡಿ)

# ಅಪ್ರಾಪ್ತ ಪ್ರೇಮಿಗಳು
# ನೇಣಿಗೆ ಬಲಿ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಮಾ.8: ಅಪ್ರಾಪ್ತ ವಯಸ್ಸಿನ ಪ್ರೇಮಿಗಳಿಬ್ಬರು ಜೊತೆಯಾಗಿ ಒಂದೇ ಹಗ್ಗ ಬಳಸಿ ನೇಣಿಗೆ ಶರಣಾದ ಘಟನೆ ಜಿಲ್ಲೆಯ ಯಡ್ರಾಮಿ ತಾಲೂಕಿನ ಮಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಮಾಳಪ್ಪ (16) ಹಾಗೂ ನಸೀಮಾ (16) ಒಂದೇ ಹಗ್ಗ ಬಳಸಿ ಎದುರುಬದುರಾಗಿ ಮರಕ್ಕೆ ನೇಣು ಹಾಕಿಕೊಂಡು ಆತ್ಮಹತ್ಯೆಗೆ ಶರಣಾದವರು ಎಂದು ಪೊಲೀಸರು ತಿಳಿಸಿದ್ದಾರೆ.

ಇಬ್ಬರೂ ಗ್ರಾಮದ ಶಾಲೆಯಲ್ಲಿ ಹತ್ತನೇ ತರಗತಿಯಲ್ಲಿ ಓದುತ್ತಿದ್ದರು. ಇಬ್ಬರ ಮಧ್ಯೆ ಪ್ರೀತಿ ಅಂಕುರಿಸಿತ್ತು.

ಆದರೆ ಉಭಯ ಕುಟುಂಬದ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿ ಬುದ್ಧಿವಾದ ಹೇಳಿದ್ದರು. ಇದರಿಂದ ಬೇಸತ್ತ ಇಬ್ಬರೂ ಗ್ರಾಮದ ಹೊರವಲಯದ ಮರವೊಂದಕ್ಕೆ ನೇಣು ಬಿಗಿದು–ಕೊಂಡು ಸಾವಿಗೀಡಾಗಿದ್ದಾರೆ.

ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಯಡ್ರಾಮಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕಾನೂನುಗಳನ್ನು ಅರಿತು ಸಮರ್ಥವಾಗಿ
# ಬಳಸಬೇಕು: ನ್ಯಾ.ಎಮ್.ಜಿ.ಉಮಾ

ರಾಯಚೂರು: ಮಾ.08: ಮಹಿಳೆಯರ ರಕ್ಷಣೆಗೆ ದೇಶದಲ್ಲಿ ಸಾಕಷ್ಟು ಕಾನೂನುಗಳಿದ್ದು, ಅವುಗಳನ್ನು ಮಹಿಳೆಯರು ಸರಿಯಾಗಿ ಅರ್ಥೈಸಿಕೊಳ್ಳಬೇಕು. ದೇಶದ ಬೆಳವಣಿಗೆಯಲ್ಲಿ ಭಾಗಿಯಾಗಬೇಕೆಂದು ಗೌರವಾನ್ವಿತ ಹೈಕೋರ್ಟ್ ನ್ಯಾಯಾಧೀಶರು ಆಗಿರುವ ರಾಯಚೂರ ಜಿಲ್ಲೆಯ ಆಡಳಿತಾತ್ಮಕ ನ್ಯಾಯಾಧೀಶರಾದ ಎಮ್.ಜಿ. ಉಮಾ ಅವರು ಹೇಳಿದರು.



ಮಾ08ರ ಶನಿವಾರ ದಂದು ನಗರದ ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ವಕೀಲರ ಸಂಘ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ನಡೆದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ರಾಷ್ಟ್ರೀಯ ಲೋಕ ಅದಾಲತ್ ಉದ್ಘಾಟನೆ ಸಮಾರಂಭಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪುರುಷಪ್ರಧಾನ ಸಮಾಜದಲ್ಲಿ ಹಿಂದಿನಿಂದಲೂ ಮಹಿಳೆಯರ ಮೇಲೆ ಒಂದಾಲ್ಲ ಒಂದು ರೀತಿಯಲ್ಲಿ ದೌರ್ಜನ್ಯಗಳು ನಡೆಯುತ್ತಲೇ ಇವೆ. ದೌರ್ಜನ್ಯದ ದಿನಗಳು

ಕೊನೆಯಾಗಬೇಕು. ಮಹಿಳೆಯರು ಹಾಗೂ ಮಹಿಳೆಯರ ಹಕ್ಕುಗಳ ರಕ್ಷಣೆಗಾಗಿ ದೇಶದಲ್ಲಿ ಕಾನೂನು ಜಾರಿಯಲ್ಲಿವೆ. ಈ ಕಾನೂನಗಳನ್ನು ತಿಳಿದು ಬಳಸಬೇಕು ಎಂದರು.

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಉದ್ದೇಶವನ್ನು ಮಹಿಳೆಯರು ಅರಿಯಬೇಕು. ಮಹಿಳೆಯನ್ನು ತಾಯಿ ಮತ್ತು ಭೂಮಿಗೆ ಹೋಲಿಕೆ ಮಾಡಲಾಗುತ್ತದೆ. ಇಂದು ಮಹಿಳೆಯರು ಎಲ್ಲಾ ಕ್ಷೇತ್ರದಲ್ಲಿ ಇದ್ದಾರೆ. ಮಹಿಳೆಯರು ಯಾವಾಗಲೂ ಕ್ರಿಯಾಶೀಲರಾಗಿ ವಿಶೇಷ (2ನೇ ಪುಟ ನೋಡಿ)

ಒಂದನೇ ಪುಟದಿಂದ

## ಅಭಿವೃದ್ಧಿಗೆ ಹೆಚ್ಚಿನ ಒತ್ತು ಕೊಡಿ, ಪ್ರೋಟೀನ್ ನೀಡಿ:ಡಾ.ಖರ್ಗೆ

ಕರ್ಯಗಳು ಪ್ರದೇಶದ ಅಭಿವೃದ್ಧಿಗೆ ಹೊಸ ಭಾಷೆ ಬರೆದಿದಲ್ಲದೆ ಇಲ್ಲಿನ ಜನರ ಆರ್ಥಿಕ ಸ್ವಾತಂತ್ರಕ್ಕೂ ಕಾರಣವಾಗಿದೆ ಎಂದ ಅವರು, ಯುದ್ದ ಮಾಡಿ ಗೆಲ್ಲುವನು ವೀರನಲ್ಲ, ಜನರ ಪ್ರೀತಿ ಗೆಲ್ಲಿಸುವ ವ್ಯಕ್ತಿನೇ ನಿಜವಾದ ವೀರ. ಡಾ.ಮಲ್ಲಿಕಾರ್ಜುನ ಖರ್ಗೆ ಅವರು ಇಲ್ಲಿನ ಜನರ ಪ್ರೀತಿ, ವಿಶ್ವಾಸಗಳಿಸಿರುವ ಜನನಾಯಕ ಎಂದರು.ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್ ಅವರು ಮಾತನಾಡಿ, ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಕಳೆದ 21 ತಿಂಗಳ ಅವಧಿಯಲ್ಲಿ 13,000 ಕೋಟಿ ರೂ.ಅನುದಾನ ಕೆ.ಕೆ.ಅರ್.ಡಿ.ಬಿ. ಮಂಡಳಿಗೆ ನೀಡಿದೆ. ಇದಲ್ಲದೆ ವಿವಿಧ ಇಲಾಖೆಗಳ ಮೂಲಕ ಪ್ರದೇಶದಲ್ಲಿ 20,000 ಕೋಟಿ ರೂ. ಖರ್ಚು ಮಾಡಿದೆ. ಪ್ರದೇಶದ ಅಭಿವೃದ್ಧಿಗೆ ನಮ್ಮ ಸರ್ಕಾರ ಕಟಿಬದ್ಧವಾಗಿದೆ ಎಂದರು.ಇಂದಿಲ್ಲಿ ಕೆ.ಕೆ.ಅರ್.ಡಿ.ಪಿ. ನೆರವಿನಿಂದ ಕಲ್ಯಾಣ ಪಥ ಯೋಜನೆಗೆ ಚಾಲನೆ ನೀಡಲಾಗುತ್ತಿದೆ. ಮಂಡಳಿಯಿಂದ ಈ ಭಾಗದಲ್ಲಿ ಅಕ್ಷರ, ಅರೋಗ್ಯ ಮತ್ತು ಉದ್ಯೋಗ ಆವಿಷ್ಕಾರದ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಯುವ ಜನತೆಗೆ ಕಲಿಕೆ ಜೊತೆ ಕೌಶಲ್ಯ ನೀಡಲಾಗುತ್ತಿದೆ. 873 ಕೋಟಿ ರೂ. ವೆಚ್ಚದಲ್ಲಿ ಆರೋಗ್ಯ ಸಂಸ್ಥೆಗಳ ಮುಲಸೌಕರ್ಯ ಬಲಪಡಿಸಲಾಗುತ್ತಿದೆ. ಅಲ್ಪಸಂಖ್ಯಾತರ ಅಭಿವೃದ್ಧಿಗೆ 358 ಕೋಟಿ ರೂ. ಮತ್ತು ಹಿಂದುಳಿದವರ ಕಲ್ಯಾಣಕ್ಕೆ 156 ಕೋಟಿ ರೂ. ಮಂಡಳಿ ವಿನಿಯೋಗಿಸಲಿದೆ. ಪ್ರದೇಶದಲ್ಲಿ ಘೋಷಿತ ನೂತನ ತಾಲೂಕುಗಳಲ್ಲಿ ಪ್ರಜಾ ಸೌಧ ನಿರ್ಮಿಸಲಾಗುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಐ.ಟಿ.–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವ ಡಾ. ಶರಣಪ್ರಕಾಶ ಪಾಟೀಲ, ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವ ಶರಣಬಸಪ್ಪ ದರ್ಶನಾಪೂರ, ಪೌರಾಡಳಿತ ಮತ್ತು ಹಜ್ ಸಚಿವ ರಹೀಮ್ ಖಾನ್, ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ, ಸಂಸದ ಸದಸ್ಯರಾದ ರಾಧಾಕೃಷ್ಣ ದೊಡ್ಡಮನಿ, ಸದಸ್ಯ ಸಾಗರ ಈಶ್ವರ ಖಂಡ್ರೆ, ಶಾಸಕರುಗಳಾದ ಎಂ.ವೈ.ಪಾಟೀಲ, ಶರಣು ಸಲಗರ, ಚೆನ್ನಾರೆಡ್ಡಿ ಪಾಟೀಲ ತುನ್ನೂರ್, ಅಲ್ಲಮಪ್ರಭು ಪಾಟೀಲ, ರಾಜಾ ವೇಣುಗೋಪಾಲ ನಾಯಕ, ಅಶೋಕ ಮನಗುಳಿ, ವಿಧಾನ ಪರಿಷತ್ ಶಾಸಕರುಗಳಾದ ತಿಪ್ಪಣ್ಣಪ್ಪ ಕಮಕನೂರ, ಭೀಮರಾವ ಬಿ. ಪಾಟೀಲ್, ಡಾ. ಎಂ.ಜಿ. ಮೂಳೆ, ಜಗದೇವ ಗುತ್ತೇದಾರ್ ಹಾಗೂ ಎ. ವಸಂತಕುಮಾರ್ ಇದ್ದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್, ಕೆ.ಕೆ.ಅರ್.ಡಿ.ಬಿ. ಮಂಡಳಿ ಕಾರ್ಯದರ್ಶಿ ಎಂ.ಸುಂದರೇಶ ಬಾಬು, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ ಸೇರಿದಂತೆ ಅನೇಕ ಹಿರಿಯ ಅಧಿಕಾರಿಗಳು ಇದ್ದರು.

## ನಮ್ಮ ಸರ್ಕಾರದ ಮುಖ್ಯ ಗುರಿ

ಗೃಹಲಕ್ಷ್ಮೀ ಯೋಜನೆಯನ್ನು ಜಾರಿಗೆ ತಂದಿದ್ದೇವೆ. ಮಹಿಳೆಯರನ್ನು ಉಚಿತವಾಗಿ ಸಂಚಾರಿಸಲು ಶಕ್ತಿ ಯೋಜನೆಯನ್ನು ಜಾರಿಗೆ ತಂದಿದ್ದೇವೆ. ಮಹಿಳೆಯರನ್ನು ಸ್ವಾವಲಂಬಿ ಮತ್ತು ಸ್ವಾಭಿಮಾನಿಗಳಾಗಿ ಜೀವನ ನಡೆಸಲು ನಮ್ಮ ಸರ್ಕಾರ ಯೋಜನೆಗಳು ಮತ್ತು ಕಾರ್ಯಕ್ರಮಗಳು ಹಮ್ಮಿಕೊಂಡಿದೆ. ನಿನ್ನೆ ಮಂಡಿಸಿದ ಬಜೆಟ್‌ನಲ್ಲಿ ಅಂಗನವಾಡಿ ಕಾರ್ಯಕತೆ–ಯರ ಗೌರವಧನವನ್ನು 1000 ರೂ. ಹಾಗೂ ಸಹಾಯಕಿಯರ ಗೌರವಧನವನ್ನು 750 ರೂ. ಹೆಚ್ಚಿಸಲಾಗಿದೆ ಎಂದು ತಿಳಿಸಿದರು.ಬೀದರ ದಕ್ಷಿಣ ಶಾಸಕರಾದ ಡಾ.ಶೈಲೇಂದ್ರ ಕೆ.ಬೆಲ್ದಾಳೆ ಅವರು ಮಾತನಾಡಿ, ಜಗತ್ತಿನಲ್ಲಿ ಬಹುತೇಕ ವಿಚಾರಗಳಿಗೆ ಒಂದೊಂದು ದಿನ ಮೀಸಲಿಟ್ಟಿರುವಂತೆ ಮಹಿಳೆಯರಿಗೂ ಕೂಡ ಒಂದು ವಿಶೇಷ ದಿನವನ್ನು ನಿಗದಿಪಡಿಸಲಾಗಿದೆ. ಅದೇ ವಿಶ್ವದಾದ್ಯಂತ ಆಚರಣೆ ಮಾಡುವ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ. ಒಬ್ಬ ವ್ಯಕ್ತಿಯ ಜೀವನದಲ್ಲಿ ಮಹಿಳೆಯ ಪಾತ್ರ ತುಂಬಾ ದೊಡ್ಡದಿರುತ್ತದೆ. ಆಕೆ ತಾಯಿಯಾಗಿ, ಸೋದರಿಯಾಗಿ, ಪತ್ನಿಯಾಗಿ ಬಾಳಿಗೆ ಬೆಳಕಾಗುತ್ತಾಳೆ. ವೈಯಕ್ತಿಕವಾಗಿ ಮನೆಯ ಅರ್ಧ ಜವಾಬ್ದಾರಿಯನ್ನು ಹೊರುವ ಜೊತೆಗೆ ಒಬ್ಬ ಶಿಕ್ಷಕಿಯಾಗಿ, ಇಂಜಿನಿಯರ್ ಆಗಿ, ಪೈಲೆಟ್ ಆಗಿ ಕೂಡ ತನ್ನ ಕೆಲಸ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿಭಾಯಿಸುತ್ತಾಳೆ. ಸಮಾಜದ ಕಟ್ಟುಪಾಡುಗಳ ಹೊರತಾಗಿಯೂ ಕೂಡ ಈಗಿನ ಆಧುನಿಕ ದಿನಗಳಲ್ಲಿ ಆಕೆ ಸಾಧನೆಯ ಶಿಖರವನ್ನು ಮುಟ್ಟುತ್ತಿದ್ದಾಳೆ. ಹಾಗಾಗಿ ವಿಶ್ವದಾದ್ಯಂತ ಮಹಿಳೆಯರಿಗಾಗಿ ಗೌರವಾನ್ವಿತವಾಗಿ ಈ ಒಂದು ದಿನವನ್ನು "ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ" ಯನ್ನಾಗಿ ಆಚರಿಸುವ ಮೂಲಕ ಮೀಸಲಿಡಲಾಗಿದೆಂದರು.ಸಮಾನತೆಯ ಜೊತೆಗೆ ಒಗ್ಗಟ್ಟಿನಲ್ಲಿ ಸಹ ಮಹಿಳೆಯರು ಸದಾ ಮುಂದಿರುವುದು ದೇಶದ ಆರ್ಥಿಕ ಅಭಿವೃದ್ಧಿಗೆ ಸಾಕಷ್ಟು ಅನುಕೂಲವಾಗಲಿದೆ. ಪ್ರತಿ ವರ್ಷ ಮಾರ್ಚ್ 8ರಂದು ಅಂತರರಾಷ್ಟ್ರೀಯ ಮಹಿಳೆಯರ ದಿನವನ್ನಾಗಿ ಆಚರಣೆ ಮಾಡಲಾಗುತ್ತದೆ. ಮಹಿಳೆಯರ ಸಾಧನೆಗೆ ಮನಃಪೂರ್ವಕ ಗೌರವ ಸೂಚಿಸುವ ದಿನ ಇದಾಗಿದೆ. ಕೇಂದ್ರ ಸರ್ಕಾರದಿಂದ ದೊರೆಯುವ ಸುಕನ್ಯಾ ಸಮೃದ್ಧಿ ಯೋಜನೆ, ಬೇಟಿ ಬಚಾವೋ ಬೇಟಿ ಬಚಾವೋ ಯೋಜನೆ, ಪ್ರಧಾನ ಮಂತ್ರಿ ಮಾತೃ ವಂದನ ಸೇರಿದಂತೆ ವಿವಿಧ ಯೋಜನೆಗಳನ್ನು ಜಾರಿಗೆ ತಂದು ದೇಶದ ಯುವತಿಯರಿಗೆ, ಮಹಿಳೆಯರಿಗೆ ಪ್ರೋತ್ಸಾಹಿಸಲಾಗುತ್ತಿದೆ ಎಲ್ಲರೂ ಸೌಲಭ್ಯಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಮಾತನಾಡಿ, ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬನೆಯಾಗಿರಬೇಕು, ಪ್ರತಿ ಹಂತದಲ್ಲೂ ಮಹಿಳೆ ಪುರುಷನಷ್ಟೇ ಸಮಾನಳಾಗಿದ್ದಾಳೆ. ಎಲ್ಲಾ ಕ್ಷೇತ್ರಗಳಲ್ಲೂ ಮಹಿಳೆಯರು ಸಾಧನೆ ಮಾಡಿದ್ದಾರೆ ಎಂದು ಹೇಳಿದರು.ಈ ಕಾರ್ಯಕ್ರಮದಲ್ಲಿ 2024–25 ನೇ ಸಾಲಿನ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಅಸಾಧಾರಣ ಪ್ರತಿಭೆಯುಳ್ಳ ಮಕ್ಕಳಿಗೆ ಜಿಲ್ಲಾ ಮಟ್ಟದ ಪ್ರಶಸ್ತಿಯನ್ನು ನೀಡಲಾಯಿತು. ಅದೇ ರೀತಿ ಉತ್ತಮ ಅಂಗನವಾಡಿ ಕಾರ್ಯಕರ್ತೆ ಪ್ರಶಸ್ತಿ ಮತ್ತು ಹೊಸದಾಗಿ ಆಯ್ಕೆಯಾದ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಹುದ್ದೆಗೆ ನೇಮಕವಾಗಿರುವರಿಗೆ ನೇಮಕಾತಿ ಆಯ್ಕೆ ಪತ್ರವನ್ನು ನೀಡಲಾಯಿತು.ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷರಾದ ಮಹಮ್ಮದ ಗೌಸ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಬೀದರ ವಿಶ್ವವಿದ್ಯಾಲಯದ ಕುಲಸಚಿವರಾದ ಸುರೇಖಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಶ್ರೀಧರ ಎಮ್.ಎಚ್., ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಗುರುರಾಜ ಸೇರಿದಂತೆ ವಿವಿಧ ಇಲಾಖೆಯ ಮಹಿಳಾ ಅಧಿಕಾರಿಗಳು ಉಪಸ್ಥಿತರಿದ್ದರು.

## ಮೀಸಲು ಶತಸಿದ್ಧ:ಡಿ.ಕೆ.ಶಿವಕುಮಾರ

ಕಾರ್ಯಕ್ರಮದಲ್ಲಿ ನೀತಿ ಅಯೋಗದ ಮಹತ್ವಕಾಂಕ್ಷೆ ತಾಲೂಕುಗಳಾದ ಶಾಹಾಬಾದ, ಕಾಳಗಿ ಹಾಗೂ ಅಫಜಲಪುರ ತಾಲೂಕಿನಲ್ಲಿ ಮೊದಲನೇ ಮಗುವಿನ ನಿರೀಕ್ಷೆಯಲ್ಲಿರುವ 18–35 ವಯಸ್ಸಿನ 1,257 ಮಹಿಳೆಯರಿಗೆ ಆರೋಗ್ಯ ಪುಷ್ಠಿ ಯೋಜನೆಯಡಿ ಪೌಷ್ಟಿಕ ಅಹಾರ ಒದಗಿಸುವ ಕಿಟ್ ವಿತರಿಸಲಾಯಿತು. 120 ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಗೆ ಆದೇಶ ಪತ್ರ ಮತ್ತು ಗೃಹಲಕ್ಷ್ಮೀ ಯೋಜನೆಯಡಿ ನೂತನವಾಗಿ ನೊಂದಣಿ ಮಾಡಿಕೊಂಡ ಮಹಿಳೆಯರಿಗೆ ಚೆಕ್‌ಗಳನ್ನು ಮತ್ತು 4,944 ಮಕ್ಕಳಿಗೆ ಸುಕನ್ಯಾ ಸಮೃದ್ಧಿ ಯೋಜನೆಯಡಿ ಬ್ಯಾಂಕ್ ಪಾಸ್ ಬುಕ್ ಗಳನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಮತ್ತು ಸಚಿವ ಪ್ರಿಯಾಂಕ್ ಖರ್ಗೆ ಅವರು ಫಲಾನುಭವಿಗಳಿಗೆ ವಿತರಿಸಿದರು.ಮಹಿಳೆಯರಿಗೆ ಸನ್ಮಾನ: ಮಹಿಳಾ ದಿನಾಚರಣೆ ಅಂಗವಾಗಿ ವಿಶೇಷ ಚೇತನರಾಗಿದ್ದು, ಸಾಹಿತ್ಯ ಕ್ಷೇತ್ರದಲ್ಲಿ ಹಾಗೂ ಗೃಹ ಉಪಯೋಗಿ ವಸ್ತುಗಳು ತಯಾರಿಸಿ, ಆದಾಯೋತ್ಪನ್ನ ಚಟುವಟಿಕೆಯಲ್ಲಿ ಸಾಧನೆಗೈದ ಕುಮಾರಿ ನೀತಾ ಡಿ. ಕಾಬಾ, ಎರೆಹುಳು ಗೊಬ್ಬರದ ಘಟಕವನ್ನು ಪ್ರಾರಂಭಿಸಿ ಉತ್ತಮ ಇಳುವರಿಯನ್ನು ಪಡೆದು ಆರ್ಥಿಕವಾಗಿ ಸಬಲರಾಗಿ ಎಲ್ಲಾ ಮಹಿಳೆಯರಿಗೂ ಮಾದರಿಯಾಗಿದ್ದಕ್ಕಾಗಿ ಚಿತ್ತಾಪುರ ತಾಲೂಕಿನ ಗೋಟುರ್ ಗ್ರಾಮದ ಮಲ್ಲಿಗೆ ಹೂ ಸ್ತ್ರೀಶಕ್ತಿ ಸಂಘದ ಸದಸ್ಯರಾದ ರೈತ ಮಹಿಳೆ ಶಶಿಕಲಾ ಹನುಮಂತರಾವ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ್ದಕ್ಕಾಗಿ ಅಂಗನವಾಡಿ ಕಾರ್ಯಕರ್ತೆ ಶರಣಮ್ಮ, ಅಂಗನವಾಡಿ ಸಹಾಯಕಿ ಶಕುಂತಲಾ ಹೊಸಮನಿ ಹಾಗೂ ಅಂಗನವಾಡಿ ಮೇಲ್ವಿಚಾರಕಿ ಕವಿತಾ ಪಾಟೀಲ್ ಅವರಿಗೆ ಗೌರವಿಸಿ ಸನ್ಮಾನಿಸಲಾಯಿತು.ಶಾಸಕ ಅಲ್ಲಮಪ್ರಭು ಪಾಟೀಲ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಪೌರಾಡಳಿತ ಮತ್ತು ಹಜ್ ಖಾತೆ ಸಚಿವ ರಹೀಂ ಖಾನ್, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್, ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ, ಅಫಜಲಪುರ ಶಾಸಕ ಎಂ.ವೈ. ಪಾಟೀಲ, ಕರ್ನಾಟಕ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್, ವಿಧಾನ ಪರಿಷತ್ ಶಾಸಕರುಗಳಾದ ಶಶೀಲ ಜಿ. ನಮೋಶಿ, ತಿಮ್ಮಣ್ಣಪ್ಪ ಕಮಕನೂರ, ಡಿ.ಸಿ. ಬಿ.ಫೌಜಿಯಾ ತರನ್ನುಮ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾಜಕುಮಾರ ರಾಠೋಡ ಇದ್ದರು.ಮಹಿಪಾಲರೆಡ್ಡಿ ಮುನ್ನೂರು ನಿರೂಪಿಸಿದರು. ಶಶಿಕಲಾ ಡೆಂಗಿ ವಂದಿಸಿದರು.

## ಭಾರತ ನ್ಯೂಜಿಲೆಂಡ್ ಫೈನಲ್ ಫೈಟ್

ಎಂದರೆ ಉಭಯ ತಂಡಗಳು 25 ವರ್ಷಗಳ ಬಳಿಕ ಐಸಿಸಿ ಚಾಂಪಿಯನ್?? ಟ್ರೊ?ಫಿ ಫೈನಲ್ನಲ್ಲಿ ಎದುರಾಗುತ್ತಿರುವುದು. ಅಜೇಯವಾಗಿ ಫೈನಲ್ ಪ್ರವೇಶಿಸಿರುವ ರೋಹಿತ್ ಶರ್ಮ ಪಡೆ ಕಪ್ ಗೆಲ್ಲುವ ನೆಚ್ಚಿನ ತಂಡವಾಗಿ ಗೋಚರಿಸಿದರಾದರೂ ಇತಿಹಾಸವನ್ನೊಮ್ಮೆ ಕೆದಕಿದರೆ ಐಸಿಸಿ ಪ್ರಶಸ್ತಿ ಸುತ್ತಿನಲ್ಲಿ ಕೀಸ್ ವಿರುದ್ಧ ಭಾರತ ಇದುವರೆಗೂ ಗೆದ್ದಿಲ್ಲ.ಹಾಲಿ ಚಾಂಪಿಯನ್ ಆಗಿದ್ದ ಭಾರತ ತಂಡ 2017ರ ಆವೃತ್ತಿಯಲ್ಲಿಯೂ ಫೈನಲ್ ಪ್ರವೇಶಿಸಿತ್ತು. ಆದರೆ ರನ್ನರ್ ಅಪ್ ಸ್ಥಾನಕ್ಕೆ ತೃಪ್ತಿಪಟ್ಟಿತ್ತು. ಲೀಗ್ ಹಂತದಲ್ಲಿ ಪಾಕಿಸ್ತಾನಕ್ಕೆ 8 ವಿಕೆಟ್ ಸೋಲುಣಿಸಿದ್ದ ಭಾರತ ಫೈನಲ್ನಲ್ಲಿ ಶರಣಾಯಿತು. ಅದು ಕೂಡ 180 ರನ್ ಅಂತರದ ಸೋಲು! ವಿರಾಟ್ ಕೊಹ್ಲಿ ಭಾರತ ತಂಡದ ನಾಯಕನಾಗಿದ್ದರು. ದಕ್ಷಿಣ ಆಫ್ರಿಕಾ ವಿರುದ್ಧ ನಡೆದ ಸೆಮಿಫೈನಲ್ ಪಂದ್ಯದ ವೇಳೆ ಹೆನ್ರಿ ಗಾಯಗೊಂಡಿದ್ದರು. ಆದಾಗ್ಯೂ ನ್ಯೂಜಿಲೆಂಡ್ ಆ ಪಂದ್ಯವನ್ನು 50 ರನ್ಗಳಿಂದ ಗೆದ್ದು ಫೈನಲ್ ಪ್ರವೇಶಿಸಿತ್ತು.

ನ್ಯೂಜಿಲೆಂಡ್ ಗೆ ಆರಂಭದಲ್ಲೆ ಆಘಾತ!2025ರ ಐಸಿಸಿ ಚಾಂಪಿಯನ್ ಟ್ರೊಫಿ ಫೈನಲ್ ಪಂದ್ಯಕ್ಕೆ ಮುನ್ನ ನ್ಯೂಜಿಲೆಂಡ್ ತಂಡಕ್ಕೆ ಆಘಾತ ಎದುರಾಗಿದ್ದು, ಪ್ರಮುಖ ವೇಗಿ ಮ್ಯಾಟ್ ಹೆನ್ರಿ ಭುಜದ ಗಾಯದಿಂದಾಗಿ ಫೈನಲ್ನಲ್ಲಿ ಆಡುವುದು ಅನುಮಾನ ಎನ್ನಲಾಗಿದೆ.ಹೆನ್ರಿ ಮೈದಾನದಲ್ಲಿ ಬಿದ್ದಾಗ ಅವರ ಭುಜಕ್ಕೆ ಪೆಟಾಗಿತ್ತು. ನಂತರ ಅವರು ಸ್ವಲ್ಪ ಅಸ್ವಸ್ಥರಾಗಿದ್ದರು. ಆದರೆ ಅವರು ಮತ್ತೆ ಬೌಲಿಂಗ್ ಮಾಡಲು ಮರಳಿದ್ದು ನಮಗೆ ಸಂತಸ ತಂದಿದೆ ಎಂದು ನ್ಯೂಜಿಲೆಂಡ್ ಮುಖ್ಯ ಕೋಚ್ ಗ್ಯಾರಿ ಸ್ಟಿ?ಡ್ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದರು.

## ಬಳಸಬೇಕು: ನ್ಯಾ.ಎಮ್.ಜಿ.ಉಮಾ

ಸಾಧನೆಗಳನ್ನು ಮಾಡಬೇಕು ಎಂದು ಹೇಳಿದರು.ಒಬ್ಬ ವ್ಯಕ್ತಿಯ ಜೀವನದಲ್ಲಿ ಮಹಿಳೆಯ ಪಾತ್ರ ತುಂಬಾ ದೊಡ್ಡದಿರುತ್ತದೆ. ತಾಯಿಯಾಗಿ, ಸೋದರಿಯಾಗಿ, ಪತ್ನಿಯಾಗಿ ಮಹಿಳೆಯರು ಬಾಳಿನಲ್ಲಿ ಬೆಳಕಾಗುತ್ತಾರೆ ಎಂದರು.ವೈಯಕ್ತಿಕವಾಗಿ ಮನೆಯ ಅರ್ಧ ಜವಾಬ್ದಾರಿಯನ್ನು ಹೊರುವ ಜೊತೆಗೆ ಒಬ್ಬ ಶಿಕ್ಷಕಿಯಾಗಿ, ಎಂಜಿನಿಯರ್ ಆಗಿ, ಪೈಲೆಟ್ ಆಗಿ ಕೂಡ ತನ್ನ ಕೆಲಸ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿಭಾಯಿಸುತ್ತಾಳೆ. ಸಮಾಜದ ಕಟ್ಟುಪಾಡುಗಳ ಹೊರತಾಗಿಯೂ ಕೂಡ ಈಗಿನ ಆಧುನಿಕ ದಿನಗಳಲ್ಲಿ ಮಹಿಳೆಯರು ಸಾಧನೆಯ ಶಿಖರವನ್ನು ಮುಟ್ಟುತ್ತಿದ್ದಾರೆ ಎಂದರು.ರಾಯಚೂರಿನ ಜಿಲ್ಲಾ ನ್ಯಾಯಾಲಯಕ್ಕೆ ಬಹಳ ದಿನದ ಇತಿಹಾಸವಿದೆ. ಇತಿಹಾಸವನ್ನು ಅರಿತು ಮಹಿಳಾ ನ್ಯಾಯವಾದಿಗಳು ಉತ್ತಮ ಕಾರ್ಯನಿರ್ವಹಣೆ ಮಾಡಬೇಕು. ಅವಕಾಶಗಳು ಸಿಕ್ಕಾಗ ಅವುಗಳನ್ನು ಸರಿಯಾಗಿ ಬಳಸಿಕೊಳ್ಳಬೇಕು. ಮಹಿಳೆಯರು ಮೊದಲು ಸ್ಪಷ್ಟ ಗುರಿಗಳನ್ನು ಹೊಂದಬೇಕೆಂದು ಸಲಹೆ ನೀಡಿದರು.ಲೋಕ ಅದಾಲತ್‌ನಲ್ಲಿ ಕಕ್ಷಿದಾರರಿಗೆ ನ್ಯಾಯವನ್ನು ಒದಗಿಸಬೇಕು. ನ್ಯಾಯಾಲಯದೊಂದಿಗೆ ನ್ಯಾಯವಾದಿಗಳು ಮುತುವರ್ಜಿ ವಹಿಸಿ ಪ್ರಕರಣಗಳನ್ನು ಹೆಚ್ಚಿನ ಮಟ್ಟದಲ್ಲಿ ಇತ್ಯರ್ಥಪಡಿಸಬೇಕು ಎಂದರು.ಈ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಮಹಿಳೆಯರಿಗೆ ಪ್ರೇರಣೆಯಾಗಬೇಕು. ಸಮಾಜಕ್ಕೆ ಉತ್ತಮ ವ್ಯಕ್ತಿಗಳನ್ನು ಮಹಿಳೆಯರು ನೀಡಬೇಕು. ಕುಟುಂಬದ ಸದಸ್ಯರ ಸಾಧನೆಯನ್ನು ಗುರುತಿಸಲು ಮಹಿಳೆಯರು ಶ್ರಮಿಸಬೇಕೆಂದು ಹೇಳಿದರು.ಈ ವೇಳೆ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾ.ಮಾರುತಿ ಎಸ್.ಬಾಗಡೆ ಅವರು ಮಾತನಾಡಿ, ಸಮಾಜದ ಎಲ್ಲಾ ಕ್ಷೇತ್ರಗಳಲ್ಲೂ ಮಹಿಳೆಯರು ಕಾಲಿಟ್ಟಿದ್ದು, ಅವರ ಸಾಧನೆಯು ಮೆಚ್ಚುವಂತದ್ದಾಗಿದೆ. ಮಹಿಳೆಯರು ಇನ್ನೂ ಹೊಸ ಹೊಸ ಕ್ಷೇತ್ರದಲ್ಲಿ ಮುಂದೆ ಬರಬೇಕು. ಮಹಿಳಾ ನ್ಯಾಯವಾದಿಗಳು ಅಧ್ಯಯನಶೀಲರಾಗಬೇಕು ಎಂದರು.ಈ ವೇಳೆ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಕೇಕ್ ಕತ್ತರಿಸುವ ಮೂಲಕ ಪರಸ್ಪರ ಶುಭಾಶಗಳನ್ನು ವಿನಿಮಯ ಮಾಡಲಾಯಿತು.ಇದೇ ಸಂದರ್ಭದಲ್ಲಿ ಕುಟುಂಬ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಶ್ರೀಕಾಂತ್ ಎಸ್.ವಿ., 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹತ್ತಿಕಾಳ್ ಪ್ರಭು ಸಿದ್ದಪ್ಪ, ಪ್ರಧಾನ ಹಿರಿಯ ವ್ಯವಹಾರ ನ್ಯಾಯಾಧೀಶರಾದ ಸಿದ್ದರಾಮಪ್ಪ ಕಲ್ಯಾಣರಾವ್, ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್, ಅಪರ ಹಿರಿಯ ವ್ಯವಹಾರ ನ್ಯಾಯಾಧೀಶರಾದ ಸುದೀನ್ ಕುಮಾರ್ ಡಿ.ಜೆ., 2ನೇ ಹೆಚ್ಚುವರಿ ಹಿರಿಯ ಶ್ರೇಣಿ ವ್ಯವಹಾರ ನ್ಯಾಯಾಧೀಶರಾದ ಶ್ವೇತಾ ಸಿಂಗ್, 3ನೇ ಅಪರ ಹಿರಿಯ ವ್ಯವಹಾರ ನ್ಯಾಯಾಧೀಶರಾದ ಅನೀಲ್ ಶೇಖಣ್ಣನವರ್, ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರಾದ ಹುಲಗಪ್ಪ ಡಿ., ವಕೀಲರ ಸಂಘದ ಜಿಲ್ಲಾಧ್ಯಕ್ಷರಾದ ಮಲ್ಲಿಕಾರ್ಜುನ ಸೇರಿದಂತೆ ಇತರರು ಇದ್ದರು.

# ಸಿದ್ದೇಶ್ವರದ ಸಿದ್ಧಲಿಂಗೇಶ್ವರ

## ಪ್ರೌಢಶಾಲೆಯಲ್ಲಿ ಶಾಲಾ ವಾರ್ಷಿಕೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.8:ಮಕ್ಕಳು ಅಧ್ಯಯನದೊಂದಿಗೆ ಕಾಯಕ ಮಾಡುವ ಪ್ರವೃತ್ತಿ ಬೆಳೆಸಿಕೊಂಡು ಸ್ವಾವಲಂಬಿ ಬದುಕು ಸಾಗಿಸುವ ಸಾಮರ್ಥ್ಯ ವೃದ್ಧಿಸಿಕೊಳ್ಳಬೇಕು ಎಂದು ಭಾಲ್ಕಿಯ ಎಮ್.ಆರ್.ಎ.ಸ್ವತಂತ್ರ ಪದವಿ ಪೂರ್ವ ಕಾಲೇಜಿನ ನಿವೃತ್ತ ಪ್ರಾಚಾರ್ಯ ಅಶೋಕ ರಾಜೋಳೆ ಸಲಹೆ ನೀಡಿದರು.

ತಾಲೂಕಿನ ಸಿದ್ದೇಶ್ವರ ಗ್ರಾಮದ ಸಿದ್ಧಲಿಂಗೇಶ್ವರ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡ 2024–25ನೇ ಸಾಲಿನ ಶಾಲಾ ವಾರ್ಷಿಕೋತ್ಸವ ಮತ್ತು 10ನೇ ವಿದ್ಯಾರ್ಥಿಗಳ ಬೀಳ್ಕೊಡುಗೆ ಹಾಗೂ ವಯೋ ನಿವೃತ್ತ ಸಿಬ್ಬಂದಿಯವರ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಇತೀಚಿನ ಮಕ್ಕಳು ಕೌಶಲ್ಯಾಧರಿತ ವೃತ್ತಿ ಕಲಿಯುವುದು ಅಗತ್ಯವಾಗಿದೆ. ಗ್ರಾಮೀಣ ಮಕ್ಕಳಲ್ಲಿ ಪ್ರತಿಭೆಯ ಕೊರತೆಯಿಲ್ಲ.ಕೋರ್ಸ್ ಆಯ್ಕೆ ಕುರಿತು ಪಾಲಕರು ಮಕ್ಕಳ ಮೇಲೆ ಒತ್ತಡ ಹಾಕಿ ಅವರ ಭವಿಷ್ಯದ ಜೀವನ ಕಷ್ಟದಲ್ಲಿ ನೂಕಬೇಡಿ.ಸಿದ್ಧಲಿಂಗೇಶ್ವರ ಪ್ರೌಢಶಾಲೆಯಲ್ಲಿ ನುರಿತ ಶಿಕ್ಷಕ ವೃಂದ್ಧದಿಂದ ಗುಣಮಟ್ಟದ ಶಿಕ್ಷಣ ನೀಡುತ್ತಿರುವುದು ಶ್ಲಾಘನಿಯವಾಗಿದೆ ಎಂದರು.

ಸಿಆರ್‌ಪಿ ಲಿಂಗರಾಜ ಮಾತನಾಡಿ,ಗುರು,ತಂದೆ–ತಾಯಿ,ವಿದ್ಯೆ,ಮಳೆ,ಹಣ,ಹೆಣ್ಣು ಎಂಬ ಎರಡಕ್ಷರ ಮತ್ತು ನಗುವಿನ ಪ್ರಾಮುಖ್ಯತೆ ತಿಳಿಸಿ ಮಕ್ಕಳನ್ನು ನಗೆಗಡಲಲ್ಲಿ ಮುಳುಗಿಸಿದರು.

ನಿವೃತ್ತ ಶಿಕ್ಷಕಿ ನಿರ್ಮಲಾ ಕೊಳ್ಳಾ ಮಾತನಾಡಿ,ವಿದ್ಯೆ ಕಲಿತವರಿಗೆ ನೂರಾರು ಬಾಗಿಲು ತೆರೆದಿರುತ್ತವೆ ಎಂದು ಹೇಳಿದರು.ನಿವೃತ್ತ ಮುಖ್ಯಗುರು ಸುಭಾಷ ಎಲಶೆಟ್ಟೆಯವರು ವಿದ್ಯಾರ್ಥಿಗಳು ದುಶ್ಚಟ,ದುರ್ಗುಣಗಳಿಂದ ದೂರ ಉಳಿದರೆ ಹೆತ್ತವರ ಕನಸು ನನಸಾಗಿಸಲು ಸಾಧ್ಯ ಎಂದರು.

ಶೌಚಾಲಯ ಉದ್ಘಾಟನೆ: ಇದೇ ಸಂದರ್ಭದಲ್ಲಿ ಆಡಳಿತ ಮಂಡಳಿ ಮತ್ತು ಸಿಬ್ಬಂದಿಯವರ ನೆರವಿನಿಂದ ನಿರ್ಮಾಣಗೊಂಡ ಶೌಚಾಲಯ ಕಟ್ಟಡ ಸಂಸ್ಥೆ ಅಧ್ಯಕ್ಷ ನರಸಿಂಗ ಕಾಳೆ ಉದ್ಘಾಟಿಸಿದರು.

ಮುಖ್ಯಗುರು ಸುರೇಶ ಪ್ರಭಾ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸನ್ಮಾನ:ಇದೇ ಸಂದರ್ಭದಲ್ಲಿ ವಯೋನಿವೃತ್ತರಾದ ಮುಖ್ಯಗುರು ಸುಭಾಷ ಎಲಶೆಟ್ಟೆ,ಚಂದ್ರಕಾಂತ ಸ್ವಾಮಿ,ಭಾಗಮ್ಮಾ ದಂಪತಿಗಳಿಗೆ ಸನ್ಮಾನಿಸಿ,ಗೌರವಿಸಲಾಯಿತು.

ಪ್ರೌಢಶಾಲಾ ಮಕ್ಕಳಿಂದ ನಡೆದ ಕೋಲಾಟ,ನೃತ್ಯ ಸಭಿಕರ ಗಮನ ಸೆಳೆಯಿತು.

ಸಮಾರಂಭದಲ್ಲಿ ಸ.ಹಿ.ಪ್ರಾ.ಶಾಲೆ ಮುಖ್ಯಗುರು ಜಗನ್ನಾಥ ಪನಶೆಟ್ಟೆ,ಹುಲೆಪ್ಪ ಕುಪ್ಪೆ,ಶಾಲಿವಾನ ಕೊಳ್ಳಾ,ರತ್ನದೀಪ ಬಿರಾದಾರ,ಜೈಶ್ರೀ ಅತಿವಾಳ,ನುಸರತ ಅಂಜುಮ,ವೀರಶೆಟ್ಟಿ ಕಾಂಜೋಳಗೆ,ಸುವರ್ಣ ಹಾಸೆ ಸೇರಿದಂತೆ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮಹಿಳೆಯರಿಗೆ ಸಾಮಾಜಿಕ,ಆರ್ಥಿಕ ಮತ್ತು ರಾಜಕೀಯ ಸಬಲೀಕರಣದ ಅಗತ್ಯ : ಪ್ರೊ ಯಶವಂತರಾಯ ಅಷ್ಠಗಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮಾ.8: ದಿನವಿಡಿ ವಿಶ್ರಾಂತಿ ಇಲ್ಲದೇ ದುಡಿದರೂ ಮಹಿಳೆ ಯಾವತ್ತೂ ಸಹನೆ ಕಳೆದುಕೊಳ್ಳದೆ ಸಂಸಾರದ ಭಾರವನ್ನು ಸರಿದೂಗಿಸುತ್ತಾಳೆ ಆದ್ದರಿಂದ ಮಹಿಳೆಯರಿಗೆ ಸಾಮಾಜಿಕ ಆರ್ಥಿಕ ಮತ್ತು ರಾಜಕೀಯ ಸಬಲೀಕರಣದ ಅಗತ್ಯವಿದೆ ಎಂದು ಕೃಷಿ ಶ್ರೀ ಪ್ರಶಸ್ತಿ ಪುರಸ್ಕೃತ ಲೇಖಕ ಪ್ರೊ ಯಶವಂತರಾಯ ಅಷ್ಠಗಿ ಅಭಿಪ್ರಾಯಪಟ್ಟರು.ನಗರದ ಅಕ್ಕಮಹಾದೇವಿ ವಿದ್ಯಾವರ್ಧಕ ಸಂಘದ ವೃದ್ಧಾಶ್ರಮದಲ್ಲಿ ಕರ್ನಾಟಕ ಸಮತಾ ಸೈನಿಕ ದಳ ಜಿಲ್ಲಾ ಘಟಕ, ಸಮತಾ ಸೈನಿಕ ದಳದ ಮಹಿಳಾ ಘಟಕ ಹಾಗೂ ಹಾಗೂ ಕು. ಅಕ್ಷತಾ ಈರಣ್ಣ ಜಾನೆ ಗ್ರೂಪ್ ವತಿಯಿಂದ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿ ಮಾತನಾಡಿದರು.ಮುಂದುವರೆದು ಮಾತನಾಡಿದ ಅವರು, ಮಾತೆ ರಮಾಬಾಯಿ ಅಂಬೇಡ್ಕರ್ ಹಾಗೂ ಅಕ್ಷರದವ್ವ ಸಾವಿತ್ರಿಬಾಯಿ ಫುಲೆ, ಕಿತ್ತೂರು ರಾಣಿ ಚೆನ್ನಮ್ಮ ಸೇರಿದಂತೆ ಅನೇಕ ವೀರ ಮಹಿಳೆಯರು ದೇಶಕ್ಕೆ ನೀಡಿದ ಅಪಾರ ಕೊಡುಗೆ ಮತ್ತು ಉದಾತ್ತ ಮೌಲ್ಯಗಳ ಕುರಿತು ಹೆಚ್ಚಿನ ಮಾಹಿತಿ ನೀಡಿದರು.

ಎಚ್ ಕೆ ಇ ಸಂಸ್ಥೆ ಆಡಳಿತ ಮಂಡಳಿ ಸದಸ್ಯ ಡಾ ಶರಣಪ್ಪ ಗಿರಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.ಸಮತಾ



ಸೈನಿಕ ದಳದ ವಿಭಾಗೀಯ ಅಧ್ಯಕ್ಷ, ಸಂಜೀವ ಟಿ ಮಾಲೆ ಹಾಗೂ ಜಿಲ್ಲಾಧ್ಯಕ್ಷ ಈರಣ್ಣ ಜಾನೆ ಮಾತನಾಡಿ,ಆಧುನಿಕ ಸಮಾಜದಲ್ಲಿ ಮಹಿಳೆ ಪುರುಷನಷ್ಟೇ ಪ್ರಬುದ್ಧಳಾದರೂ ಸಹ ಹಲವಾರು ಕ್ಷೇತ್ರಗಳಲ್ಲಿ ಪುರುಷನಷ್ಟೇ ಸಮಾನವಾದ ಅವಕಾಶ ಸಿಗುತ್ತಿಲ್ಲ ಎಂದು ಕಳವಳ ವ್ಯಕ್ತಪಡಿಸಿದರು.

ಸಮಾಜ ಸೇವಕಿ ಹಾಗೂ ನಾಲ್ಕು ಚಕ್ರ ತಂಡದ ಮುಖ್ಯಸ್ಥೆ ಮಾಲಾ ಕಣ್ಣಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಹೆಣ್ಣು ಭ್ರೂಣಹತ್ಯೆ, ಹೆಣ್ಣು ಮಕ್ಕಳ ಮಾರಾಟ, ಅತ್ಯಾಚಾರ ಪ್ರಕರಣಗಳು ಹೆಚ್ಚುತ್ತಿದ್ದು ಪ್ರತಿ ಹೆಣ್ಣುಮಕ್ಕಳ ಪೋಷಕರು ಜಾಗೃತರಾಗಬೇಕು ಕಿವಿಮಾತು ಎಂದರು.ನಿವೃತ್ತ ಸರಕಾರಿ ಅಭಿಯೋಜಕ ಹುಲೇಪ್ಪ ಹೇರೂರ,ಮತ್ತು ಗೀತಾ ಭರಣಿ ಮಾತನಾಡಿ, ಎಲ್ಲಿ ಹೆಣ್ಣು ಮಕ್ಕಳನ್ನು ಗೌರವಿಸುತ್ತಾರೋ ಅಲ್ಲಿ ದೇವತೆಗಳು ನೆಲೆಸುತ್ತಾರೆ ಎಂಬ ಮಾತಿದೆ. ಪವಿತ್ರ ಮಾತೆಯರ ನೆನಪಿನ ಈ ದಿನ ಕೇವಲ ಮಾರ್ಚ್ 8ಕ್ಕೆ ಸೀಮಿತವಾಗದೆ ವರ್ಷದ 365 ದಿನಗಳು ಮಹಿಳೆಯರ ಸಂತೋಷದ ದಿನಗಳಾದಾಗ ಮಾತ್ರ ಮಹಿಳಾ ದಿನಾಚರಣೆ ಅರ್ಥಪೂರ್ಣವಾದೀತು ಎಂದು ಹೇಳಿದರು.

ಜಾನಪದ ಕಲಾವಿದ ಎಂ ಎನ್ ಸುಗಂಧಿ , ವೀರಣ್ಣ ಪಾಟೀಲ್ ಜಗತಿ, ಮಹಾದೇವ ನಾಟೀಕರ್,ಖತಲಪ್ಪ ಕಟ್ಟಿಮನಿ, ಸೋಮಶೇಖರ್ ಸಾಹುಕಾರ, ಗುಂಡಪ್ಪ ಮಾಳಗೆ, ಮಿಲಿಂದ್ ಕಣಮಸ, ಮಲ್ಲಿಕಾರ್ಜುನ ಇಟೀಕರ್,ಸಿದ್ಧಾರ್ಥ ಕಣಮಸ್, ಶಿವರಾಯ ಖಣಗೆ,ಮಣಮಂತ ಜಾನೆ , ರಬೀಯಾ ಬೇಗಂ, ವಿಜಯಲಕ್ಷ್ಮಿ ಹೀರೆಮಠ್,ಸ್ವಾತಿ ಮಹಾಗಾಂವ ಮಹಾದೇವಿ ಬಾಪುನಗರ,ಸಂಗೀತಾ ಅಂಬಲಗಿ, ದತ್ತಪ್ಪ ಸುಣ್ಣೂರ, ಸೋಮಣ್ಣ ಹೀರಾಣಿ,ಹಣಮಂತ ಜೀಡಗಿ, ಭಾಗೀರಥಿ,ಭೂಮೀಕಾ ಚವ್ಹಾಣ, ಮಲ್ಲಮ್ಮ ಜಗತಿ, ಕಮಲಮ್ಮ ಆಶ್ರಯಕಾಲನಿ,ವಿಜಯಕುಮಾರ್ ಸಾವಳಗಿ, ಮಲ್ಲಿಕಾರ್ಜುನ ನಂದೂರ,ಮಾರುತಿ ಲೇಂಗಟಿ, ಸೂರ್ಯಕಾಂತ ಅಂಬಲಗಿ, ಸಾಯಬಣ್ಣ ಬೆಳಮಗಿ ಸೇರಿದಂತೆ ವೃದ್ಧಾಶ್ರಮದ ಸಿಬ್ಬಂದಿ ವರ್ಗ ಹಾಗೂ ಕರ್ನಾಟಕ ಸಮತಾ ಸೈನಿಕ ದಳದ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಮಹಿಳಾ ಪರ ವಾದಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ದಿ. ಕು.ಅಕ್ಷತಾ ಈರಣ್ಣ ಜಾನೆ ಅವರ ಜನ್ಮದಿನ ಆಚರಿಸಿ ಅನ್ನದಾಸೋಹ ಮಾಡಲಾಯಿತು.

ಇದೇ ವೇಳೆ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹಿಳೆಯರಾದ ,ಪದ್ಮಾವತಿ ಅಟ್ಟೂರಕರ್,ಶರಣಮ್ಮ ರೋಜಾ, ಸೀಮಾ ಮೂಲಭಾರತಿ, ಭಾಗ್ಯಶ್ರೀ ಹಡಪದ್ , ಅನಸೂಯಾ ಹಲಚೇರಾ, ಸವೀತಾ ಅಣಕಲ್ ಅವರಿಗೆ ವಿಶೇಷವಾಗಿ ಗೌರವಿಸಲಾಯಿತು.

ಕರ್ನಾಟಕ ಸಮತಾ ಸೈನಿಕ ದಳದ ಜಿಲ್ಲಾಧ್ಯಕ್ಷ ಈರಣ್ಣ ಜಾನೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಮಿಲೀಂದ್ ಕಣಮಸ್ ನೀರುಪಿಸಿದರು,

ಮಹಾದೇವ ನಾಟೀಕರ್ ಸ್ವಾಗತಿಸಿದರು,ವಿಜಯಕುಮಾರ್ ವಂದಿಸಿದರು.

ಅಂತಾರಾಷ್ಟ್ರೀಯ ಮಹಿಳಾ ದಿನವು, ಬದುಕಿನ ವಿವಿಧ ಕ್ಷೇತ್ರಗಳಲ್ಲಿ ಮಹಿಳೆಯರ ಸಾಧನೆಗಳು, ಹೋರಾಟಗಳು ಮತ್ತು ಸ್ಥಿತಿಸ್ಥಾಪಕತ್ವವನ್ನು ಗುರುತಿಸುವ ಜಾಗತಿಕ ಚಳುವಳಿಯಾಗಿದೆ.

–ಪ್ರೊ ಯಶವಂತರಾಯ ಅಷ್ಠಗಿ

ಕೃಷಿ ಶ್ರೀ ಪ್ರಶಸ್ತಿ ಪುರಸ್ಕೃತ ಲೇಖಕ, ಕಲಬುರಗಿ

## ಮೂಲಭೂತ ಸಾಕ್ಷರತೆ ಮತ್ತು ಸಂಖ್ಯಾಜ್ಞಾನದ ಪರಿಕಲ್ಪನೆಗಳ ಬಲವರ್ಧನೆಗೆ ಕಲಿಕಾ ಹಬ್ಬ ಸಹಕಾರಿ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:–ಮಾ.8–ಎಫ್ ಎಲ್ ಎನ್ ಆಧಾರಿತ ಕಲಿಕಾ ಹಬ್ಬವು ಮೂಲಭೂತ ಸಾಕ್ಷರತೆ ಮತ್ತುಸಂಖ್ಯಾಜ್ಞಾನದಪರಿಕಲ್ಪನೆಗಳ ಬಲವರ್ಧನೆಗೆಸಂತೋಷದಾಯಕ ಹಾಗೂ ಅನುಭವಯುಕ್ತ ಕಲಿಕೆಯ ವಾತಾವರಣವನ್ನು ಪ್ರೇರೇಪಿಸುತ್ತದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿದ್ದವೀರಯ್ಯ ರುದ್ನೂರ ಹೇಳಿದರು.

ಇಲ್ಲಿನಸರಕಾರಿಹಿರಿಯಪ್ರಾಥಮಿಕ ಶಾಲೆ ತ್ರಿಪೂರಾಂತದಲ್ಲಿ ಪೂರ್ವ ಮತ್ತು ಪಶ್ಚಿಮ ಕ್ಲಸ್ಟರ್ ಮಟ್ಟದ ಕಲಿಕಾ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಈ ಕಾರ್ಯಕ್ರಮ ಶಾಲೆಗಳನ್ನು ಶೈಕ್ಷಣಿಕವಾಗಿಬಲವರ್ಧನೆಗೊಳಿಸಲು ಸಹಕಾರಿಯಾಗಿದೆ ಎಂದರು.

ಸಿಪಿಐ ಅಲಿಸಾಬ್ ಮಾತನಾಡಿ ಮಕ್ಕಳು ನಲಿಯುತ ಕಲಿಯುವುದು ಹಾಗೂ ಕಲಿತದ್ದನ್ನುಸಮುದಾಯದ ಮುಂದೆ ಪ್ರದರ್ಶಿಸುವುದು ಉತ್ತಮ ಕಾರ್ಯಕ್ರಮ ವಾಗಿದೆ ಎಂದರು.

ಬಿ ಆರ್ ಪಿ ಗಳಾದ ಶಾಲಿವಾನ ಬಿರಾದರ ಪ್ರಾಸ್ತಾವಿಕವಾಗಿ ಮಾತನಾಡಿ ಕಾರ್ಯಕ್ರಮದ ಮಹತ್ವ ಕುರಿತು ತಿಳಿಸಿದರು.ಈ ಕಾರ್ಯಕ್ರಮದಲ್ಲಿ ದೈಹಿಕ ಶಿಕ್ಷಣ ಪರಿವೀಕ್ಷಕರಾದ ನಾಗನಾಥ ದುಬಲಗುಂಡೆ,

ಶಿಕ್ಷಣ ಸಂಯೋಜಕರಾದ ಮನೋಹರ್ ಕಂಟೆಕೂರೆ, ಬಿ.ಆರ್.ಪಿ ಗಳಾದ ಪುಂಡಲೀಕ ಬಸನಾಯಕ,ಬಾಲಕೃಷ್ಣಪಾಟೀಲ,ಸಿ ಆರ್ ಪಿ ನಾಸೇರ ಪಟೇಲ್ ಮುಖ್ಯಗುರುಗಳಾದ ಶರಣಪ್ಪಾ ವಾಡೇಕರ, ನಾಗನಾಥ ರೆಡ್ಡಿ, ದೇವೇಂದ್ರ ಪಟ್ನೆ, ಮಲ್ಲಪ್ಪ ಕೋಟೆ,ಮಸ್ತಾನ್, ಅಲ್ತಾಫ್, ಸಿದ್ದಣ್ಣ ಮಲ್ಲಶೆಟ್ಟೆ, ದಿಲೀಪ ಬಿರಾದಾರ,ಶುಕೂರ,ರಾಜಶೇಖರ, ಚಂದ್ರಕಲಾ ಪ್ರಭುಲೀಲಾ,ರುಖಿಯಾ ಬೇಗಂ,ಅತಾವುಲ್‌ಮುಬಿನ,ನಬಿಸಾಬ ಸೇರಿದಂತೆಅನೇಕರುಉಪಸ್ಥಿತರಿದ್ದರು. ಸಿ ಆರ್ ಪಿ ಗಳಾದ ಗಿರಿಧರ ಧಾನುರೆ ಮತ್ತು ಶಿಕ್ಷಕಿ ನುಸ್ರತ್ ಬೀ ರವರು ನಿರೂಪಿಸಿದರು.

ಮಕ್ಕಳಿಗೆ ವಿವಿಧ ಸ್ಪರ್ಧೆ ನಡೆಸಿ ಪ್ರಥಮ ದ್ವಿತೀಯ ತೃತೀಯ ಸ್ಥಾನ ಪಡೆದ ಮಕ್ಕಳಿಗೆ ಬಹುಮಾನ ಹಾಗೂ ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು.

## ವನಔಷಧಿ ಪಂಡಿತ ಪ್ರಶಸ್ತಿ ದೊರಕಿದ್ದಕ್ಕೆ ಶೈಲೇಂದ್ರ ಕಾವಡಿ ಅವರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಮುಸ್ತರಿ ಗ್ರಾಮದ ಪಿಕೆಪಿಎಸ್ ನೂತನ ಅಧ್ಯಕ್ಷರಾಗಿ ಅಯ್ಕೆಗೊಂಡಿರುವ ಈಶ್ವರ ಜಕ್ಕಾ ಹಾಗೂ ಪರಿಸರವಾದಿ,ಸಮಾಜ ಕಾರ್ಯಕರ್ತ ಶೈಲೇಂದ್ರಕಾವಡಿ ಅವರಿಗೆ ವನಔಷಧಿ ಪಂಡಿತ ಪ್ರಶಸ್ತಿ ದೊರಕಿದಕ್ಕೆ ಗ್ರಾಮ ಪಂಚಾಯತ್ ಮಾಜಿ ಸದಸ್ಯ ಹಣಮಂತ ಹಳ್ಳಿ, ಮತ್ತು ಪಿಕೆಪಿಎಸ್ ಮಾಜಿ ಅಧ್ಯಕ್ಷ ಗುಂಡಪ್ಪ ಹಳ್ಳಿ ಇವರುಗಳಿಗೆ ಹರ್ಷ ವ್ಯಕ್ತಪಡಿಸಿ ಸನ್ಮಾನಿಸಿ ಗೌರವಿಸಿದರು. ಪರಿಸರವಾದಿ ಶೈಲೇಂದ್ರ ಕಾವಡಿ ಚಿಟಗುಪ್ಪ ತಾಲೂಕಿಗೆ ಹಾಗೂ ಮುಸ್ತರಿ ಗ್ರಾಮಕ್ಕೆ ಪರಿಸರ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡುತ್ತಿರುವುದಕ್ಕೆ ಈ ಭಾಗ ಹಸಿರು ಕರಣಕ್ಕೆ ಹಾಗೂ ಔಷಧಿ ಸಸಿಗಳ ಸಂರಕ್ಷಣೆ ಸಹಾಯವಾಗಿದೆ ಎಂದರು. ಈ ಪ್ರಶಸ್ತಿಗೆ ಆಯ್ಕೆ ಮಾಡಿರುವುದಕ್ಕೆ ಜೀವವೈವಿಧ್ಯ ಮಂಡಳಿಗೆ ಧನ್ಯವಾದಗಳು ಸಲ್ಲಿಸಿದರು.ರಾಜಶೇಖರಪಾಟೀಲ, ಉದಯಕುಮಾರ ತಂಗಾ, ಶಾಮರಾಮ ಜಕ್ಕಾ,ಬಸವರಾಜ ರಾಸುರ್, ಅನೀಲಕುಮಾರ್ ಹೈಬತ್ತಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಹೆಣ್ಣಿಗೆ ಹೆಣ್ಣೇ ಶತ್ರುಅನ್ನುವುದುತಪ್ಪು ಮತ್ತದು ಶುದ್ಧ ಸುಳ್ಳು – ಸೋನಾರೆ




ಮಲ್ಲಮ್ಮ ನುಡಿ ವಾರ್ತೆ

ಬೀದರ್ ಮಾ.08ಃ ಜಿಲ್ಲಾ ಸರಕಾರಿ ನೌಕರರ ಮಹಿಳಾ ಸಂಘ ಬೀದರ ಮತ್ತುಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತು ಹಾಗೂ ಜಿಲ್ಲಾ ಲೇಖಕಿಯರ ಸಂಘ ಬೀದರ ವತಿಯಿಂದ ನಗರದಹೆಣ್ಣುಮಗುವಿನವೃತ್ತದ ಬಳಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನುಆಚರಿಸಲಾಯಿತು.

ನಗರದತಾಯಿಮತ್ತುಮಗುವಿನ ಪ್ರತಿಮೆಗೆ ನಗರದಗುರುನಾನಕ ಶಾಲೆಯ ವಿದ್ಯಾರ್ಥಿನಿ ಕು. ವಾಸವಿ ವಿಂದ್ಯಾ ಮಾಂತೇಶ ಡಪಳಾಪೂರ ಅವರಿಂದ ಮಾಲಾರ್ಪಣೆಮಾಡಿಸಲಾಯಿತು. ಮತ್ತುಎಲ್ಲಾಮಹಿಳೆಯರುಪರಸ್ಪರ ಹೂವುಗಳನ್ನು ಹಾಕಿಕೊಂಡು ಪರಸ್ಪರಗೌರವಿಸಿಕೊಳ್ಳುವುದರ ಮೂಲಕಮಹಿಳಾ ದಿನಾಚರಣೆಗೆ ಚಾಲನೆಯನ್ನು ನೀಡಿದರು.

ಜಿಲ್ಲಾ ಸರಕಾರಿ ನೌಕರರ ಮಹಿಳಾ ಸಂಘದಅಧ್ಯಕ್ಷರಾದ ಶ್ರೀಮತಿ ಬಿಜೆಪಾರ್ವತಿವಿ .ಸೋನಾರೆಯವರುಎರಡ ು ಸಾವಿರದಇಪ್ಪತ್ತೈದನೇ ವರುಷವುಮಹಿಳಾದೌರ್ಜನ್ಯತಡೆಯ ದಿನಾಚರಣೆಯನ್ನಾಗಿಆಚರಿಸುತ್ತಿದೆ. ಹಾಗಂತ ವಿಶ್ವ ಸಂಸ್ಥೆ ಹೇಳಿದೆ. ಇದುಅತ್ಯಂತ–ಖೇದಕರ ಮತ್ತು ನಾಚಿಕೆಗೇಡು ವಿಷಯವಾಗಿದೆಎಂದರು.

ಮಹಿಳೆಯರ ಮೇಲೆ ನಿರಂತರವಾಗಿಅನ್ಯಾಯ ಅತ್ಯಾಚಾರಗಳು ನಡಿತಾ ಇವೆ. ಕಾನೂನು ಅದೇಕೆ ಕೈ ಕಟ್ಟಿಕೊಂಡು ಕುಳಿತಿದೆ ಎಂಬುದು ನಮಗೆಲ್ಲಯಕ್ಷ ಪ್ರಶ್ನೆಯಾಗಿಕಾಡುತ್ತಿದೆ.ಎಂದರು. ಅಷ್ಟೇಅಲ್ಲದೆ ಹೆಣ್ಣಿಗೆ ಹೆಣ್ಣೇ ಶತ್ರುಅನ್ನುವುದುತಪ್ಪುಮತ್ತದು ಶುದ್ಧ ಸುಳ್ಳು ಎಂದರು.

ಅದೇರೀತಿಯಾಗಿಜಿಲ್ಲಾ ಲೇಖಕಿಯರಸಂಘದಅಧ್ಯಕ್ಷರಾದ ಶ್ರೀಮತಿ ಭಾರತಿ ವಸ್ತ್ರದ್‌ಅವರು ಹೆಣ್ಣುಜಗದಕಣ್ಣು.ಎಲ್ಲಾಕ್ಷೇತ್ರಗಳಲ್ಲಿ ಹೆಜ್ಜೆ ಹಾಕುತ್ತಿರುವ ಮಹಿಳೆ ಯಾವುದೇಕಾರಣಕ್ಕೂಇಟ್ಟ ಹೆಜ್ಜೆಯನ್ನು ಹಿಂದೆತೆಗೆಯದೆ ಮುನ್ನಡೆಯಬೇಕುಎಂದರು.

ಜಿಲ್ಲಾ ಸರಕಾರಿ ನೌಕರರ ಮಹಿಳಾ ಸಂಘದ ಪ್ರಧಾನ ಕಾರ್ಯದರ್ಶಿಗಳಾದ ಶ್ರೀಮತಿ ಗೀತಾಗಡ್ಡೆಯವರುಮಹಿಳೆಯರ ಸರ್ವಾಂಗೀಣಅಭಿವೃದ್ಧಿಗೆತಂದೆ, ಅಣ್ಣ, ಗಂಡ ಹೀಗೆ ಪುರುಷರ ಸಹಕಾರಅತ್ಯಂತಅವಶ್ಯಕವಾಗಿದೆ. ಇಲ್ಲಿಎಲ್ಲರೂ ಸೇರಿಅಭಿವೃದ್ಧಿ ಪಥದತ್ತಚಲಿಸಬೇಕಾಗಿದೆಎಂದರು.

ಪ್ರಮುಖರಾದಜಯದೇವಿ ಯದ್ಲಾಪೂರೆ,ಪ್ರತಿಭಾಚಾಮಾ, ವಿಜಯಲಕ್ಮಿಕೌಟಗೆ,ಡಾ.ಶ್ರೇಯಾ ಮಹೇಂದ್ರಕರ್, ಸುಜಾತಾ ಪೂಜಾರಿ,ಸ್ವರೂಪರಾಣಿ ನಾಗೂರ, ಮುಂತಾದವರು ಮಾತನಾಡಿದರು.ಮಾಹಾನಂದಾಎಸ್ ಪಾಟೀಲ,ಚೆನ್ನಮ್ಮಾ ವಲ್ಲೇಪ ೂರೆ,ಕಾವೇರಿರಮೇಶ,ವಿದ ್ಯಾವತಿ ಹಿರೇಮಠ, ಪದ್ಮಾ ಮಡಿವಾಳ,ಬಂಡೆ, ಸೇರಿದಂತೆ ಮುಂತಾದವರಿದ್ದರು.

## ವೈಜ್ಞಾನಿಕ ವಲಯದಲ್ಲಿ ಎಲ್ಲವೂ ಪ್ರಶ್ನಾರ್ಹವಾಗಿದೆ: ಡಾ. ದತ್ತಾತ್ರೇಯ ಗಾದಾ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ : – ಮಾ.8 ಲೋಕದ ಎಲ್ಲ ಸಂಗತಿಗಳನ್ನು ಕುರಿತು ತಾರ್ಕಿಕವಾಗಿ, ವೈಚಾರಿಕವಾಗಿ ಪರಿಶೀಲಿಸುವ ಗುಣ ವಿಜ್ಞಾನಕ್ಕಿದೆ. ವೈಜ್ಞಾನಿಕ ವಲಯದಲ್ಲಿ ಯಾವುದೂ ಪ್ರಶ್ನಾತೀತವಲ್ಲ. ಎಲ್ಲವೂ ಪ್ರಶ್ನಾರ್ಹವೇ ಆಗಿದೆ ಎಂದು ತಹಶೀಲ್ದಾರ್ ಡಾ. ದತ್ತಾತ್ರೇಯ ಗಾದಾ ಹೇಳಿದರು.

ನಗರದ ಶ್ರೀ ಬಸವೇಶ್ವರ ಪದವಿ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ 'ವಿಜ್ಞಾನದ ಕಡೆಗೆ ಒಂದೆರಡು ಹೆಜ್ಜೆ' ಉಪನ್ಯಾಸ ಸಮಾರಂಭ ಉದ್ಘಾಟಿಸಿ ಮಾತನಾಡಿ ತನ್ನ ಆಳದಲ್ಲಿ ಹಲವು ಸಮರ್ಥವಾದ ಪ್ರಶ್ನೆಗಳನ್ನು, ಸವಾಲುಗಳನ್ನು ಇರಿಸಿಕೊಂಡು ಶೋಧಿಸುವ ಪ್ರಕ್ರಿಯೆ ವಿಜ್ಞಾನದ್ದಾಗಿದೆ ಎಂದರು. ಪ್ರತಿ ಸವಾಲುಗಳಿಗೆ, ಪ್ರಶ್ನೆಗಳಿಗೆ ಪ್ರಯೋಗ, ಸಂಶೋಧನೆ, ತರ್ಕದ ಮೂಲಕ ಫಲಿತಾಂಶಗಳನ್ನು ಕಂಡುಕೊಳ್ಳುವ ಪ್ರತೀತಿ ವಿಜ್ಞಾನದಲ್ಲಿದೆ. ಜಗತ್ತಿನ ಪ್ರತಿ ಸಂಗತಿಯನ್ನು ವೈಜ್ಞಾನಿಕ ದೃಷ್ಟಿಕೋನದಿಂದ ಕಾಣಬೇಕು. ವಿಜ್ಞಾನದ ಸೈದ್ಧಾಂತಿಕ ಜ್ಞಾನದ ಜತೆಗೆ ವೈಜ್ಞಾನಿಕ ಮನೋಭಾವ ಬೆಳೆಸಿಕೊಂಡು ಹೊಸ ತಿಳುವಳಿಕೆ ಪಡೆಯಬೇಕು ಎಂದರು.

ಪಶು ಸಂಗೋಪನಾ ಇಲಾಖೆ ಸಹಾಯಕ ನಿರ್ದೇಶಕ ಡಾ. ರವೀಂದ್ರನಾಥ ನಾರಾಯಣಪುರ ಮಾತನಾಡಿ, ಭಾರತೀಯ ಸಂವಿಧಾನ ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಲು ಆದ್ಯತೆ ನೀಡಿದೆ. ಮೌಢ್ಯತೆ–ಒಡೆದು ಹಾಕುವ ಉದ್ದೇಶ ಇದರ ಹಿಂದಿದೆ. ಸಾರ್ವತ್ರಿಕ ಸತ್ಯವನ್ನು ಪ್ರತಿಪಾದಿಸುವ ಗುಣ ವಿಜ್ಞಾನಕ್ಕಿದೆ. ವಿಜ್ಞಾನವೇ ಈ ಕಾಲದ ನಿಜವಾದ ಜೀವನ ಧರ್ಮವಾಗಿದೆ.

ಕೃಷಿ, ಹೈನುಗಾರಿಕೆ, ಅಣು, ಕಣ, ಬಾಹ್ಯಕಾಶ, ತಂತ್ರಜ್ಞಾನ, ಆರೋಗ್ಯ ಸೇರಿ ಹಲವು ರೀತಿಯ ವೈಜ್ಞಾನಿಕ ಶೋಧನೆಗಳು ನಿರಂತರ ನಡೆದಿವೆ. ಮೂಲ ವಿಜ್ಞಾನದ ಬೆಳವಣಿಗೆಗಾಗಿಯೇ ಬೆಂಗಳೂರಿನಲ್ಲಿ ಭಾರತೀಯ ವಿಜ್ಞಾನ ಸಂಸ್ಥೆ (ಐಐಎಸ್ಸಿ) ಸ್ಥಾಪನೆಯಾಗಿದೆ ಎಂದರು.

ವಿಜ್ಞಾನವು ನಮ್ಮ ಸುತ್ತಲಿನ ಜಗತ್ತನ್ನು, ಪರಿಸರವನ್ನು ಅರ್ಥೈಸಿಕೊಂಡು ಕಲಿಯಬೇಕಾದ ವಿಷಯವಾಗಿದೆ. ಅದರ ಬದಲಾಗಿ ಕಂಠಪಾಠ ಮಾಡಿ ಕಲಿಯುತ್ತಿರುವುದು ಇಂದು ದುರಂತದ ಸಂಗತಿಯಾಗಿದೆ ಎಂದರು. ಆಡಳಿತಾಧಿಕಾರಿ ಡಾ. ಮಲ್ಲಿಕಾರ್ಜುನ ಲಕಶೆಟ್ಟಿ ಮಾತನಾಡಿ, ನಮ್ಮ ಹಲವಾರು ಪ್ರಶ್ನೆಗಳಿಗೆ ಮತ್ತು ಸವಾಲುಗಳಿಗೆ ವೈಜ್ಞಾನಿಕ ಸಂಶೋಧನೆಗಳಲ್ಲಿ ಉತ್ತರಗಳಿವೆ. ಸಿ.ವಿ. ರಾಮನ್ ಅವರಿಗೆ ನೊಬೆಲ್ ಪಾರಿತೋಷಕ ಸಂದನೆನಪು ರಾಷ್ಟ್ರೀಯ ವಿಜ್ಞಾನದ ದಿನವಾಗಿ ಆಚರಿಸಲಾಗುತ್ತದೆ. ವೈಜ್ಞಾನಿಕ ಅರಿವು ಎಲ್ಲರಿಗೂ ಅತ್ಯಗತ್ಯ ಎಂದರು.

ಪ್ರಾಚಾರ್ಯರಾದ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ವೈಜ್ಞಾನಿಕ ಹಾಗೂ ವೈಚಾರಿಕ ಮನೋಭಾವದಿಂದ ಬದುಕು ಕಟ್ಟಿಕೊಳ್ಳಬೇಕು. ಜಾಗತಿಕ ವಿಜ್ಞಾನ ಕ್ಷೇತ್ರದಲ್ಲಿ ಭಾರತೀಯ ವಿಜ್ಞಾನಿಗಳ ಕೊಡುಗೆ ಅಪಾರ. ಎಲ್ಲರಲ್ಲೂ ವೈಜ್ಞಾನಿಕ ಮನೋಧರ್ಮ ಇರುವುದು ಅಗತ್ಯ ಎಂದರು.

ಬಿಡಿಪಿಸಿ ಕಾರ್ಯದರ್ಶಿ ಶ್ರೀಕಾಂತ ಬಡದಾಳೆ ಅಧ್ಯಕ್ಷತೆ ವಹಿಸಿದ್ದರು. ಸಹ ಕಾರ್ಯದರ್ಶಿ ವಿವೇಕಾನಂದ ಹೊದಲೂರೆ, ಪ್ರಾಚಾರ್ಯರಾದ ಡಾ. ರುದ್ರಮಣಿ ಮಠಪತಿ, ಅಶೋಕ ರೆಡ್ಡಿ, ವಿವೇಕಾನಂದ ಶಿಂಧೆ, ಗಂಗಾಧರ ಸಾಲಿಮಠ, ಸಚಿನ್ ಬಿಡವೆ, ನೀಲಮ್ಮ ಮೇತ್ರೆ, ನಾಗವೇಣಿ ಬಿರಾದಾರ, ಸಂಗೀತಾ ಮಹಾಗಾವೆ, ಜಗದೇವಿ ಜಾವಳಗೆ, ಕೃಷ್ಣ ಸದಲಾಪುರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಡಾ. ಶಾಂತಲಾ ಖಂಡಾಳೆ ಸ್ವಾಗತಿಸಿದರು. ಡಾ. ಬಸವರಾಜ ಖಂಡಾಳೆ ನಿರೂಪಿಸಿದರು. ಪವನ ಪಾಟೀಲ ವಂದಿಸಿದರು.

## ಸಮಾಜದ ಅಭಿವೃದ್ಧಿಯಲ್ಲಿ ಮಹಿಳೆಯರ ಕೊಡುಗೆ ಅಪಾರ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:–ಸಮಾಜದ ಅಭಿವೃದ್ಧಿಗೆ ಪುರುಷರೊಂದಿಗೆ ಮಹಿಳೆಯರು ಸಮಾನವಾಗಿ ಕೊಡುಗೆ ನೀಡುತ್ತಿದ್ದಾರೆ ಎಂದು ಹಳ್ಳಿಖೇಡಕೆ.ಗ್ರಾಮ ಪಂಚಾಯತ್ ಅಧ್ಯಕ್ಷ ಶಿವಕುಮಾರ್ ಪಾಟೀಲ್ ಗ್ರಾಮದ ಸರ್ಕಾರಿ ಪ್ರೌಢ ಶಾಲೆ ಆವರಣದಲ್ಲಿ ಗ್ರಾಮ ಪಂಚಾಯತ್ ವತಿಯಿಂದ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಮಹಿಳಾ ಗ್ರಾಮ ಸಭೆಯ ಉದ್ಘಾಟಿಸಿ ಮಾತನಾಡುತ್ತಾ ತಿಳಿಸಿದರು. ತಾಲೂಕಿನ ಹಳ್ಳಿಖೇಡ (ಕೆ) ಗ್ರಾಮದ ಸರ್ಕಾರಿ ಪ್ರೌಢ ಶಾಲೆಯ ಮುಖ್ಯಗುರುಗಳಾದ ಸಂಗಮ್ಮ ಬೊಮ್ಮಾಣಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ವಿಶೇಷ ಉಪನ್ಯಾಸ ನೀಡಿ ಮಾತನಾಡುತ್ತಾ ಪ್ರತಿ ಕ್ಷೇತ್ರದಲ್ಲಿ ಮಹಿಳೆಯರ ಭಾಗವಹಿಸುವಿಕೆಯನ್ನು ಉತ್ತೇಜಿಸಲು ಹಾಗೂ ಮಹಿಳೆಯರ ಹಕ್ಕುಗಳ ಬಗ್ಗೆ ಶಿಕ್ಷಣ ನೀಡಲು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಆಚರಿಸಲಾಗುತ್ತಿದೆ ಎಂದರು. ಈ ದಿನವನ್ನು ಮಹಿಳೆಯರ ಸಾಧನೆಗಳನ್ನು ಮತ್ತು ಸಾಮಾನ್ಯವಾಗಿ ಅವರ ಅಸ್ತಿತ್ವವನ್ನು ಸ್ಮರಿಸಲಾಗುತ್ತಿದೆ ಎಂದರು ಅಂತರಾಷ್ಟ್ರೀಯ ಮಹಿಳಾ ದಿನಾ ಮಹಿಳೆಯರ ಸಾಧನೆಯನ್ನು ನೆನೆಯುವ ದಿನವಾಗಿದೆ ಎಂದರು. ವಿಶ್ವಜ್ಯೋತಿ ಬಸವಣ್ಣನವರು ಹಾಗೂ ಡಾಕ್ಟರ್ ಬಿ ಆರ್ ಅಂಬೇಡ್ಕರ್ ಅಂಬೇಡ್ಕರ್ ಅವರ ಮಹಿಳೆಯರಿಗೆ ಸಮಾನ ಹಕ್ಕು ನೀಡಿರುವುದಕ್ಕೆ ಮಹಿಳೆಯರಿಗೆ ಸಮಾನ ಅವಕಾಶ ದೊರಕುತ್ತಿದೆ ಎಂದು ಸ್ಮರಿಸಿದರು. ಈ ಗ್ರಾಮ ಸಭೆಯಲ್ಲಿ ಮಹಿಳೆಯರ ಸಮಸ್ಯೆಗಳನ್ನು ಆಲಿಸಿದರು. ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ವೀರಣ್ಣ ಜಮಾದರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಮಾಜಿ ಗ್ರಾಮ ಪಂಚಾಯತ್ ಅಧ್ಯಕ್ಷೆ ಹಾಲಿ ಸದಸ್ಯ ಅನೀತಾ, ಗ್ರಾಮ ಪಂಚಾಯತ್ ಉಪಾಧ್ಯಕ್ಷ ಸುವರ್ಣ, ಸುಭಾಷ ಚೇಲಶೆಟ್ಟಿ, ಸಂತೋಷ್ ಬುಕ್ಕಾ, ಸೇರಿದಂತೆ ಸದಸ್ಯರು, ಗ್ರಾಮಸ್ಥರು ಉಪಸ್ಥಿತರಿದ್ದರು.

## ಕಮಲಾಪೂರ: ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.08– ಕಮಲಾಪೂರ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ ಮಿಷನ್ (ನಗರ) 2.0 ಯೋಜನೆಯಡಿ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕಾಗಿ ಒಟ್ಟು 33 ಗುರಿಯನ್ನು ಸರ್ಕಾರವು ನಿಗದಿಪಡಿಸಿದ್ದು, ಇದಕ್ಕಾಗಿ ಅರ್ಹ ಸಾರ್ವಜನಿಕರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಮಲಾಪೂರ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ. ಶೌಚಾಲಯ ನಿರ್ಮಾಣಕ್ಕಾಗಿ ಅರ್ಜಿ ಸಲ್ಲಿಸುವ ಸಾರ್ವಜನಿಕರು ತಮ್ಮ ಆಧಾರ ಕಾರ್ಡ್, ಪಡಿತರ ಚೀಟಿ, ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, ಆಸ್ತಿಗೆ ಸಂಬಂಧಿಸಿದ ದಾಖಲಾತಿಗಳೊಂದಿಗೆ 2025ರ ಮಾರ್ಚ್ 15 ರೊಳಗಾಗಿ ಕಚೇರಿ ವೇಳೆಯಲ್ಲಿ ಕಮಲಾಪುರ ಪಟ್ಟಣ ಪಂಚಾಯತ್ ಕಚೇರಿಯಲ್ಲಿ ಅರ್ಜಿ ಸಲ್ಲಿಸಿ ಇದರ ಸದುಪಯೋಗ ಪಡಿಸಿಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

## ಬಜೆಟ್ ನಲ್ಲಿ ಯಾದಗಿರಿ ಜಿಲ್ಲೆಗೆ ಮಲತಾಯಿ ಧೋರಣೆ, ರವಿ ಬುರನೋಳ



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್:ಅತಿಹಿಂದುಳಿದ ಜಿಲ್ಲೆಗೆ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ಬಜೆಟ್ ನಲ್ಲಿಯೂ ಹಿಂದುಳಿದ ಜಿಲ್ಲೆಗೆ ಯಾದಗಿರಿಗೆ ಚೊಂಬು ಕೊಟ್ಟಿದ್ದಾರೆ ಎಂದು ಮಾದಿಗ ದಂಡೋರ ಒಳಮೀಸಲಾತಿ ಹೊರಟ ಸಮಿತಿಯ ಗುರುಮಠಕಲ್ ತಾಲೂಕ್ ಅಧ್ಯಕ್ಷ ರವಿ ಬುರನೋಳ ಆರೋಪಿಸಿದ್ದಾರೆ

ಬಜೆಟ್ ಕರ್ನಾಟಕವನ್ನು ಇನ್ನಷ್ಟು ಸಾಲದ ಕೂಪಕ್ಕೆ ನೂಕಿದೆ. ಕರ್ನಾಟಕ ಇನ್ನಷ್ಟು ಆರ್ಥಿಕ ಸಂಕಷ್ಟಕ್ಕೆ ಸಿಲುಕುವ ಕೊಡುಗೆ ಈ ಬಜೆಟ್ ಕೊಟ್ಟಿದೆ. ಹೀಗಾಗಿ ಇದೊಂದು ಜನ ವಿರೋಧಿ ಮತ್ತು ಅಭಿವೃದ್ಧಿ ವಿರೋಧಿ ಬಜೆಟ್ ಇದಾಗಿದೆ ಎಂದು ಆರೋಪಿಸಿದರು.

ಇದು ನಮ್ಮ ಯಾದಗಿರಿ ಜಿಲ್ಲೆಯು ಶೈಕ್ಷಣಿಕವಾಗಿ ಅತಿ ಹಿಂದುಳಿದಿರುವ ಜಿಲ್ಲೆಗೆ ಎಂಜಿನಿಯರಿಂಗ್ ಕಾಲೇಜು ಘೋಷಣೆಯಾಗುತ್ತದೆ ಮತ್ತು ವಿವಿಧ ರಂಗದಲ್ಲಿ ನಿರುದ್ಯೋಗಿಗಳಿದ್ದರೆ ಅವರಿಗೆ ವಿದ್ಯಾರ್ಥಿಗೆ ತಕ್ಕ ಕೆಲಸ ಸಿಗುತ್ತದೆ ಎಂಬ ನಿರೀಕ್ಷೆ ಈ ಬಾರಿಯೂ ಹುಸಿಯಾಗಿದೆ. ಜಿಲ್ಲೆಯ ಜನಪ್ರತಿನಿಧಿಗಳು, ಶಾಸಕರು, ಸಚಿವರು, ಸಂಸದರು ಜಿಲ್ಲೆಯ ಬೇಡಿಕೆಗಳನ್ನು ಸಮರ್ಥವಾಗಿ ಮಂಡಿಸದೇ ನಿರ್ಲಕ್ಷ್ಯವಹಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ಅತ್ಯಂತ ಹಿಂದುಳಿದ ಜಿಲ್ಲೆಗಳ ಪೈಕಿಯೇ ಅತಿ ಹಿಂದುಳಿದ ಮಹತ್ವಾಕಾಂಕ್ಷಿ ಜಿಲ್ಲೆಗೆ ಅಗತ್ಯವಿರುವ ಬೇಡಿಕೆಗಳನ್ನು ಪರಿಗಣಿಸಿ ಈಡೇರಿಸಬೇಕಾದ ಮಾನ್ಯ ಮುಖ್ಯಮಂತ್ರಿ ಅವರು ದಿವ್ಯ ನಿರ್ಲಕ್ಷ್ಯ ತೋರಿದ್ದಾರೆ ಎಂದು ಮಾದಿಗ ದಂಡೋರ ಆಪಾದಿಸಿದೆ

ನೆರೆಯ ಜಿಲ್ಲೆಯ ಶಾಸಕರು ಸರ್ಕಾರದ ಮೇಲೆ ಒತ್ತಡ ತಂದು ಕೆಲಸ ಮಾಡಿಸಿಕೊಂಡಿದ್ದಾರೆ ಜಿಲ್ಲೆಯಲ್ಲಿನ ಮೂವರು ಆಡಳಿತಾರೂಢ ಪಕ್ಷದ ಶಾಸಕರೇ ಇದ್ದರೂ ನಿರ್ಲಕ್ಷ್ಯ ಮಾಡಿದ್ದಾರೆ, ಅತ್ತ ಸರ್ಕಾರ ಜಿಲ್ಲೆಗೆ ಮಲತಾಯಿ ಧೋರಣೆ ಅನುಸರಿಸಿ ಅನ್ಯಾಯ ಮಾಡಿದೆ ಎಂದು ಆರೋಪಿಸಿದ್ದಾರೆ.

### ಸಾವಿತ್ರಿಬಾಯಿ ಫುಲೆ ಪ್ರಶಸ್ತಿ ಪಡೆದಿರುವ

## ಶ್ರೀಮತಿ ಕಸ್ತೂರಿ ಬಾಯಿ ಒಂಟಿ ರವರಿಗೆ ಅಭಿನಂದನೆಗಳು



ಮಲ್ಲಮ್ಮ ನುಡಿ ವಾರ್ತೆ

ಸೇಡಂ.ಮಾ.08.ಸಾವಿತ್ರಿಬಾಯಿ ಫುಲೆ ರಾಷ್ಟ್ರೀಯ ಶಿಕ್ಷಕಿಯರ ಫೆಡರೇಷನ್ (ರಿ) ನವದೆಹಲಿ ಸಾವಿತ್ರಿ ಬಾಯಿ ಫುಲೆ ಶಿಕ್ಷಕಿಯರ ಸಂಘ (ರಿ ) ಕಲಬುರ್ಗಿ ಹಾಗೂ ತಾಲೂಕು ಘಟಕ ಸೇಡಂ ಇವರ ಸಹಯೋಗದಲ್ಲಿ ಕೊಡಮಾಡುವ ಸಾವಿತ್ರಿಬಾಯಿ ಫುಲೆ ಪ್ರಶಸ್ತಿಯನ್ನು ಪಡೆದಿರುವ ಶ್ರೀ ಮತಿ ಕಸ್ತೂರಿ ಬಾಯಿ ಒಂಟಿ ಶಿಕ್ಷಕಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಬಟಗೇರಾ (ಬಿ) ರವರಿಗೆ ಅಭಿನಂದನೆಗಳು ಶುಭಾಶಯಗಳನ್ನು ಕೋರುವವರು.

ಶ್ರೀ ಮಂತ ಪ್ರಭಾರಿ ಮುಖ್ಯ ಗುರುಗಳು ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಬಟಗೇರಾ (ಬಿ ) ಹಾಗೂ ಸುರೇಶ ಬೆಲ್ಲದ. ವೆಂಕಟೇಶ ಸೋನಾಯಿ. ಮಂಜುನಾಥ ಹಡಪದ. ಶ್ರೀಮಂತ ಅವಂಟಿ. ಶರಣಯ್ಯ ಮಠಪತಿ. ಶಿವಲಿಂಗಯ್ಯ ಸ್ವಾಮಿ ಚಿಂತಪಳ್ಳಿ. ಸುನಿಲ ಬೀರನಳ್ಳಿ. ನಾಗರಾಜ ಮದನಕರ. ಕಿರಣ ಸಿಂಧೆ. ಹಾಗೂ ಬಂದು ಮಿತ್ರರು

## ಮಾರ್ಚ್ 10 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.08– ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ–2ರ ವತಿಯಿಂದ ಪ್ರಸ್ತುತ 110/33/11 ಕೆ.ವಿ.ನಾಲವಾರ ವಿದ್ಯುತ್ ಉಪ–ಕೇಂದ್ರದಲ್ಲಿ ಮೆಂಟೇನನ್ಸ್ ಕಾರ್ಯ ಕೈಗೊಳ್ಳಬೇಕಿರುವ ಹಿನ್ನೆಲೆಯಲ್ಲಿ ಇದೇ ಮಾರ್ಚ್ 10 ರಂದು ಬೆಳಿಗ್ಗೆ 10 ರಿಂದ ಸಾಯಂಕಾಲ 5 ಗಂಟೆಯವರೆಗೆ ಈ ಕೆಳಕಂಡ ವಿತರಣಾ ಕೇಂದ್ರದ ಗ್ರಾಮಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುತ್ತಿದ್ದು, ಸಾರ್ವಜನಿಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ–1ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

ಶಹಾಬಾದ ಉಪವಿಭಾಗದ 110/33/11 ಕೆ.ವಿ ನಾಲವಾರ ವಿದ್ಯುತ್ ವಿತರಣಾ ಕೇಂದ್ರ: ಚಿತ್ತಾಪೂರ ತಾಲೂಕಿನ ನಾಲವಾರ (ಐ.ಪಿ), ತರಕಸಪೇಟ, ಸನ್ನತ್ತಿ, ಯರಗೋಳ (ಐ.ಪಿ), ಕೊಂಚೂರ್, ಕುಂಬಾರಹಳ್ಳಿ, ರಾಂಪುರಳ್ಳಿ (ಐ.ಪಿ), ಕೊಲ್ಲೂರ (ಐ.ಪಿ) ಗ್ರಾಮ ಪಂಚಾಯತಿಯ ಎಲ್ಲಾ ಗ್ರಾಮಗಳು.

# ಬಿ.ವಿ. ಭೂಮರಡ್ಡಿ ಪದವಿ ಮಹಾವಿದ್ಯಾಲಯದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಮಾ.8: ನಗರದ ಹೈ.ಕ.ಶಿ. ಸಂಸ್ಥೆಯ ಬಿ.ವಿ. ಭೂಮರಡ್ಡಿ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಪದವಿ ಮಹಾವಿದ್ಯಾಲಯದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಜ್ಯೋತಿಬೆಳಗಿಸುವುದರೊಂದಿಗೆ ಕಲಬುರಗಿ ಮಹಾ ನಗರ ಪಾಲಿಕೆಯಆಸ್ತಿಅಧಿಕಾರಿಯಾದ ಶ್ರೀಮತಿಸಾವಿತ್ರಿಶರಣುಸಲಗರ ಕಾರ್ಯಕ್ರಮವನ್ನುಉದ್ಘಾಟಿಸಿ ಮಾತನಾಡುತ್ತಾ ವೇದಗಳ ಕಾಲದಲ್ಲಿಮಹಿಳೆಯರುಬಹಳ ಶೋಚನಿಯಪರಿಸ್ಥಿಯಲ್ಲಿದ್ದರು ಮನುಹೇಳುವಂತೆ ಸ್ತ್ರೀಯರಿಗೆ ಸ್ವತಂತ್ರ್ಯವಿಲ್ಲಅವರುಯಾವುದೇ ಶಿಕ್ಷಣ ಪಡೆಯದಂತೆ ಕೇವಲ ನಾಲ್ಕುಗೋಡಗಳಲ್ಲಿ ಅಡುಗೆ ಕೆಲಸಕ್ಕೆ ಮಾತ್ರಸೀಮಿತವಾಗಿತ್ತು ಇಂತಹಸಂದಿಗ್ಧಪರಿಸ್ಥಿತಿಯಲ್ಲಿ ವೇದಗಳಕಾಲದಲ್ಲಿಶಿಕ್ಷಣಪಡೆದ ಖ್ಯಾತಮಹಿಳಾಪಂಡಿತರೆಂದರೆ ಅಪಲಾ, ವಿಶ್ವವರಾ ಹೀಗೆ ಮುಂತಾದ ಮಹಿಳೆಯರು ಶಿಕ್ಷಣ ಪಡೆದು ತಾವು ಸಹ ಸಮಾಜಕ್ಕೆಶಿಕ್ಷಣವಂತರಾಗಲು ಪ್ರೊತ್ಸಾಹಿಸಿದರು. ಆಗಿನ ಕಾಲದ ಕರ್ನಾಟಕದ ಧೀರ ಮಹಿಳೆರೆಂದರೆ ಕಿತ್ತೂರು ರಾಣಿ ಚೆನ್ನಮ್ಮ, ಒನಕೆ ಓಬವ್ವ, ಕೆಳದಿ ಚೆನ್ನಮ್ಮಾ, ಝಾನ್ಸಿರಾಣಿ ಲಕ್ಷ್ಮೀಬಾಯಿ ಇಂತಹ ವೀರ ಮಹಿಳೆಯರು ಸ್ವಾತಂತ್ರ್ಯಕ್ಕಾಗಿ ಬ್ರಿಟಿಷರ ನಿದ್ದೆಗೆಡಿಸಿದಂತಹವರು. ಇಂದು ಭೂಮಿಯಿಂದ ಆಕಾಶದಲ್ಲಿ ಯುದ್ಧವಿಮಾನವನ್ನುನಡೆಸುವ ಛಲವನ್ನು ಹೊಂದಿದ್ದಾರೆ ಇವರ ಆದರ್ಶ ಇಟ್ಟು-ಕೊಂಡು ನೀವು ಸಹ ದೇಶಕ್ಕೆ ಮಾದರಿಯಾಗಬೇಕೆಂದು ಯುವತಿಯರನ್ನುಪ್ರೋತ್ಸಾಹಿಸಿದರು

ಮಹಾವಿದ್ಯಾಲಯದ ಉಪ ಪ್ರಾಂಶುಪಾಲರಾದ ಶ್ರೀ ಅನೀಲಕುಮಾರಅಣದೂರೆಯವರು ಮಾತನಾಡುತ್ತಾ ಇಂದಿನಜಗತ್ತು ಕೇವಲ ಪುರುಷರಿಂದಷ್ಟೆಅಲ್ಲ ಯಾವ ಪುರುಷನ ಹಿಂದೆ ಮಹಿಳೆಯ ಶಕ್ತಿ ಇರುತ್ತದೆಯೋ ಅಂತಹ ವ್ಯಕ್ತಿ ಯಾವುದೇ ತೊಂದರೆಗಳಿಲ್ಲದೇ ಎಲ್ಲಾ ಕ್ಷೇತ್ರಗಳಲ್ಲಿ ಮುಂದೆ ಬರಲು ಸಾಧ್ಯವೆಂದುನುಡಿದರುಹಾಗೂ ಸ್ತ್ರೀ-ಇಸ್ತ್ರಿ, ನೀ ಸಾಯಬೇಡ ಕವಿತೆಗಳನ್ನು ಓದಿದರು.

ಈ ಕಾರ್ಯಕ್ರಮದಲ್ಲಿ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಂಶುಪಾಲರಾದಡಾ. ದೀಪಾ ರಾಗ ಅವರು ಮಹಿಳೆಯರ ಕುರಿತು ಕವನ ವಾಚಿಸಿದರು, ಕಛೇರಿ ಅಧೀಕ್ಷಕರಾದ ಶ್ರೀ ಸುಜೀತಕುಮಾರ ಇವರು ಸ್ವ ರಚಿತ ಕವನ ಹೇಳಿದರು.

ಇತಿಹಾಸವಿಭಾಗದಮುಖ್ಯಸ್ಥರಾದ ಡಾ. ಶಿವಲೀಲಾ ವೀರಯ್ಯಾ ಪ್ರಾಸ್ತಾವಿಕ ನುಡಿಯನ್ನು ಹೇಳಿದರು

ಈ ಕಾರ್ಯಕ್ರಮದಲ್ಲಿ ಮಹಿಳಾ ಸಾಧಕೀಯರಾದ ಶ್ರೀಮತಿ ಲಲಿತಾಬಾಯಿ ಲಕ್ಕಾ ಜಾನಪದ ಕ್ಷೇತ್ರ, ಶ್ರೀಮತಿ ನಾಗವೇಣಿ ಶಂಕರ ಸರ್ ಸಮಾಜ ಸೇವಕ ಕೋಳಾರ ಇವರನ್ನುಸನ್ಮಾನಿಸಲಾಯಿತು, ಮಹಿಳಾದಿನಾಚರಣೆಅಂಗವಾಗಿ ವಿವಿಧಸ್ಪರ್ಧೆಗಳನ್ನುಏರ್ಪಡಿಸಿ ವಿಜೇತರಾದಮಹಿಳಾಮಣಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ವಹಿಸಿದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಪಿ. ವಿಠ್ಠಲ ರಡ್ಡಿಯವರು ಮಾತನಾಡುತ್ತಾ ಒಬ್ಬ ಮಹಿಳೆ ಶಿಕ್ಷಣ ಪಡೆದರೆ ಇಡೀ ಕುಟುಂಬ ಶಿಕ್ಷಣ ಪಡೆದಂತೆ, 'ಯತ್ರನಾರ್ಯಸ್ತು ಪೂಜ್ಯಂತೆ ತತ್ರ ದೇವತಾ:' ಅಂದರೆ ಎಲ್ಲಿ ನಾರಿಯರ ಪೂಜೆ ನಡೆಯುತ್ತದೆಯೋ ಅಲ್ಲಿ ದೇವತೆಗಳುವಾಸಮಾಡುತ್ತಾರೆ. ಮನೆ ಮೊದಲ ಪಾಠಶಾಳೆ ತಾಯಿಯೇ ಮೊದಲು ಗುರು, 'ನಾರಿ ಶಕ್ತಿ ದೇಶ ಕೀ ಶಾನ' ಇಂದಿನ ಮಾನ್ಯ ಪ್ರಧಾನ ಮಂತ್ರಿಗಳ 'ಬೇಟಿ ಬಜಾವೊ, ಬೇಟಿ ಪಢಾವೊ' ಅಭಿಯಾನ ಸೂಕ್ತವಾಗಿದೆ. ಸ್ತ್ರೀಯಲ್ಲಿ ಲಕ್ಷ್ಮಿ, ಸರಸ್ವತಿ, ಮಾತೆ ಸ್ವರೂಪ ನಮ್ಮ ಭಾರತದಲ್ಲಿಮಾತ್ರಕಾಣುತ್ತೇವೆ. ಇಡೀ ವಿಶ್ವವೇ ಭಾರತಕ್ಕೆ ಪೂಜನೀಯ ಭಾವದಿಂದ ನಮಿಸುತ್ತದೆ ಇಂದಿನ ಅಣು ಪ್ರಪಂಚದಲ್ಲಿ ಶಾಂತಿ ಮಂತ್ರ ಹೇಳಿದ್ದು ಕೇವಲ ಭಾರತ ದೇಶ ಎಂದು ಮಾರ್ಮಿಕವಾಗಿ ನುಡಿದರು.

ಕಾರ್ಯಕ್ರಮ ಮೊದಲಿಗೆ ಪ್ರಾರ್ಥನೆ ಗೀತೆಯನ್ನು ಕು: ನಾಗಾಲಾಂಬಿಕ ಹಾಡಿದರೆ, ಸ್ವಾಗತವನ್ನು ಸಸ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಸೂರ್ಯವಂಶಿ ಪೂಜಾ ಮಾಡಿದರೆ, ಕಾರ್ಯಕ್ರಮದ ನಿರೂಪಣೆಯನ್ನು ಹಿಂದಿ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಶ್ರೀ ಮಾರುತಿ ಭೀಮಣ್ಣಾ ನಡೆಸಿಕೊಟ್ಟರೆ ಕಾರ್ಯಕ್ರಮವನ್ನುರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ವಾಣಿಶ್ರೀ ವಂದಿಸಿದರು, ಕಾರ್ಯಕ್ರಮದಲ್ಲಿವಿದ್ಯಾರ್ಥಿನಿಯರು, ಪ್ರಾಧ್ಯಾಪಕರು, ಬೋಧಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ರವೀಂದ್ರ ಮುದ್ದಿ ಕೃತಿಗಳಲ್ಲಿ ಗ್ರಾಮೀಣ ಬದುಕಿನ ಅನಾವರಣ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.8- ಕಥೆಗಾರರು ತಾವು ಕಂಡ ವ್ಯಕ್ತಿ, ಪ್ರದೇಶ, ಅಲ್ಲಿನ ವೈವಿಧ್ಯಮಯ ಬದುಕನ್ನು ತಮ್ಮ ಕಥೆಗಳಲ್ಲಿ ಬಿಂಬಿಸುತ್ತಿದ್ದು, ಪತ್ರಕರ್ತ, ಲೇಖಕ ರವೀಂದ್ರಮುದ್ದಿ ತಮ್ಮ ಕೃತಿಗಳಲ್ಲೂಗ್ರಾಮೀಣಬದುಕಿನ ಸೊಗಡನ್ನುಪರಿಚಯಿಸಿದ್ದಾರೆ ಎಂದು ಚಿತ್ರ ನಿರ್ದೇಶಕ ಹಯವದನ ಹೇಳಿದರು. ಶನಿವಾರ ನವನಗರದ ಪತ್ರಿಕಾ ಭವನದಲ್ಲಿ ನಡೆದ ರವೀಂದ್ರ ಮುದ್ದಿ ಅವರ ಕಥಾಸಂಕಲನಗಳ ಪರಿಚಯ ಕಾರ್ಯಕ್ರಮದಲ್ಲಿ ಮಾತನಾಡಿ, ರವೀಂದ್ರಮುದ್ದಿ ತಮ್ಮ ಕಥೆಗಳಲ್ಲಿ ಗ್ರಾಮೀಣ ಬದುಕನ್ನು ವಿಶ್ಲೇಷಿಸಿ ಅಲ್ಲಿನ ಜೀವನ ಶೈಲಿಯನ್ನು ವ್ಯಕ್ತಿಗಳ ಪಾತ್ರದಮೂಲಕಕಟ್ಟಿಕೊಟ್ಟಿದ್ದಾರೆ. ವರದಾ ತೀರದ ಕೃತಿಯೊಳಗೆ ಜೀವನದಲ್ಲಿ ಬಂದು ಹೋಗುವ ಪಾತ್ರಗಳನ್ನು ಕಲ್ಪನೆಯಲ್ಲಿ ಮೂಡಿಸಿದ್ದಾರೆ ಎಂದರು.

ಬರಹಗಾರ್ತಿ ಮುರ್ತುಜಾ ಬೇಗಂ ಮಾತನಾಡಿ, ಸಿಗ್ನಲ್ ಜಂಪ್ ಕೃತಿಯಲ್ಲಿ ಲೇಖಕರು ಒಂದೊಂದು ಪಾತ್ರವನ್ನು ಕಣ್ಣಿಗೆ ಕಟ್ಟುವಂತೆ ಬರೆದಿದ್ದಾರೆ. ಆ ಪಾತ್ರಗಳು ನಮ್ಮ ಜೀವನದಲ್ಲೇ ನಡೆದಿವೆ ಎಂದು ಭಾಸವಾಗುತ್ತದೆ. ಇವು ಓದುಗನನ್ನುಸೆಳೆಯುತ್ತವೆಯಲ್ಲದೇ ಸಾಮಾಜಿಕನ್ಯಾಯ, ವ್ಯವಸ್ಥೆಯ ಬಗ್ಗೆ ಬೆಳಕು ಚೆಲ್ಲುತ್ತವೆ ಎಂದು ಹೇಳಿದರು. ಲೇಖಕ ಡಾ.ಪ್ರಕಾಶ ಖಾಡೆ ಮಾತನಾಡಿ, ಕಥೆಗಾರನ ಕಥೆಗಳಲ್ಲಿ ಆತ ಬೆಳೆದ ಪರಿಸರ, ಊರು, ಪ್ರೀತಿ, ಸ್ನೇಹ, ಸಂಪ್ರದಾಯ, ಸಾಂಸ್ಕೃತಿಕ ವೈಭವ, ಭಾವೈಕ್ಯತೆ, ಸಾಮರಸ್ಯ, ರಾಜಕೀಯ ಹೀಗೆ ವಿವಿಧ ವಿಷಯ ವಸ್ತುಗಳನ್ನು ಕಣ್ಣಿಗೆ ಕಟ್ಟುವಂತೆ ಒಡಮೂಡಿಸಿದ್ದಾರೆ. ರವೀಂದ್ರಮುದ್ದಿಯವರ ಒಟ್ಟಾರೆ ಕಥೆಗಳು ಜೀವನಾನುಭದ ತಹಳದಿಯಲ್ಲಿ ಓದುಗರ ಮನಸ್ಸಿನಲ್ಲಿ ಅಚ್ಚಳಿಯದೇ ಉಳಿಯುವಂತೆ ಮಾಡುತ್ತವೆ ಎಂದರು. ಅಂಜುಮನ್ ಶಿಕ್ಷಣ ಸಂಸ್ಥೆಯ ಪ್ರಾಂಶುಪಾಲ ಡಾ.ಮೈನುದ್ದೀನ ರೇವಡಿಗಾರ ಮಾತನಾಡಿ, ಇಂದಿನ ಸಾಹಿತಿ, ಲೇಖಕರು ಕೃತಿಗಳ ಹೆಸರಲ್ಲಿ ಇಂಗ್ಲೀಷ್ ತಲೆ ಬರಹವನ್ನು ಉಲ್ಲೇಖಿಸುತ್ತಿದ್ದಾರೆ. ಆದರೆ ಕನ್ನಡ ಕೃತಿಗಳ ತಲೆಬರಹವೂ ಕನ್ನಡದ್ದೇ ಆಗಿರಬೇಕು. ಆಗ ಕನ್ನಡಕ್ಕೆ ಮತ್ತಷ್ಟು ಶಕ್ತಿ ಬರುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿಯ 'ಆಂದೋಲನ' ಪ್ರಶಸ್ತಿ ಪಡೆದ ಸಂಜೆ ದರ್ಶನ ದಿನ ಪತ್ರಿಕೆ ಸಂಪಾದಕ ಮಹೇಶ ಅಂಗಡಿ, ಲೇಖಕ ರವೀಂದ್ರ ಮುದ್ದಿ ಅವರನ್ನು ಸನ್ಮಾನಿಸಲಾಯಿತು. ತೋಟಗಾರಿಕೆ ವಿಶ್ವವಿದ್ಯಾಲಯದ ಕಂಟ್ರೋಲರ್ ಮಲ್ಲಿಕಾರ್ಜುನ ಶೆಲ್ಲಿಕೇರಿ ಮಾತನಾಡಿದರು. ಪಕ್ವಾನ್ ಹೊಟೇಲ್ ಮಾಲಿಕ ಪವನ್ ಸೀಮಿಕೇರಿ, 'ಎಲ್ಲೋ ಜೋಗಪ್ಪ ನಿನ್ನರಮನೆ' ಚಿತ್ರ ತಂಡದವರು, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ಆನಂದ ಧಲಬಂಜನ ಸೇರಿದಂತೆ ಪತ್ರಕರ್ತರು ಇದ್ದರು.

# ಮಹಿಳೆ ಬದುಕು ಕಟ್ಟಿಕೊಳ್ಳುವ ಕಲೆ ಕಲಿತುಕೊಳ್ಳಬೇಕು : ರಶ್ಮಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.8-ಎಲ್ಲ ಕ್ಷೇತ್ರದಲ್ಲೂ ಮಹಿಳೆಯರಿಗೆ ಸಮಾನ ಸ್ಥಾನಮಾನ ದೊರೆಯವ ಅವಕಾಶಗಳಿದ್ದು, ತಮ್ಮ ಮನೋಬಲ ಹಾಗೂ ಬುದ್ಧಿಬಲದೊಂದಿಗೆ ಉತ್ತಮ ಬದುಕು ಕಟ್ಟಿಕೊಳ್ಳುವ ಕಲೆಯನ್ನು ಮಹಿಳೆಯರು ಕಲಿತುಕೊಳ್ಳಬೇಕೆಂದು ಬರಹಗಾರ್ತಿ ರಶ್ಮಿ ಎಸ್ ಹೇಳಿದರು. ಶನಿವಾರ ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಐಕ್ಯೂಎಸಿ ಮತ್ತು ಮಹಿಳಾ ಸಬಲೀಕರಣ ಘಟಕದ ಆಶ್ರಯದಲ್ಲಿ ನಡೆದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯಅತಿಥಿಗಳಾಗಿಮಾತನಾಡಿದ ಅವರು, ಮಹಿಳೆಯರು ಇಂದು ಕುಟುಂಬ, ಸಮಾಜ, ನಾಡು ಮತ್ತು ದೇಶ ನಿರ್ವಹಿಸುವ ಆತ್ಮವಿಶ್ವಾವನ್ನುಬೆಳೆಸಿಕೊಂಡಿದ್ದಾರೆ ಎಂದರು.

ಜಿಲ್ಲಾಧಿಕಾರಿ ಜಾನಕಿ. ಕೆ.ಎಂ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿ, ಮಹಿಳೆಯರ ಮನೋಸ್ಥಿತಿಯಲ್ಲಿ ಮಾತೃತ್ವ ಮತ್ತು ಭಾತೃತ್ವದ ಶಕ್ತಿಯಿದೆ. ಇಲ್ಲಿ ಯಾರು ಮೇಲಲ್ಲ, ಕೀಳಲ್ಲ ಎಲ್ಲರೂ ಸರ್ವ ಸಮಾನರೆ ಎಂಬ ಭಾವನೆಗಳನ್ನು ನಾವು ಬೆಳಸಿಕೊಳ್ಳಬೇಕು. ನಾವೆಲ್ಲರೂ ಇರುವ ಸಮಯವನ್ನು ಸರಿಯಾಗಿ ಬಳಸಿಕೊಂಡು ಸಮಾಜದ ಆದರ್ಶ ವ್ಯಕ್ತಿಗಳಾಗಬೇಕು ಎಂದು ಹೇಳಿದರು.

ಪ್ರಾಂಶುಪಾಲಡಾ.ಅರುಣಕುಮಾರ ಗಾಳಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಮಾಜದಲ್ಲಿ ಮಹಿಳೆಯರಿಗೆ ಘನತೆ ಮತ್ತು ಗೌರವವಿದೆ. ಮಾತೃತ್ವದ ಪರಂಪರೆಯನ್ನು ಪೂಜಿಸುವ ಸಂಸ್ಕಾರವು ನಮ್ಮದಾಗಿದೆ. ಸಮಾಜದಲ್ಲಿ ಮಹಿಳೆಯರಿಗೆ ಕಾಳಜಿ ಮಾಡುವದರೊಂದಿಗೆ ರಕ್ಷಣೆಯನ್ನು ಕೊಡುವ ಸಹೋದರತ್ವದ ಸಂಸ್ಕೃತಿಯನ್ನು ನಾವು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಐಕ್ಯೂಎಸಿ ಸಂಚಾಲಕ ಡಾ. ಪ್ರಭುದೇವ ಮಂಡಿ ಹಾಗೂ ಮಹಿಳಾ ಸಬಲೀಕರಣ ಘಟಕದ ಸಂಚಾಲಕ ಡಾ.ಮೂಬೀನ್ ಬೆಳಗಾಮ್ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕ ಮತ್ತು ಬೋಧ-ಕೇತರ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಮಹಿಳಾ ದಿನಾಚರಣೆಯ ಪ್ರಯುಕ್ತ ಜಿಲ್ಲಾಧಿಕಾರಿ ಜಾನಕಿ. ಕೆ.ಎಂ. ಮತ್ತು ರಶ್ಮಿ ಎಸ್ ಅವರನ್ನು ಸನ್ಮಾನಿಸಲಾಯಿತು. ಮಹಿಳಾ ದಿನಾಚರಣೆ ಅಂಗವಾಗಿ ಏರ್ಪಡಿಸಿದ್ದ ವಿವಿಧ ಸ್ಪರ್ಧೆಗಳ ವಿಜೇತರಿಗೆ ಪ್ರಶಸ್ತಿ ಮತ್ತು ಬಹುಮಾನ ನೀಡಲಾಯಿತು. ಸುಜಾತಾ ನಾವಿ ಪ್ರಾರ್ಥಿಸಿದರು, ಡಾ.ಸುಮನ್ ಮುಚಖಂಡಿ ಸ್ವಾಗತಿಸಿ, ಪರಿಚಯಿಸಿದರು. ಡಾ.ಸುಮಂಗಲಾ ಮೇಟಿ ನಿರೂಪಿಸಿದರು. ಡಾ.ಮುಬೀನ ವಂದಿಸಿದರು.

# ಮಹಿಳಾ ಶಕ್ತಿಯನ್ನು ಗುರುತಿಸುವ ಕಾರ್ಯ ಆಗಬೇಕಿದೆ:ಹೇಮಾ ಯಡಹಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.8-ಪ್ರತಿ ಕ್ಷೇತದಲ್ಲೂ ತನ್ನದೇ ಆಗಿರುವ ಛಾಪು ಮೂಡಿಸುತ್ತಿರುವ ಮಹಿಳೆಯ ಶಕ್ತಿಯನ್ನು ಗುರುತಿಸುವ ಕೆಲಸ ಇನ್ನಷ್ಟು ಗಟ್ಟಿಯಾಗಬೇಕಿದ್ದು, ಮಹಿಳಾ ಶಕ್ತಿಯ ಬೆಳವಣಿಗೆ ಉತ್ತಮ ಸಮಾಜ ನಿರ್ಮಾಣದ ಬೆಳವಣಿಗೆಯಾಗಿದೆ ಎಂದು ನಿವೃತ್ತ ಪ್ರಾಧ್ಯಾಪಕಿ ಹೇಮಾ ಎಸ್.ಯಡಹಳ್ಳಿ ಹೇಳಿದರು. ತಾಲೂಕಿನ ಬೆನಕಟ್ಟಿ ಗ್ರಾಮದಲ್ಲಿ ಶನಿವಾರ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಹೇಮರಡ್ಡಿ ಮಲ್ಲಮ್ಮ ಮಹಿಳಾ ಸೇವಾ ಸಮಿತಿ ಹಮ್ಮಿಕೊಂಡಿದ್ದ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಸಾಮಾಜಿಕ, ಸಾಂಸ್ಕೃತಿಕ, ರಾಜಕೀಯ, ಶೈಕ್ಷಣಿಕ ಕ್ಷೇತ್ರಕ್ಕೆ ನೀಡಿರುವ ಕೊಡುಗೆಯನ್ನು ಗೌರವಿಸುವುದರ ಹಿನ್ನೆಲೆಯಲ್ಲಿ ಮಹಿಳಾ ದಿನಾಚರಣೆ ಆಚರಿಸಲಾಗುತ್ತಿದೆ. ಭೂಮಿ ತಾಯಿಗೆ ಇರುವ ಶಕ್ತಿ ಮಹಿಳೆಯಲ್ಲಿದ್ದು, ಪ್ರತಿ ಕ್ಷೇತ್ರದಲ್ಲೂ ಇಂದು ಪುರುಷನಷ್ಟೇ ಮುಂಚೂಣಿಯಲ್ಲಿದ್ದಾಳೆ, ಹೀಗಾಗಿ ಮಹಿಳಾ ಶಕ್ತಿಯನ್ನು ಗುರುತಿಸುವ ಕಾರ್ಯ ಆಗಬೇಕಿದೆ ಎಂದು ಹೇಮಾ ಯಡಹಳ್ಳಿ ಹೇಳಿದರು.

ಉಪನ್ಯಾಸ ನೀಡಿದ ಶಿಕ್ಷಕಿ ಪ್ರಿಯಾ ಕಟ್ಟಿ, ಕುಟುಂಬ ವ್ಯವಸ್ಥೆಯಂತೆ ಸಾಮಾಜಿಕ ವ್ಯವಸ್ಥೆಯಲ್ಲೂ ಮಹಿಳೆಯ ಪಾತ್ರ ಪ್ರಮುಖವಾಗಿದ್ದು, ಅವಳಿಗೂ ಸಮಾನ ಸ್ಥಾನಮಾನ ಬೇಕಿದೆ. ಹಿಂದಿನಿಂದಲೂ ಮಹಿಳೆಯ ಸಾಧನೆಯಿದ್ದರೂ ಅದನ್ನು ಗುರುತಿಸುವ ಹಾಗೂ ಗೌರವಿಸುವ ಅವಕಾಶಗಳು ಸಿಕ್ಕಿಲ್ಲ. ಸಾವಿತ್ರಿಬಾಯಿ ಫುಲೆ, ಕಲ್ಪನಾ ಚಾವ್ಲಾ, ಕಿರಣ ಬೇಡಿ ಅವರಂತಹ ಅನೇಕ ಮಹಿಳೆಯರ ಸಾಧನೆಯೇ ಸ್ತ್ರೀಶಕ್ತಿಗೆ ನಿದರ್ಶನವಾಗಿವೆ ಎಂದರು. ಅತಿಥಿ ಶಂಕರ ಯಡಹಳ್ಳಿ, ಪ್ರತಿಯೊಬ್ಬ ಮಹಿಳೆ ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಬೇಕು. ಸಂಸ್ಕಾರವನ್ನು ಕಲಿಸಬೇಕು ಎಂದರು. ಕನ್ನಡ ಸಾಹಿತ್ಯ ಪರಿಷತ್ತಿನ ತಾಲ್ಲೂಕು ಅಧ್ಯಕ್ಷ ಪಾಂಡುರಂಗ ಸನ್ನಪ್ಪನವರ ಮಾತನಾಡಿದರು. ಅಧ್ಯಕ್ಷತೆ ವಹಿಸಿದ್ದ ಹೇಮರಡ್ಡಿ ಮಲ್ಲಮ್ಮ ಮಹಿಳಾ ಸೇವಾ ಸಮಿತಿಯ ಅಧ್ಯಕ್ಷೆ ಮಂಜುಳಾ ಕಮತಗಿ, ಕೌಟುಂಬಿಕ, ಸಾಮಾಜಿಕ ವ್ಯವಸ್ಥೆಯಲ್ಲಿ ಮಹಿಳೆ ನಿರ್ವಹಿಸುವ ಪ್ರಮುಖ ಜವಾಬ್ದಾರಿಯನ್ನು ವಿವರಿಸಿ ಮಹಿಳಾ ಶಕ್ತಿಯನ್ನು ಬಲಗೊಳಿಸುವ ಕಾರ್ಯ ಆಗಬೇಕು ಎಂದರು. ಪಂಡಿತ ಮಾಚಾ, ಹನಮಪ್ಪ ಬೆಣ್ಣೂರ, ಹೇಮರಡ್ಡಿ ಮಲ್ಲಮ್ಮ ಮಹಿಳಾ ಸೇವಾ ಸಮಿತಿ ಉಪಾಧ್ಯಕ್ಷೆ ಹೇಮಾ ಬೆಣ್ಣೂರ, ಕಾರ್ಯದರ್ಶಿ ಲಕ್ಷ್ಮೀ ಗಾಡದ, ಖಜಾಂಚಿ ಶಕುಂತಲಾ ಮೆಳ್ಳಿ, ಕೆ.ಪಿ.ಅರಿಷಿಣಗೋಡಿ, ಸಿ.ಎನ್.ಬಾಳಕ್ಕನವರ ಅತಿಥಿಗಳಾಗಿದ್ದರು.

ಮಲ್ಲಮ್ಮ ಅರಕೇರಿ ಪ್ರಾರ್ಥಿಸಿದರು. ರೂಪಾ ಕಟಗೇರಿ ಸ್ವಾಗತಿಸಿದರು. ಮಾಲತಿ ಬಾಳಕ್ಕನವರ ನಿರೂಪಿಸಿದರು. ಮಲ್ಲಮ್ಮ ಕಮತಗಿ ವಂದಿಸಿದರು.

# ಮಾದಕ ವ್ಯಸನದ ವಿರುದ್ಧ

## ರಾಯಭಾರಿಗಳಾಗಿ:ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.8- ಮದ್ಯ ಮತ್ತು ಮಾದಕ ವಸ್ತುಗಳ ವ್ಯಸನಗಳ ವಿರುದ್ಧದ ಹೋರಾಟದಲ್ಲಿ ರಾಯಬಾರಿಗಳಾಗಿ ಕೆಲಸ ಮಾಡಿ ಉತ್ತಮ ಸಮಾಜ ಕಟ್ಟಲು ಮುಂದಾಗಬೇಕು ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ತೋಟಗಾರಿಕೆ ವಿಶ್ವವಿದ್ಯಾಲಯ ರೈತ ವಿಕಾಸ ಭವನದಲ್ಲಿ ಶನಿವಾರ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ರಾಷ್ಟ್ರೀಯ ಸೇವಾ ಯೋಜನೆ ತೋಟಗಾರಿಕೆ ಮಹಾವಿದ್ಯಾಲಯದ ಸಹಯೋಗದಲ್ಲಿ ಹಮ್ಮಿಕೊಂಡ ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮ ಕುರಿತು ವಿಚಾರ ಸಂಕಿರಣ, ನಾಟಕ ಹಾಗೂ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಮಾದಕ ವ್ಯಸನಿಗೆ ತುತ್ತಾದಲ್ಲಿ ಕೌಟುಂಬಿಕ ವ್ಯವಸ್ಥೆ ಹಾಳಾಗುವದರ ಜೊತೆಗೆ ಸಮಾಜದ ಮೇಲೆ ಕೆಟ್ಟ ಪರಿಣಾಮ ಬೀರಲಿದೆ ಎಂದರು.

ಮದ್ಯ ಮತ್ತು ಮಾದಕ ವ್ಯಸನದಿಂದ ಉಂಟಾಗುವ ಪರಿಣಾಮಗಳ ಬಗ್ಗೆ ತಿಳುವಳಿಕೆ ಮೂಡಿಸಬೇಕಿದೆ. ನಿಮ್ಮಲ್ಲಿ ಜ್ಞಾನವಿದೆ ಅದನ್ನು ಬಳಸಿಕೊಂಡು ಮಾದಕ ವಸ್ತುಗಳಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಬೇಕು. ದೊಡ್ಡವರು ತಪ್ಪು ಮಾಡಿದಾಗ ಸಣ್ಣವರು ಹೇಗೆ ಬುದ್ದಿ ಹೇಳುವುದು ಅಂತ ತಿಳಿಯಬಾರದು. ಸರಿ ತಪ್ಪುಗಳನ್ನು ಹೇಳುವಲ್ಲಿ ದೊಡ್ಡವರು ಸಣ್ಣವರು ಅಂತ ಇಲ್ಲ. ಸುಂದರ, ಬಲಿಷ್ಟ ಸಮಾಜ ನಿರ್ಮಾಣದಲ್ಲಿ ತಮ್ಮ ಪಾತ್ರ ಮಹತ್ವವಾಗಿದ್ದು, ಈ ಕಾರ್ಯಾಗಾರ ನಿಮಗೆ ಪ್ರೇರಣೆಯಾಗಲಿದೆ ಎಂದರು.

ಅತಿಥಿಗಳಾಗಿ ಆಗಮಿಸಿದ್ದ ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ.ಬಾಲಾಜಿ ಕುಲಕರ್ಣಿ ಮಾತನಾಡಿ, ವ್ಯಸನಗಳಲ್ಲಿ ಒಳ್ಳೆಯ ಹಾಗೂ ಕೆಟ್ಟ ವ್ಯಸನಗಳಿವೆ. ಇವತ್ತಿನ ಕುಟುಂಬಗಳು ಬೀದಿಗೆ ಬರಲು ಕಾರಣ ಮದ್ಯಪಾನಿಗಳಿಂದ. ಇಂದಿನ ಯುವಕರು ವ್ಯಸನಗಳ ದಾಸರಾಗದೇ ಒಳ್ಳೆಯ ವಿದ್ಯಾರ್ಥಿಗಳಾಗಿ ವ್ಯಸನಿಗಳಿಗೆ ತಿಳುವಳಿಕೆ ನೀಡಲು ರಾಯಬಾರಿಗಳಾಗಬೇಕು. ಬಲಿಷ್ಟ ಸಮಾಜ, ಬಲಿಷ್ಟ ರಾಷ್ಟ್ರ ನಿರ್ಮಾಣ ಮಾಡಲು ಸದೃಡ, ಮಾನಸಿಕವಾಗಿ ಬಲಿಷ್ಟವಾಗಬೇಕಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ತೋಟಗಾರಿಕೆ ವಿವಿಯ ಕುಲಪತಿ ಡಾ.ವಿಷ್ಣುವರ್ಧನ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಉನ್ನತ ಶಿಕ್ಷಣ ವಿದ್ಯಾರ್ಥಿಗಳೇ ಮಾದಕ ವ್ಯಸನಿಗಳಾಗುತ್ತಿದ್ದಾರೆ. ಇಂತಹ ವಿದ್ಯಾರ್ಥಿಗಳ ಪೋಷಕರು ಸಿರಿವಂತರಾಗಿದ್ದು, ನೈತಿಕತೆಯ ಪಾಠದ ಕೊರತೆಯಿಂದಾಗಿ ಮಕ್ಕಳ ಕಡೆ ಗಮನ ಹರಿಸದೇ ಇರುವದರಿಂದ ವ್ಯಸನಿಗಳಾಗುತ್ತಿದ್ದಾರೆ. ಅಲ್ಲದೇ ಸಹವಾಸ ದೋಷದಿಂದಲೂ ಸಹ ವಿದ್ಯಾರ್ಥಿಗಳು ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ. ಅತೀ ಹೆಚ್ಚು ಜಾನನಾಗಿದ್ದವನು ವ್ಯಸನಿಯಾಗಿದ್ದರೆ, ಶಿಕ್ಷಣ-ಕ್ಕೂ ಅವನಿಗೂ ಅವನ ಕುಟುಂಬಕ್ಕೆ ಇದು ಮಾರಕವಾಗಿರುತ್ತದೆ. ಕುಟುಂಬದ ಒಬ್ಬ ವ್ಯಸನಿಯಿಂದ ಇಡೀ ಕುಟುಂಬ ಹಾಳಾಗುತ್ತದೆ ಎಂಬುದನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕಿದೆ ಎಂದರು.

ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಮನೋವೈದ್ಯಕೀಯ ಮುಖ್ಯಸ್ಥ ಡಾ.ನಾರಾಯಣ ಮುತಾಲಿಕ ಮದ್ಯ ಮತ್ತು ಮಾದಕವಸ್ತುಗಳಿಂದಾಗುವ ದುಷ್ಪರಿಣಾಮಗಳ ಬಗ್ಗೆ ಉಪನ್ಯಾಸ ಹಾಗೂ ಸಂವಾದ ನಡೆಸಿದರು.

ಪ್ರಾರಂಭದಲ್ಲಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮ ಸಂಯೋಜಕ ಡಾ.ವಸಂತ ಗಾಣಿಗೇರ, ತೋಟಗಾರಿಕೆ ವಿವಿ ಪ್ರಾರಂಭಗೊಂಡಾಗಿನಿಂದ ಕೇವಲ ರೈತರ ಹಾಗೂ ತೋಟಗಾರಿಕೆ ಕಾರ್ಯಗಳನ್ನು ಮಾತ್ರ ಮಾಡದೇ ವಿದ್ಯಾರ್ಥಿಗಳಿಗೆ, ಸುಂದರ ಸಮಾಜ ನಿರ್ಮಾಣಕ್ಕಾಗಿ ಅನೇಕ ಕಾರ್ಯಗಳನ್ನು ಮಾಡುತ್ತಿದ್ದು, ಈ ಬಾರಿ ಅಪರೂಪ ಎಂಬಂತೆ ದುಶ್ಚಟಗಳಿಂದಾಗುವ ದುಷ್ಪರಿಣಾಮಗಳ ಕುರಿತು ಆಯೋಜಿಸಿರುವ ಕಾರ್ಯಕ್ರಮ ಅರ್ಥಪೂರ್ಣವಾಗಿದೆ ಎಂದರು.

ಈ ಸಂದರ್ಭದಲ್ಲಿ ಕೆರೂರಿನ ಬನಶಂಕರಿ ಬೀದಿನಾಟಕ ಕಲಾತಂಡದಿಂದ ಜಾಗೃತಿ ನಾಟಕ ಪ್ರದರ್ಶನ ನಡೆಯಿತು. ಕಾರ್ಯಕ್ರಮದಲ್ಲಿ ತೋಟಗಾರಿಕೆ ವಿವಿಯ ಕುಲಸಚಿವ ಮಹಾದೇವ ಮುರಗಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕಿ ಕಸ್ತೂರಿ ಪಾಟೀಲ, ತೋಟಗಾರಿಕೆ ಮಹಾವಿದ್ಯಾಲಯದ ಕಾರ್ಯಕ್ರಮ ಅಧಿಕಾರಿಗಳಾದ ಡಾ.ಗಿರಿಜಾ ಯಂಡಿಗೇರಿ, ಡಾ.ನೂರಲ್ಲಾ ಹಾವೇರಿ ಉಪಸ್ಥಿತರಿದ್ದರು. ಶಂಕರಲಿಂಗ ದೇಸಾಯಿ ಕಾರ್ಯಕ್ರಮ ನಿರೂಪಿಸಿದರು.

# ಕೌಶಲ್ಯ ಕ್ಷೇತ್ರಕ್ಕೆ ಮುಖ್ಯಮಂತ್ರಿ ನೀಡಿರುವ ಕೊಡುಗೆಗಳು ಅಮೂಲ್ಯ: ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.07– ಜಾಗತಿಕ ಮಟ್ಟದಲ್ಲಿ ಸವಾಲು ಒಡ್ಡುವ ರೀತಿಯಲ್ಲಿ ನಮ್ಮ ಕರುನಾಡಿನ ಯುವಸಮೂಹವನ್ನು ತಯಾರು ಮಾಡುವ ನಿಟ್ಟಿನಲ್ಲಿ ನಮ್ಮ ಸರ್ಕಾರ ಬದ್ಧವಾಗಿದ್ದು, ಈ ನಿಟ್ಟಿನಲ್ಲಿ ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೌಶಲ್ಯಾಭಿವೃದ್ಧಿ ಕ್ಷೇತ್ರಕ್ಕೆ ಅಮೂಲ್ಯ ಕೊಡುಗೆಗಳನ್ನು ನೀಡಿದ್ದಾರೆ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣ್ ಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಾಖಲೆಯ ಹದಿನಾರನೇ ಬಜೆಟ್ ಮಂಡಿಸಿದ ನಂತರ ಸಚಿವರು ಪತ್ರಿಕಾ ಪ್ರಕಟಣೆಯಲ್ಲಿ ಅಭಿಪ್ರಾಯ ತಿಳಿಸಿದ್ದಾರೆ.



ನಿರುದ್ಯೋಗಿಗಳಾಗಿರುವ ಪದವೀಧರರಿಗೆ ಹಾಗೂ ಡಿಪ್ಲೋಮ ಪಡೆದವರಿಗೆ ನಿರುದ್ಯೋಗ ಭತ್ಯೆಯನ್ನು ನೀಡಲು ನಮ್ಮ ಸರ್ಕಾರವು "ಯುವನಿಧಿ" ಯೋಜನೆಯನ್ನು ಅನುಷ್ಠಾನಗೊಳಿಸಿದೆ. ಈಗಾಗಲೇ ಸುಮಾರು 2.58 ಲಕ್ಷ ಯುವಕರು ಈ ಯೋಜನೆಯಡಿ ನೋಂದಾಯಿಸಿಕೊಂಡಿದ್ದು, 286 ಕೋಟಿ ರೂ. ನೇರ ನಗದು ವರ್ಗಾವಣೆ ಮಾಡಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ನಿರುದ್ಯೋಗ ಭತ್ಯೆ ನೀಡುವುದರೊಂದಿಗೆ ಈ ಯುವಕರಿಗೆ ಇಂಡಸ್ಟ್ರಿಲಿಂಕೇಜ್ ಸೆಲ್ (ಖಟಿಜಣಡಿಥಿ ಐಟಿಇ-ಚಿರಿಜ ಅಜಟಟ) ಅಡಿ ಕೌಶಲ್ಯ ತರಬೇತಿ ನೀಡಲಾಗುವುದು. ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯನ್ನು (ಅಒಏಏಙ) ಪ್ರಾರಂಭಿಸಲಾಗಿತ್ತು. ಪ್ರಸ್ತುತ, ರಾಜ್ಯದ ಯುವಕರ ಉದ್ಯೋಗಾರ್ಹತೆ ಮತ್ತು ಉದ್ಯಮಶೀಲತೆಯನ್ನು ಇನ್ನಷ್ಟು ಉತ್ತೇಜಿಸಲು ಯೋಜನೆಯ ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಸಿಎಂಕೆಕೆವೈ–2.0 (CMKKY 2.0) ಅನ್ನು ಜಾರಿಗೊಳಿಸಲಾಗುವುದು ಎಂದು ತಿಳಿಸಿದರು. ವಿದ್ಯಾರ್ಥಿಗಳು ಭವಿಷ್ಯದಲ್ಲಿ ಸೂಕ್ತ ವೃತ್ತಿಯನ್ನು ಆಯ್ಕೆ ಮಾಡಿಕೊಳ್ಳಲು ಮಾರ್ಗದರ್ಶನವನ್ನು ಒದಗಿಸಲು ನನ್ನ ವೃತ್ತಿ, ನನ್ನ ಆಯ್ಕೆ ಕಾರ್ಯಕ್ರಮದಡಿ ಸರ್ಕಾರಿ ಶಾಲಾ/ಕಾಲೇಜುಗಳಲ್ಲಿನ 2.30 ಲಕ್ಷ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ನೀಡಲಾಗುವುದು ಎಂದು ಸಚಿವರು ವಿವರಿಸಿದರು.

ವಿಶ್ವ ಕೌಶಲ್ಯಸ್ಪರ್ಧೆಯ ಪೂರ್ವ ಸಿದ್ಧತೆಗಾಗಿ ಆಯೋಜಿಸಲಾಗುವ ರಾಷ್ಟ್ರೀಯ ಮಟ್ಟದ ಇಂಡಿಯಾ ಸ್ಕಿಲ್ 2026 (IndiaSkills-2026) ಸ್ಪರ್ಧೆಯನ್ನು ಬೆಂಗಳೂರಿನಲ್ಲಿ ಆಯೋಜಿಸಲು ಉದ್ದೇಶಿಸಲಾಗಿದೆ. ಅಳಿವಿನಂಚಿನಲ್ಲಿರುವ ಪಾರಂಪರಿಕ ಮತ್ತು ಪ್ರಾದೇಶಿಕ ಕೌಶಲ್ಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸಲು 2,000 ಅಭ್ಯರ್ಥಿಗಳಿಗೆ ಅಗತ್ಯವಿರುವ ಟೂಲ್ ಕಿಟ್‌ಗಳೊಂದಿಗೆ ಅಲ್ಪಾವಧಿ ತರಬೇತಿಯನ್ನು ನೀಡಲಾಗುವುದು ಎಂದು ತಿಳಿಸಿದರು. ಲಂಬಾಣಿ ಜನಾಂಗದ ಕಸೂತಿ ಕಲೆಯ ಬಗ್ಗೆ ತರಬೇತಿಯನ್ನು 1,000 ಅಭ್ಯರ್ಥಿಗಳಿಗೆ ದಾವಣಗೆರೆ ಮತ್ತು ಬೀದರ್ ಜಿಲ್ಲೆಗಳಲ್ಲಿನ ಕೌಶಲ್ಯ ತರಬೇತಿ ಕೇಂದ್ರಗಳಲ್ಲಿ ನೀಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಡಾ. ಶರಣ್ ಪ್ರಕಾಶ್ ಪಾಟೀಲ್ ತಿಳಿಸಿದರು. ಗೃಹಲಕ್ಷ್ಮಿ ಯೋಜನೆಯ ಯಜಮಾನಿಯರನ್ನು ಸ್ವಸಹಾಯ ಗುಂಪುಗಳ ಸದಸ್ಯರುಗಳನ್ನಾಗಿಸಿ ರಾಜ್ಯಮಟ್ಟದ ಅಕ್ಕ ಕೋ-ಆಪರೇಟಿವ್ ಸೊಸೈಟಿ ವ್ಯಾಪ್ತಿಗೆ ತರಲಾಗುವುದು. ರಾಷ್ಟ್ರೀಯ ಜೀವನೋಪಾಯ ಅಭಿಯಾನದಡಿ ಮಹಿಳಾ ಸ್ವ–ಸಹಾಯ ಸಂಘಗಳಿಂದ ಆಯ್ದ 50 ಸ್ಥಳಗಳಲ್ಲಿ ಶಿಶು ಪಾಲನೆಗಾಗಿ ವಾತ್ಸಲ್ಯ ಕೇಂದ್ರಗಳನ್ನು ಸ್ಥಾಪಿಸಲಾಗುವುದು ಎಂದು ಸಚಿವರು ತಿಳಿಸಿದರು. ಇಂದಿರಾ ಕ್ಯಾಂಟೀನ್‌ಗಳ ನಿರ್ವಹಣೆಯನ್ನು ರಾಷ್ಟ್ರೀಯ ಜೀವನೋಪಾಯ ಅಭಿಯಾನದ ಸ್ವ–ಸಹಾಯ ಸಂಘಗಳ ಮಹಿಳೆಯರ ಮೂಲಕ ನಿರ್ವಹಿಸುವ ವ್ಯವಸ್ಥೆಯನ್ನು ಪ್ರಾಯೋಗಿಕವಾಗಿ 10 ನಗರ ಪ್ರದೇಶಗಳಲ್ಲಿ ಪ್ರಾರಂಭಿಸಲಾಗುವುದು ಎಂದು ಬಜೆಟ್‌ನಲ್ಲಿ ಘೋಷಿಸಲಾಗಿದೆ ಎಂದು ಸಚಿವರು ವಿವರಿಸಿದರು.

ಅಂತಾರಾಷ್ಟ್ರೀಯ ಉದ್ಯೋಗ ಮೇಳ: ರಾಜ್ಯದಲ್ಲಿನ ನರ್ಸಿಂಗ್ ವಿದ್ಯಾರ್ಥಿಗಳಿಗೆ ಜರ್ಮನ್, ಇಟಾಲಿಯನ್, ಸ್ಪಾನಿಷ್ ಹಾಗೂ ಇತರೆ ವಿದೇಶಿ ಭಾಷಾ ತರಬೇತಿ ನೀಡಲಾಗುವುದು. ಇದರಿಂದ ನರ್ಸಿಂಗ್ ವಿದ್ಯಾರ್ಥಿಗಳಿಗೆ ವಿದೇಶದಲ್ಲಿಯೂ ಉದ್ಯೋಗ ಪಡೆಯಲು ಅನುಕೂಲವಾಗುತ್ತದೆ. ಅಂತಾರಾಷ್ಟ್ರೀಯ ವಲಸೆ ಕೇಂದ್ರದ ಮೂಲಕ ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ಉದ್ಯೋಗ ಮೇಳ ಆಯೋಜಿಸಲಾಗುವುದು ಎಂದು ಮುಖ್ಯಮಂತ್ರಿಗಳು ಬಜೆಟ್‌ನಲ್ಲಿ ಘೋಷಿಸಿರುವ ಅತ್ಯಂತ ಗಮನಾರ್ಹ ಯೋಜನೆಗಳಲ್ಲಿ ಒಂದಾಗಿದೆ ಎಂದು ಸಚಿವರು ತಿಳಿಸಿದರು.

ಯುವ ಸಬಲೀಕರಣ ಹಾಗೂ ಯುವ ಸಮುದಾಯವನ್ನು ಜಾಗತಿಕ ಮಟ್ಟಕ್ಕೆ ಸನ್ನದ್ಧ ಮಾಡಲು ನಮ್ಮ ಕಾಂಗ್ರೆಸ್ ಸರ್ಕಾರ ಬದ್ಧವಾಗಿದೆ. ಈ ನಿಟ್ಟಿನಲ್ಲಿಯೇ ಬಜೆಟ್ ನಲ್ಲಿ ಕೌಶಲ್ಯಾಭಿವೃದ್ಧಿ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ಡಾ. ಶರಣ್ ಪ್ರಕಾಶ್ ಪಾಟೀಲ್ ಹೇಳಿದ್ದಾರೆ.

# ಸರ್ವ ಸ್ಪರ್ಶಿ, ಸರ್ವ ವ್ಯಾಪಿ, ಸರ್ವ ಅಭಿವೃದ್ಧಿ ಬಜೆಟ್: ಡಾ.ಶರಣ್ ಪ್ರಕಾಶ್ ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.07 – ಹಣಕಾಸು ಸಚಿವರು ಆಗಿರುಗ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಮಂಡಿಸಿದ ದಾಖಲೆಯ 16ನೇ ಬಜೆಟ್ ನಿಜಕ್ಕೂ ಸ್ವೀಟ್ 16 ಆಗಿದೆ. ಏಕೆಂದರೆ ಈ ಬಜೆಟ್ ಆಶಾದಾಯಕ ಮಾತ್ರವಲ್ಲ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿದೆ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣ್ ಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಾಖಲೆಯ 16ನೇ ಬಜೆಟ್ ಮಂಡಿಸಿದ ನಂತರ ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್ ಪತ್ರಿಕಾ ಪ್ರಕಟಣೆಯಲ್ಲಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.



ಆರ್ಥಿಕ ತಜ್ಞರಾಗಿರುವ ಮುಖ್ಯಮಂತ್ರಿಗಳು ಸರ್ವಸ್ಪರ್ಶಿ ಬಜೆಟ್ ಮಂಡಿಸಿದ್ದಾರೆ. ಇದು ಅವರ ಅನುಭವ ಮತ್ತು ಸರ್ವರ ಏಳಿಗೆಗೆ ಅವರು ಹೊಂದಿರುವ ಮನಸ್ಥಿತಿಗೆ ಸಾಕ್ಷಿಯಾಗಿದೆ ಎಂದರು. ನಮ್ಮ ವೈದ್ಯಕೀಯ ಶಿಕ್ಷಣ ಇಲಾಖೆ, ಕೌಶಲ್ಯಾಭಿವೃದ್ಧಿ ಇಲಾಖೆಗೂ ಹೆಚ್ಚುವರಿ ಕೊಡುಗೆಗಳನ್ನು ನೀಡಿದ್ದಾರೆ. ಎಲ್ಲ ಇಲಾಖೆಗಳಿಗೂ ಸಿದ್ದರಾಮಯ್ಯ ಅವರು ಅನುದಾನ ಹಂಚಿಕೆ ಮಾಡುವ ಮೂಲಕ ಸಮಗ್ರ ಅಭಿವೃದ್ಧಿ ದೃಷ್ಟಿಕೋನ ಹೊಂದಿದ್ದಾರೆ ಎಂದು ಸಚಿವರು ತಿಳಿಸಿದ್ದಾರೆ. ಪ್ರಮುಖವಾಗಿ ನಮ್ಮ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಿಗೆ ಈ ಬಾರಿಯ ಬಜೆಟ್‌ನಲ್ಲಿ ಹೆಚ್ಚಿನ ಕೊಡುಗೆಗಳು ನೀಡಲಾಗಿದೆ. ನಮ್ಮ ಕಾಂಗ್ರೆಸ್ ಪಕ್ಷ ನುಡಿದಂತೆ ನಡೆಯುತ್ತದೆ ಎನ್ನುವುದಕ್ಕೆ ಸಾಕ್ಷಿಯಾಗಿದೆ ಸಿದ್ದರಾಮಯ್ಯ ಅವರು ಮಂಡಿಸಿದ 2025–2026ನೇ ಬಜೆಟ್ ಎಂದು ಡಾ. ಶರಣ್ ಪ್ರಕಾಶ್ ಪಾಟೀಲ್ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

### ಸಹಕಾರ ಸಂಘಗಳಿಗೆ ಒಂದು ದಿನದ ರಾಜ್ಯಮಟ್ಟದ

# ವಿಶೇಷ ತರಬೇತಿ ಕಾರ್ಯಾಗಾರ ಮಾರ್ಚ 11ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ಶಹಾಪೂರ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ಯಾದಗಿರಿ ಜಿಲ್ಲಾ ಸಹಕಾರ ಯೂನಿಯನ್ ಒಕ್ಕೂಟ ನಿ ಯಾದಗಿರಿ ಹಾಗೂ ಸಹಕಾರ ಇಲಾಖೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ದಿನಾಂಕ 11–03–2025 ಮಂಗಳವಾರದಂದು ಬೆಳಗ್ಗೆ 10 :30ಕ್ಕೆ ಒಂದು ದಿನದ ರಾಜ್ಯ ಮಟ್ಟದ ವಿಶೇಷ ತರಬೇತಿ ಕಾರ್ಯಾಗಾರವನ್ನು ಶಹಾಪೂರ ಪಟ್ಟಣದ ಮೋಟಗಿ ಹಾಲ್ ನಲ್ಲಿ ಸರಕಾರದ ಸಣ್ಣ ಕೈಗಾರಿಕಾ ಸಚಿವರು ಯಾದಗಿರ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪಗೌಡ ದರ್ಶನಾಪೂರ ಉದ್ಘಾಟನಾ ಮಾಡಲಿದ್ದು ಸಹಕಾರ ಪಿತಾಮಹ ಭಾವಚಿತ್ರಕ್ಕೆ ಪುಷ್ಪಾರ್ಚಣೆ ಜಿಟಿ ದೇವೆಗೌಡ ಅಧ್ಯಕ್ಷರು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ ಬೆಂಗಳೂರು ಘನ ಉಪಸ್ಥಿತಿ ಯಾದಗಿರ ಮತಕ್ಷೇತ್ರದ ಚನ್ನಾರಡ್ಡಿ ಪಾಟೀಲ್ ತೂನ್ನೂರ ವಹಿಸಲಿದ್ದು ಶರಣುಗೌಡ ಕಂದಕೂರ ರಾಜಾ ವೇಣುಗೋಪಾಲ ನಾಯಕ ಕಾರ್ಯಗಾರ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾರ್ಯಾಗಾರ ಕಾರ್ಯಕ್ರಮದ ನೇತೃತ್ವವನ್ನು ಯಾದಗಿರ ಜಿಲ್ಲಾ ಸಹಕಾರಿ ಯೂನಿಯನ್ ಒಕ್ಕೂಟದ ಅಧ್ಯಕ್ಷರಾದ ವಿಶ್ವನಾಥರಡ್ಡಿ ದರ್ಶನಾಪೂರ ವಹಿಸಲಿದ್ದು ಮುಖ್ಯ ಅತಿಥಿಯಾಗಿ ಆಗಮಿಸುವ ಮಲ್ಲಿಕಾರ್ಜುನ ಕವಟಗಿಮಠ ಶಕುಂತಲಾ ಬೆಲ್ದಾಳ ಶೇಖರಗೌಡ ಮಾಲಿ ಪಾಟೀಲ ಸೋಮಶೇಖರ್ ಗೊನಾಯಕ್ ಸುರೇಶ್ ಸಜ್ಜನ ಎಂ ನಾರಾಯಣ ವಿಶ್ವರಾಧ್ಯ ಸತ್ಯಂಪೇಠ ವಿಶ್ವನಾಥ ಮಲಕೋಡ್ ಕೆ ಎಸ್ ನವಿನ್ ಸಿಮಾ ಫಾರೋಜ ಅನೇಕರು ಈ ಕಾರ್ಯಾಗಾರದಲ್ಲಿ ಯಾದಗಿರ ಜಿಲ್ಲೆಯ ಎಲ್ಲಾ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಕಾರ್ಯದರ್ಶಿ ಮತ್ತು ಸದಸ್ಯರು ಬಾಗಿಯಾಗಬೇಕಂದು ಮನವಿ ಮಾಡಿದ ಯಾದಗಿರ ಜಿಲ್ಲಾ ಸಹಕಾರಿ ಯೂನಿಯನ್ ಒಕ್ಕೂಟದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾದ ರೇಖಾ ಗಾಯ್ಕವಾಡ್ ಪತ್ರಿಕೆ ಪ್ರಕಟಣೆ ತಿಳಿಸಿದ್ದಾರೆ ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ+91 81474 23600

# ಜಿಲ್ಲಾಸ್ಪತ್ರೆ ಆರೋಗ್ಯ ಇಲಾಖೆಗೆ ಹಸ್ತಾಂತರಿಸಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ನಗರದ ಹೊರವಲಯದ ಪ್ರದೇಶದಲ್ಲಿರುವ ಜಿಲ್ಲಾ ಆಸ್ಪತ್ರೆಯನ್ನು ಆರೋಗ್ಯ ಇಲಾಖೆಗೆ ಹಸ್ತಾಂತರ ಮಾಡಲು ಜಿಲ್ಲಾ ಆಸ್ಪತ್ರೆಯ ವೈದ್ಯರು ಮತ್ತು ಸಿಬ್ಬಂದಿಯವರು ಜಿಲ್ಲಾ ಉಸ್ತುವಾರಿ ಸಚಿವರದ ಶರಣಬಸಪ್ಪಗೌಡ ದರ್ಶನಾಪುರವರಿಗೆ ಶನಿವಾರ ಕಲಬುರಗಿಯ ಅವರ ನಿವಾಸಕ್ಕೆ ಭೇಟಿ ನೀಡಿ ಮನವಿ ಸಲ್ಲಿಸಿದರು.

ಸಚಿವರು ಮನವಿಗೆ ಸ್ಪಂದನೆ ನೀಡಿ ನಗರ ಪ್ರದೇಶದಲ್ಲಿರುವ ಜಿಲ್ಲಾ ಆಸ್ಪತ್ರೆಯಲ್ಲಿ ಎಲ್ಲಾ ರೀತಿಯ ಚಿಕಿತ್ಸೆಗಳು ದೊರಕುವಂತೆ ಹಾಗೂ ತುರ್ತು ಚಿಕಿತ್ಸಾ ಘಟಕ ಸೇರಿದಂತೆ ಮತ್ತು ಪ್ರಸ್ತುತ ಆಸ್ಪತ್ರೆಯನ್ನು ಆರೋಗ್ಯ ಇಲಾಖೆಗೆ ಹಸ್ತಾಂತರಿಸಲು ಆರೋಗ್ಯ ಸಚಿವರಲ್ಲಿ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದೆಂದು ಭರವಸೆ ನೀಡಿದರು. ಈ ಹಿಂದೆ ಸಾರ್ವಜನಿಕರಿಂದ ಹಾಗೂ ಸಂಘಟನೆಗಳಿಂದ ನಗರ ಪ್ರದೇಶದಲ್ಲಿ ಜಿಲ್ಲಾ ಆಸ್ಪತ್ರೆಯನ್ನು ಯಥಾ ಪ್ರಕಾರ ಕಾರ್ಯನಿರ್ವಹಿಸುವಂತೆ ಸಾರ್ವಜನಿಕರಿಂದ ಒತ್ತಾಯ ವಿರುತ್ತದೆ ಎಂದು ತಿಳಿಸಿದರು. ಈಗಿರುವ ಆಸ್ಪತ್ರೆಯು ಸುಮಾರು ಹತ್ತು ಕಿಲೋಮೀಟರ್ ದೂರ ಇರುವುದರಿಂದ ಬಡ ಸಾರ್ವಜನಿಕ ರೋಗಿಗಳಿಗೆ ಬಹಳ ತೊಂದರೆ ಆಗಿರುವ ಸುದ್ದಿಗಳು ತಿಳಿದಿರುತ್ತವೆ ಆದಷ್ಟು ಬೇಗನೆ ಈ ವಿಷಯವನ್ನು ಪ್ರಸ್ತಾಪಿಸಿ ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ಕ್ರಮ ಕೈಗೊಳ್ಳುವ ಬಗ್ಗೆ ಸಕರಾತ್ಮಕವಾಗಿ ಸ್ಪಂದಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾಕ್ಟರ್ ರಿಜ್ವಾನ ಆಫ್ರಿನ್, ತಜ್ಞವೈದ್ಯರಗಳಾದ ಡಾ. ಮಹೇಶ್ ರೆಡ್ಡಿ, ಡಾ ಶಿವಾನಂದರೆಡ್ಡಿ, ಡಾ. ಶಾಂತಲಾ, ಡಾ ಶರಣಬಸಪ್ಪ, ಡಾ. ಪ್ರೀತಿ ಪಾಟೀಲ್, ಡಾ. ಶ್ವೇತಾ ಜಾಕಾ, ಸಹಾಯಕ ಆಡಳಿತ ಅಧಿಕಾರಿ ಶ್ರೀ ದುರ್ಗಪ್ಪ, ಶುಶ್ರೂಷಕ ಅಧಿಕ್ಷಕರು ಶ್ರೀಮತಿ ಸರೋಜಾ ಅಡಕಿ, ಹಾಗೂ ಎಲ್ಲಾ ಸಿಬ್ಬಂದಿ ವರ್ಗದವರು ಹಾಜರಿದ್ದರು.

### ಶಾಸಕ ಚೆನ್ನಾರೆಡ್ಡಿ ಪಾಟೀಲ್ ತನ್ನೂರು ಬಣ್ಣನೆ

# ಜನಪರ,ದೂರದೃಷ್ಟಿಯ ಬಜೆಟ್

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಬುದ್ಧ, ಬಸವ, ಅಂಬೇಡ್ಕರ್ ಅವರ ಆಶಯದಂತೆ ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು ಎಂಬ ತತ್ವವನ್ನು ಅಳವಡಿಸಿಕೊಂಡಿರುವ ಹಣಕಾಸು ಸಚಿವರೂ ಆಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿರುವ ಬಜೆಟ್ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿ ಹಾಗೂ ರಾಜ್ಯದ ಪ್ರತಿಯೊಬ್ಬ ಪ್ರಜೆಯ ಕಲ್ಯಾಣದಿಂದ ಕೂಡಿದ್ದು ಜನಪರ ಹಾಗೂ ದೂರದೃಷ್ಟಿಯ ಬಜಟ್ ಆಗಿದೆ ಎಂದು ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ ಪ್ರತಿಕ್ರಿಯೆ ನೀಡಿದ್ದಾರೆ.



ಯಾದಗಿರಿ ಮತಕ್ಷೇತ್ರದ ನೂತನ ತಾಲೂಕು ಕೇಂದ್ರ ವಡಗೇರಾದಲ್ಲಿ ಆಡಳಿತಾತ್ಮಕ ಪ್ರಜಾಸೌಧ ನಿರ್ಮಾಣಕ್ಕೆ ಅಸ್ತು ಎಂದಿದ್ದಾರೆ. ಯಾದಗಿರಿ ಜಿಲ್ಲಾ ಕೇಂದ್ರದಲ್ಲಿ ಸರ್ಕಾರಿ ನರ್ಸಿಂಗ್ ಕಾಲೇಜು ನಿರ್ಮಾಣಕ್ಕೆ ರೂ.6 ಕೋಟಿ ಮೀಸಲಿರಿಸಲಾಗಿದೆ. ಶಹಾಪುರ ಪಟ್ಟಣದ 100 ಹಾಸಿಗೆಯ ತಾಲೂಕ ಆಸ್ಪತ್ರೆಯನ್ನ 150 ಹಾಸಿಗೆಗೆ ಹೆಚ್ಚಿಸಲಾಗವುದು. ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ನೀರಾವರಿ ಹಾಗೂ ಕೃಷಿ ಕ್ಷೇತ್ರಕ್ಕೆ ಬಜೆಟ್‌ನಲ್ಲಿ ಆಧ್ಯತೆ ನೀಡಲಾಗಿದೆ.

ರಾಜ್ಯದ ಜನಸಾಮಾನ್ಯರ ಆಶಾವಾದಕ್ಕೆ ಸ್ಪಂದಿಸುತ್ತಾ, ಸಮಗ್ರ ಅಭಿವೃದ್ಧಿ ಮತ್ತು ಸಮತೋಲನದ ದೃಷ್ಟಿಕೋನದೊಂದಿಗೆ ರೂಪುಗೊಂಡ 2025–26ನೇ ಸಾಲಿನ ಜನಪರ, ಪ್ರಗತಿಪರ ಬಜೆಟ್ ಇದಾಗಿದೆ. 4.09 ಲಕ್ಷ ಕೋಟಿ ರೂಪಾಯಿ ಗಾತ್ರದ ಈ ಬಜೆಟ್‌ನಲ್ಲಿ ರಾಜ್ಯದ ಆರ್ಥಿಕ ಸಬಲತೆ, ಸಾಮಾಜಿಕ ನ್ಯಾಯ ಹಾಗೂ ಬಲಿಷ್ಠ ಮೂಲ ಸೌಕರ್ಯ ನಿರ್ಮಾಣಕ್ಕೆ ನಾಂದಿಯಾಗಲಿದೆ. ಗ್ಯಾರಂಟಿ ಯೋಜನೆಗಳ ಜತೆಗೆ ಕೃಷಿ, ಶಿಕ್ಷಣ, ಆರೋಗ್ಯ, ಉದ್ಯೋಗ ಮತ್ತು ಕೈಗಾರಿಕಾ ವಲಯಗಳ ಸಮಗ್ರ ಅಭಿವೃದ್ಧಿಗೆ ಒತ್ತು ನೀಡಲಾಗಿದೆ.

ರೈತರಿಗೆ ಬಂಪರ್ ಗಿಫ್ಟ್...


ಬಜೆಟ್‌ನಲ್ಲಿ ಮುಖ್ಯಮಂತ್ರಿಗಳು ರೈತರಿಗೆ ಬಂಪರ್ ಗಿಫ್ಟ್ ಕೊಟ್ಟಿದ್ದಾರೆ. ಕೃಷಿ, ತೋಟಗಾರಿಕೆ, ರೇಷ್ಮೆ, ಪಶುಸಂಗೋಪನೆ, ಮೀನುಗಾರಿಕೆ ಮತ್ತು ಗ್ರಾಮೀಣಾಭಿವೃದ್ಧಿ ಕ್ಷೇತ್ರಗಳಿಗೆ ಹೆಚ್ಚಿನ ಮಹತ್ವ ನೀಡಿದ್ದಾರೆ. ಕೃಷಿಯಾಂತ್ರೀಕರಣ ಕಾರ್ಯಕ್ರಮದಡಿ 50 ಸಾವಿರ ರೈತರಿಗೆ ಸಹಾಯಧನ ಒದಗಿಸಲು 428 ಕೋಟಿ ರೂ. ಅನುದಾನ ಒದಗಿಸಿದ್ದಾರೆ.

ತೋಟಗಾರಿಕೆ ಅಭಿವರ್ಧಿ ಯೋಜನೆಗೆ ರೂ.95 ಕೋಟಿ ಅನುದಾನ ಕಲ್ಪಿಸಲಾಗಿದೆ. ದೇಶಿ ತಳಿಗಳ ಬೀಜಕ್ಕಾಗಿ ಬ್ಯಾಂಕ್ ಸ್ಥಾಪನೆ ಪ್ರಸ್ತಾಪಿಸಿದ್ದಾರೆ. ಸುಮಾರು 1.81 ಲಕ್ಷ ರೈತರಿಗಾಗಿ ಹನಿ, ತುಂತುರು ನೀರನ ಘಟಕ ತೆರೆಯಲು ಬರೋಬ್ಬರಿ ರೂ.440 ಕೋಟಿ ಅನುದಾನ ಬಿಡುಗೆ ಮಾಡಲಾಗಿದೆ. ತೊಗರಿ ಬೆಳೆಗೆ ನೂತನ ತಂತ್ರಜ್ಞಾನ ಅಳವಡಿಸಲು ರೂ.88 ಕೋಟಿ ಮೀಸಲಿರಿಸಲಾಗಿದೆ. ಮಳೆಯಾಶ್ರಿತ ಪ್ರದೇಶದಲ್ಲಿ ಕೃಷಿ ಉತ್ಪಾದನೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಅಂದಾಜು 1.81 ಲಕ್ಷ ರೈತರಿಗೆ ಹನಿ ಮತ್ತು ತುಂತುರು ನೀರಾವರಿ ಘಟಕಗಳ ಅಳವಡಿಕೆಗೆ ರೂ. 440 ಕೋಟಿ ಒದಗಿಸಲಾಗಿದೆ. ತೊಗರಿ ಬೆಳೆಯಲ್ಲಿ ನೂತನ ತಾಂತ್ರಿಕತೆಗಳ ಅಳವಡಿಕೆ, ಕ್ಷೇತ್ರ ವಿಸ್ತರಣೆ ಮತ್ತು ತೊಗರಿಯನ್ನು ಅಂತರ ಬೆಳೆಯನ್ನಾಗಿ ಪ್ರೋತ್ಸಾಹಿಸುವುದರ ಮೂಲಕ ಉತ್ಪಾದನೆಯಲ್ಲಿ ರಾಷ್ಟ್ರದಲ್ಲೇ ಮುಂಚೂಣಿ ರಾಜ್ಯವನ್ನಾಗಿಸಲು ರೂ. 88 ಕೋಟಿ ಮೀಸಲಿರಿಸಲಾಗಿದೆ. ಕೃಷಿ ಪ್ರಯೋಗಾಲಯ ತೆರೆಯಲು ರೈತರಿಗೆ ಕಡಿಮೆ ದರದಲ್ಲಿ ಕೃಷಿ ಪರಿಕರಗಳನ್ನು ವಿತರಿಸಲಾಗುವುದು. ಜೊತೆಗೆ ತಂತ್ರಜ್ಞಾನ ಹೆಚ್ಚಾದಂತೆ ರೈತರನ್ನು ಆಧುನೀಕರಣದತ್ತ ಕೊಂಡೊಯ್ಯಲು ಡಿಜಿಟಲ್ ಕೃಷಿ ಸೇವೆಗಳ ಕೇಂದ್ರಗಳ ಸ್ಥಾಪನೆಗೆ ಪ್ರಸ್ತಾಪಿಸಲಾಗಿದೆ.

ಜಾನುವಾರುಗಳ ರಕ್ಷಣೆಗೂ ಹೆಚ್ಚಿನ ಮಹತ್ವ ನೀಡಿದ್ದಾರೆ. ಪಶು ಸಂಗೋಪನೆ ಇಲಾಖೆ ಬಗ್ಗೆ ಹೆಚ್ಚಿನ ಕಾಳಜಿ ವಹಿಸಲಾಗಿದೆ. ಜಾನುರವಾರುಗಳ ಆಕಸ್ಮಿಕ ಸಾವು ತಡೆಗೆ ಕ್ರಮ ಕೈಗೊಳ್ಳಲು ಅನುಗ್ರಹ ಯೋಜನೆ ಪರಿಹಾರ ಮೊತ್ತವನ್ನು ರೂ.10 ಸಾವಿರ ದಿಮದ 15 ಸಾವಿರಕ್ಕೆ ಹೆಚ್ಚಳ ಮಾಡಲಾಗಿದೆ. ಕ್ರೈಸ್ತಸಮುದಾಯದ ಅಭಿವೃದ್ಧಿಗೆ ರೂ.250 ಕೋಟಿ, ಅಲ್ಪಸಂಖ್ಯಾತರ ಧಾರ್ಮಿಕ ಕೇಂದ್ರಗಳ ಮುಖ್ಯಸ್ಥರ ಮಾಸಿಕ ಗೌರವ ಧನ ರೂ.6 ಸಾವಿರಕ್ಕೆ ಹೆಚ್ಚಿಸಲಾಗಿದೆ. ನೆರೆಯ ಚಿತ್ತಾಪುರದಲ್ಲಿ ಸನ್ನತಿ ಪ್ರಾಧಿಕಾರ ರಚನಿಗೆ ಪ್ರಸ್ತಾಪಿಸಲಾಗಿದೆ. ವಿಶೇಷವಾಗಿ ಮುಸ್ಲಿಂ ಸಮುದಾಯದವರಿಗೆ ಬರಪೂರ ಅನುದಾನ ಕಲ್ಪಿಸಲಾಗಿದೆ. ಮೌಲಾನಾ ಆಜಾದ್ ಪಬ್ಲಿಕ ಶಾಲೆಗಳ ಉನ್ನತೀಕರಣಕ್ಕೆ ಒತ್ತು ನೀಡಲಾಗಿದೆ. ಒಟ್ಟಾರೆ ಇದು ಜನಪರವಾದ ಮತ್ತು ದೂರದೃಷ್ಟಿಯ ಬಜೆಟ್ ಎಂದು ಶಾಸಕ ತುನ್ನೂರು ಅವರು ಬಣ್ಣಿಸಿದ್ದಾರೆ.

# ಇಂದು ಮೌನೇಶ್ವರ ದೇವಸ್ಥಾನದಲ್ಲಿ ಸಂಗೀತ ಸಮ್ಮೇಳನ

ಮಲ್ಲಮ್ಮ ನುಡಿ ವಾರ್ತೆ



ಬಸವಕಲ್ಯಾಣ :– ಮಾ 8 ಶ್ರೀ ಗಾನಯೋಗಿ ಶಿವಯೋಗಿ ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ 111 ನೇ ಜಯಂತಿ ಉತ್ಸವ ನಿಮಿತ್ಯ ಸಂಗೀತ ಸಮ್ಮೇಳನ. ಕಾರ್ಯಕ್ರಮವನ್ನು ಮೌನೇಶ್ವರ ದೇವಸ್ಥಾನದಲ್ಲಿ ರವಿವಾರ ಮುಂಜಾನೆ 11.ಗಂಟೆಗೆ ನಡೆಯಲಿದೆ ಈ ಕಾರ್ಯಕ್ರಮದ ಉದ್ಘಾಟನೆಯನ್ನು ಮಾಜಿ ವಿಧಾನ ಪರಿಷತ್ ಸದಸ್ಯರಾದ ವಿಜಯಸಿಂಗ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆ ಶ್ರೀ ಮೌನೇಶ್ವರ ದೇವಸ್ಥಾನದ ಅಧ್ಯಕ್ಷರಾದ ವೀರಣ್ಣಾ ಎಸ್. ಪಂಚಾಳ. ಮುಖ್ಯ ಅತಿಥಿಗಳಾಗಿ ಕಾಂಗ್ರೆಸ್ ಪಕ್ಷದ ಯುವ ನಾಯಕರಾದ ಗಿರೀಶ್ ತಾಂಬೋಳೆ. ಅತಿಥಿಗಳಾಗಿ ಮಹಿಳಾ ಮಕ್ಕಳ ಕಲ್ಯಾಣ ಇಲಾಖೆಯ ನಿವೃತ್ತ ಉಪನಿರ್ದೇಶಕರಾದ ಬಸವರಾಜ್ ವಿ ವರವಟ್ಟೆ. ವಿಶ್ವಕರ್ಮದ ಹಿರಿಯ ಮುಖಂಡರಾದ ಹರಿಶ್ಚಂದ್ರ ಜಿ. ಪಾಂಚಾಳ. ಮಂಠಾಳ ಪಿ. ಎಸ್. ಐ. ರಾಚಯ್ಯ ಮಠಪತಿ. ಹಾಗೂ ಕಲಾವಿದರಾದ ಗುಂಡುಗುರ್ತಿ ಮೊರಾರ್ಜಿ ದೇಸಾಯಿ ಶಾಲೆಯ ಸಂಗೀತ ಶಿಕ್ಷಕರಾದ ಜಗದೀಶ ಎಸ್. ನಗನೂರ. ಬೀದರ ಯುವ ಕಲಾವಿದೆ ಪ್ರಗತಿ ಎಸ್. ಹಿರೇಮಠ. ಸಂಗಯ್ಯ ಹಿರೇಮಠ. ಹಣಮಂತರಾವ ಮಳ್ಳಿ. ಧೂಳಪ್ಪಾ ಮುಡಬಿ. ನೀಲಯ್ಯಾ ಹೇಬ್ಬಳಿ ರಾಮಚಂದ್ರ ಕಲಹಿಪ್ಪರ್ಗಿ. ರಮೇಶ್ ಗರುಡಕರ್. ವಿನಾಯಕ ಚೌದರಿ. ಅವಿನಾಶ್ ಸಂಪಂಗೆ. ಪ್ರವಿಣ ದಾಂಡೇಕರ್. ಸಿದ್ದು ನೇತೆ. ರಂಜನಾ ಬುಶೆಟ್ಟೆ ಸೇರಿದಂತೆ ಅನೇಕರು ಭಾಗವಹಿಸುವರು. ಸ್ವಾಗತ ಹಾಗೂ ಪ್ರಸ್ತಾವಿಕ ಹಿರಿಯ ಸಂಗೀತಗಾರರಾದ ರಾಜಕುಮಾರ ಹೂಗಾರ. ಸಂಚಾಲನೆ ಶಾಂತಯ್ಯ ಮಠಪತಿ. ಪ್ರಾರ್ಥನೆ ಗೀತೆ ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳ ಸಂಗೀತ ಶಾಲೆಯ ಮಕ್ಕಳಿಂದ. ವಂದನಾರ್ಪಣೆ ಶಿವರಾಜ್ ಖೇಲೆ ನೆರವೆರಿಸಲಿದ್ದು. ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಡ ರೈತ ಕುಟುಂಬದ ಮೇಲೆ ಪ್ರಭಾವಿಗಳಿಂದ ಮಾರಣಾಂತಿಕ ಹಲ್ಲೆ

# ಹಲ್ಲೆಗೊಳಗಾಗಿ ಆಸ್ಪತ್ರೆಗೆ ದಾಖಲಾದ ಬಡ ರೈತನ ಆರೋಗ್ಯ ವಿಚಾರಿಸಿದ ಉಮೇಶ್ ಕೆ. ಮುದ್ನಾಳ್



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಅಕ್ರಮ ಮರುಳು ಸಾಗಾಣಿಕ ಬಗ್ಗೆ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮತ್ತು ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ ದೂರ ನೀಡಿದ ಹಿನ್ನೆಲೆಯಲ್ಲಿ ಗ್ರಾಮದ ಪಟ್ಟಭದ್ರ ಹಿತಾಸಕ್ತಿಗಳು ಯುವ ರೈತನು ಜಮೀನಿಗೆ ನೀರು ಬಿಟ್ಟು ಬರುವ ಸಂಧರ್ಬದಲ್ಲಿ ಕೆಲವು ಕಿಲಗೇಡಿಗಳು ಮಾರಕಾಸ್ತ್ರಗಳಿಂದ ಹಲ್ಲೆ ಮಾಡಿರುವ ಘಟನೆ ಯಾದಗಿರಿ ಜಿಲ್ಲೆಯ ವಡಗೇರಾ ತಾಲೂಕಿನ ಗೊಂದನೂರ ಗ್ರಾಮದಲ್ಲಿ ನಡೆದಿದೆ. 7 ಜನರ ತಂಡದಿಂದ ಯುವ ರೈತನಿಗೆ ಮಾರಣಾಂತಿಕ ಹಲ್ಲೆ ಮಾಡಿದ್ದಾರೆ. ಗೊಂದೇನೂರ ಗ್ರಾಮದ ಯುವ ರೈತ ಗೋವಿಂದರಾಜ ತಂ/ ಯಂಕಪ್ಪ ಇವನ ಮೇಲೆ ಹಲ್ಲೆ ನಡೆಸಿದ್ದಾರೆ. ಕೊಡಲಿ, ಬಡಿಗೆ, ಮಚ್ಚ (ಲಾಂಗ) ಹಾಗೂ ದೊಣ್ಣೆಗಳಿಂದ ಹೊಡೆದಿರುವ ಪರಿಣಾಮ ರೈತನ ಮೂಳೆ ಮುರುದಿವೆ. ಗ್ರಾಮಸ್ಥರು ಜಗಳ ಬಿಡಿಸಲು ಮುಂದಾಗ್ತಿದ್ದಂತೆ ದುಷ್ಕರ್ಮಿಗಳು ಸ್ಥಳದಿಂದ ಕಾಲ್ಕಿತ್ತಿದ್ದಾರೆ. ಗಾಯಾಳು ಗೋವಿಂದರಾ ಗ್ರಾಮಸ್ಥರು ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿದ್ದಾರೆ. ಈ ವಿಚಾರ ಗೊತ್ತಾಗುತ್ತಿದ್ದಂತೆ ಜಿಲ್ಲಾಸ್ಪತ್ರೆಗೆ ಅಖಿಲ ಭಾರತೀಯ ಕೋಲಿ ಸಮಾಜದ ರಾಜ್ಯ ಸಂಘಟನಾ ಕಾರ್ಯದರ್ಶಿ ಉಮೇಶ್ ಕೆ ಮುದ್ನಾಳ್ ಭೇಟಿ ನೀಡಿ, ಗಾಯಾಳು ಆರೋಗ್ಯ ವಿಚಾರಿಸಿ, ಆತ್ಮಸ್ತೆರ್ಯ ತುಂಬಿದರು.

ಇದೇ ವೇಳೆ ಮಾತನಾಡಿದ ಉಮೇಶ್ ಕೆ. ಮುದ್ನಾಳ್ ಹಲ್ಲೆ, ದರೋಡೆ, ಕೊಲೆ ಪ್ರಕರಣಕ್ಕೆ ವಡಗೇರಾ ಈ ಹಿಂದೆ ಎರಡು ಮೂರು ಪ್ರಕರಣಗಳು ಪೊಲೀಸ್ ಠಾಣೆಯಲ್ಲಿ ಆದರು ಕೂಡ ಮತ್ತೆ ಹಲ್ಲೆ ಮಾಡಿದ ದುಷ್ಕರ್ಮಿಗಳ ಪ್ರಕರಣ ಮೇಲೆ ದಾಖಲಾಗಿದ್ದರು ಕೂಡ ಕಾನೂನೂ ಮತ್ತು ಪೊಲೀಸ್ ಭಯವಿಲ್ಲದೆ ಗೋಂದೇನೂರ ಗ್ರಾಮದಲ್ಲಿ ವಿವಿಧ ಸಮುದಾಯಗಳ ಮೇಲೆ ಇದೇ ರೀತಿ ದೌರ್ಜನ್ಯ, ದಬ್ಬಾಳಿಕೆ, ಹಲ್ಲೆ ಮಾಡುತ್ತಾ ಬಂದಿರುವ ಚಾಳಿ ಇದೆ. ಇವರಿಗೆ ಯಾವುದೇ ಕಾನೂನಿನ ಭಯವಿಲ್ಲ. ಇಂತ ದುಷ್ಕಿರ್ಮಿಗಳ ಮೇಲೆ ಕಾನೂನಿನ ಕಠಿಣ ಕ್ರಮ ಜರಗಿಸಿ ಗ್ರಾಮಲದಲ್ಲಿ ಶಾಂತಿ ಸುವ್ಯಸ್ಥೆ ಕಾಪಡಲು ಜಿಲ್ಲಾಡಳಿತ ಪೊಲೀಸ್ ಇಲಾಖೆ ಮುಂದಾಗಬೇಕು. ಇಂತ ಘಟನೆ ಗ್ರಾಮದಲ್ಲಿ ಮರುಕಳುಸದಂತೆ ಕಠಿಣ ಕ್ರಮ ಕೈ ಗೊಳಬೇಕು. ಗ್ರಾಮದಲ್ಲಿ ಕೃಷಿ, ಕೂಲಿ ಕಾರ್ಮಿಕ ಬಡವರು ರೈತರು ಹೆಚ್ಚಿನ ಸಂಖ್ಯೆಯಲ್ಲಿದ್ದು ಭಯದ ವಾತವರಣದಲ್ಲಿ ಬದುಕುವ ಪರಸ್ಥಿತಿ ನಿರ್ಮಾಣವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದರು. ಇದೇ ಸಂದರ್ಭದಲ್ಲಿ ಗ್ರಾಮಸ್ಥರು ಮತ್ತು ಕುಟುಂಬಸ್ಥರು ಉಪಸ್ಥಿತರಿದ್ದರು.

# ಬೇಸಿಗೆ ಸಮಯದಲ್ಲಿ ಆರೋಗ್ಯದ ಬಗ್ಗೆ ಮುಂಜಾಗ್ರತೆ ವಹಿಸಿ : ಡಾ.ಲಿಂಗರಾಜು

ಮಲ್ಲಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯಾದ್ಯಂತ ಪ್ರಸಕ್ತ ತಿಂಗಳಿನ ಬಿಸಿಲಿನ ಪ್ರಕರತೆ ಮತ್ತು ತೀರ್ವತೆ ಕಂಡು ಬಂದ ಹಿನ್ನೆಲೆಯಲ್ಲಿ ಸಾರ್ವಜನಿಕರು,ಗರ್ಭಿಣಿಯರು, ಬಾಣತಿಯರು, ಹಾಗೂ ಮಕ್ಕಳ ಆರೋಗ್ಯದ ಬಗ್ಗೆ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಲಿಂಗರಾಜು ಟಿ. ಅವರು ತಿಳಿಸಿದ್ದಾರೆ.



ಮುಂಜಾಗ್ರತ ಕ್ರಮಗಳು: ಬಿಸಿಯಾದ ಗಾಳಿ,ಶಾಕ ತರಂಗ (ಊಜಚಿಣ ತಿಚಿತಜ) ದ ಸಂದರ್ಭಗಳಲ್ಲಿ ಆರೋಗ್ಯವನ್ನು ಕಾಪಾಡಿಕೊಳ್ಳಲು ಪಾಲಿಸಬೇಕಾದ ಮುಂಜಾಗ್ರತ ಕ್ರಮಗಳು ಇಂತಿವೆ. ಹೆಚ್ಚು ನೀರನ್ನು ಕುಡಿಯಿರಿ,ಮಜ್ಜಿಗೆ,ಎಳನೀರು, ಹಣ್ಣಿನ ರಸಗಳನ್ನು ಹೆಚ್ಚಾಗಿ ಸೇವಿಸಬಹುದು. ನೀರಿನ ಅಂಶ ಹೆಚ್ಚಾಗಿರುವ ತರಕಾರಿಗಳು ಹಾಗೂ ಹಣ್ಣುಗಳನ್ನು ಸೇವಿಸುವುದು ಉತ್ತಮ. ಸಡಿಲವಾದ ತೆಳುಬಣ್ಣದ ಹತ್ತಿಯ ಬಟ್ಟೆಗಳನ್ನು ಧರಿಸಿರಿ. ಗಾಳಿಯಾಡುವ ಪಾದರಕ್ಷೆಯನ್ನು ಧರಿಸಿರಿ. ಹೊರಗಡೆ ತೆರಳುವ ವೇಳೆ ತಂಪು ಕನ್ನಡಕ, ಛತ್ರಿ, ಟವೆಲ್ ಅಥವಾ ಬಿಸಿಲಿನಿಂದ ಕಾಪಾಡಿಕೊಳ್ಳುವ ಸಾಮಾನ್ಯ ಕ್ರಮಗಳನ್ನು ಪಾಲಿಸಿ.

ರೇಡಿಯೋ,ದೂರದರ್ಶನ ಹಾಗೂ ದಿನಪತ್ರಿಕೆಗಳಲ್ಲಿ ಬಿಸಿಯಾದ ಗಾಳಿ, ಶಾಖ ತರಂಗದ ಬಗ್ಗೆ ನೀಡುವ ಮಾಹಿತಿ ಅನುಸಾರ ದೈನಂದಿನ ಚಟುವಟಿಕೆಗಳನ್ನು ಯೋಚಿಸಿಕೊಳ್ಳಿ. ಬಿಸಿಲಿನಲ್ಲಿ ಹೊರಗಡೆ ಕಾರ್ಯನಿರ್ವಹಿಸುವವರು (ಜಮೀನಿನ ಕೆಲಸ,ರಸ್ತೆಕಾಮಗಾರಿ ಮುಂತಾದವುಗಳು) ಆದಷ್ಟು ಬೆಳಗ್ಗೆ 11 ಗಂಟೆಯ ಒಳಗೆ ಮತ್ತು ಸಂಜೆ 4 ಗಂಟೆಯ ನಂತರ ಕೈಗೊಳ್ಳುವುದು ಉತ್ತಮ. ಬಿಸಿಲು ಹೆಚ್ಚಿರುವ ಅವಧಿಯಲ್ಲಿ ಶ್ರಮದಾಯಕ ಕೆಲಸಗಳಿಂದ ವಿಶ್ರಾಂತಿ ಪಡೆಯಿರಿ. ಬಿಸಿಲಿನಲ್ಲಿ ನಡೆಯುವಾಗ ಕಡ್ಡಾಯವಾಗಿ ಚಪ್ಪಲಿ ಧರಿಸಿ. ಟಿ, ಕಾಫಿ ಹೆಚ್ಚು ಸಕ್ಕರೆ ಅಂಶ ಹೊಂದಿರುವ ಕಾರ್ಬೋನೇಟೆಡ್ ಪಾನಿಯ ಹಾಗೂ ಮದ್ಯಪಾನದಿಂದ ದೂರವಿರಿ. ವ್ಯಕ್ತಿ ತೊದಲು ಮಾತು ಅಥವಾ ಅರ್ಥ ರಹಿತವಾಗಿ ಬಡಬಡಿಸಿದ್ದಲ್ಲಿ ಕೂಡಲೆ ನೆರಳಿನ ಸ್ಥಳಕ್ಕೆ ಸ್ಥಳಾಂತರಿಸಿ. ಕೆಳಗೆ ಮಲಗಿಸಿ ಕಾಲುಗಳನ್ನು ಮೇಲಕ್ಕೆ ಎತ್ತಿ ವಿಶ್ರಾಂತಿ ಪಡೆಯಬೇಕು.

ಬಿಸಿಗಾಳಿ ಮತ್ತು ಅತೀಯಾದ ತಾಪಮಾನದಿಂದ ಆರೋಗ್ಯ ಸಮಸ್ಯೆಗಳು ಉಂಟಾದಲ್ಲಿ ಸಮೀಪದ ಆರೋಗ್ಯಕೇಂದ್ರವನ್ನು ಸಂಪರ್ಕಿಸಿ, 108 ಅಥವಾ 102ಕ್ಕೆ ಕರೆ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿಲಾಗಿದೆ.

# ತಾಲೂಕ ಮಟ್ಟದ ಪದಾಧಿಕಾರಿಗಳ ಆಯ್ಕೆ

ಮಲ್ಲಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲೆಯ ಭೋವಿ ಸಮಾಜದ ಜಿಲ್ಲಾ ನೂತನ ಅಧ್ಯಕ್ಷರ, ಹಾಗೂ ನಗರ ಘಟಕ ಸೇರಿದಂತೆ ವಿವಿಧ ತಾಲೂಕಗಳ ಪದಾಧಿಕಾರಿಗಳ ಆಯ್ಕೆ ಕಾರ್ಯಕ್ರಮದ ಪೂರ್ವಭಾವಿ ಸಭೆಯನ್ನು ಇದೇ ಮಾ. 09.03.2025ರಂದು ರವಿವಾರ ನಗರದ ಮಳೆಮಲ್ಲೇಶ್ವರ ದೇವಸ್ಥಾನದಲ್ಲಿ ಆಯೋಜಿಸಲಾಗಿದೆ.

ಕೊಪ್ಪಳ ಜಿಲ್ಲೆಯ ಎಲ್ಲಾ ತಾಲೂಕಿನ ನಮ್ಮ ಸಮಾಜ ಮುಖಂಡರು, ಹಿರಿಯರು, ಯುವಕರು ಪ್ರತಿ ಗ್ರಾಮ, ಹೋಬಳಿ ಘಟಕ ಮತ್ತು ನಗರ ಘಟಕದ ಸಮಾಜದವರು ಬಹು ಸಂಖ್ಯೆಯಲ್ಲಿ ಆಗಮಿಸಬೇಕು ಎಂದು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಲಾಗಿದೆ.



ಹೆಚ್ಚಿನ ಮಾಹಿತಿಗಾಗಿ : ಬಸವರಾ ಅಗಳಕೇರಾಜ ಕೊಪ್ಪಳ ಮೊ.9880085391, ಹುಚ್ಚಪ್ಪ ಟಣಕನಕಲ್ ಮೊ. 9353921045, ಮುತ್ತಣ್ಣ ಭೋವಿ ಕುಕನೂರು ಮೊ.8496008948,ಪಂಪಾಪತಿ ಸೋಮನಾಳ ಕಾರಟಗಿ ಮೊ.99172714169,ಹನುಮೇಶ ಭೋವಿಕುಷ್ಟಗಿಮೊ.8310271885, ಹುಲಗೇಶ ಬಂಡಿ ಗಂಗಾವತಿ ಮೊ. 7676807235, ಭೋಜಪ್ಪ ಭೋವಿ ಕನಕಗಿರಿ ಮೊ.9611765768,ಗಣೇಶ ಮುಧೋಳ ಯಲಬುರ್ಗಾ ಮೊ.8548094321,ನಾಗರಾಜ ಭೋವಿಕುಷ್ಟಗಿಮೊ.8618651594, ಮಂಜುನಾಥ ಬೈರವಾಡಗಿ ಕೊಪ್ಪಳ ಮೊ. 9980581810 ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.

# ಹಿರೇವಂಕಲಕುಂಟಾ ಮುರಾರ್ಜಿ ವಸತಿ ಶಾಲೆಯ ಮಕ್ಕಳಿಂದ ಬೀಳ್ಕೊಡುಗೆ ಸಮಾರಂಭ



ಮಲ್ಲಮ ನುಡಿ ವಾರ್ತೆ

ಕೊಪ್ಪಳ : ಮಕ್ಕಳಲ್ಲಿ ಅದ್ಭುತವಾದ ಪ್ರತಿಭೆ ಇರುತ್ತದೆ ಅದಕ್ಕೆ ಪಾಲಕರು ಪ್ರೋತ್ಸಾಹ ನೀಡಿದರೆ ಶಿಕ್ಷಕರು ಸೂಕ್ತ ಮಾರ್ಗದರ್ಶನ ಮಾಡಿದರೆ ಒಳ್ಳೆಯ ಪ್ರತಿಭೆ ಹೊರಹೊಮ್ಮಲು ಸಾಧ್ಯವಾಗುತ್ತದೆ ಎಂದು ಮೊರಾರ್ಜಿ ದೇಸಾಯಿ ವಸತಿ ಶಾಲೆ ಪ್ರಾಂಶುಪಾಲ ಹನಮೇಶ ಕುರಿ ಪಂಚಮಸಾಲಿ ಹೇಳಿದರು. ಕೊಪ್ಪಳ ಜಿಲ್ಲೆ ಯಲಬುರ್ಗಾ ತಾಲ್ಲೂಕಿನ ಹಿರೇವಂಕಲಕುಂಟಾ ಮೊರಾರ್ಜಿ ದೇಸಾಯಿ ಮಾದರಿ ವಸತಿ ಶಾಲೆ ಜರುಗಿದ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ, ಹಾಗೂ ಶಾಲಾ ವಾರ್ಷಿಕೋತ್ಸವದ ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮಕ್ಕಳು ನಿರಂತರ ಅಬ್ಯಾಸದಿಂದ ಯಶಸ್ಸು ಕಾಣಲು ಸಾದ್ಯ ಚನ್ನಾಗಿ ಓದಿ ಶಾಲೆಗೆ ಪಾಲಕರಿಗೆ ಒಳ್ಳೆಯ ಫಲಿತಾಂಶ ಕೀರ್ತಿ ತರಬೇಕು ಎಂದು ಹೇಳಿದರು

ಪ್ರಾಸ್ತಾವಿಕವಾಗಿ ಮಾತನಾಡಿದ ಸದನಂದ ಶಿಕ್ಷಕರು ಮಾತನಾಡಿದರು, ಮಕ್ಕಳ 5 ವರ್ಷಗಳ ಕಾಲ ಅದ್ಯಾಯನ ಮಾಡಿ ಜೀವನ ಮೌಲ್ಯಗಳನ್ನು ಅಳವಡಿಸಿಕೊಂಡು ಉತ್ತಮ ಜೀವನ ಕಟ್ಟಿಕೊಳ್ಳಬೇಕು,ಮಕ್ಕಳ ಕಲಿಕೆ ಯಲ್ಲಿ ಪಾಲಕ , ಬಾಲಕ,ಶಿಕ್ಷಕರ ,ಪಾತ್ರ ಮಹತ್ವದಾಗಿಗೆ ಮಕ್ಕಳ ಉನ್ನತ ಹುದ್ದೆಗಳಲ್ಲಿ ಪಡೆಯಬೇಕು ವಿದ್ಯಾರ್ಥಿಗಳು ಸರ್ವಾಂಗೀಣ ಅಭಿವೃದ್ಧಿ ಹೊಂದಬೇಕು ಮಕ್ಕಳಿಗೆ ಆಸ್ತಿ ಮಾಡದೆ ಮಕ್ಕಳನ್ನು ಆಸ್ತಿ ಯನ್ನು ಮಾಡಿ ಎಂದು ಹೇಳಿದರು

ಕಾರ್ಯಕ್ರಮ ದಲ್ಲಿ ಸದಾನಂದ ಶಿಕ್ಷಕರು,ಶಶಿಕಲ್ ತಲೇಕಾನ ಹಿಂದಿ ಶಿಕ್ಷಕರು, ಪಾರ್ವತಿ ಇಂಗ್ಲಿಷ್ ಶಿಕ್ಷಕಿ, ಚಂದ್ರಶೇಖರ ದೈಹಿಕ ಶಿಕ್ಷಕರು, ಮೈಬುಬು ಪ್ರಥಮ ದರ್ಜೆ ಸಹಾಯಕಿ, ಚನ್ನಮಲ್ಲಮ್ಮ ಶುಶ್ರೂಷೆ,ಮಾರುತಿ ತಳವಾರ ಕನ್ನಡ ಶಿಕ್ಷಕ, ನಬಿಸಾಬ ಸಮಾಜ ಶಿಕ್ಷಕ,ಮಂಜುನಾಥ ಗಣಿತ ಶಿಕ್ಷಕ, ಪಾಲಕರಾದ ಬಸವರಾಜ ನೇಲಜೆರಿ, ಶಿವನಂದಪ್ಪ, ನೀಲಮ್ಮ ಮಕ್ಕಳು ಮತ್ತು ಪಾಲಕರು ಉಪಸ್ಥಿತಿ ಇದ್ದರು.

# ದಲಿತ ಸಂಘರ್ಷ ಸಮಿತಿ ವತಿಯಿಂದ ಸರ್ವ ಸದಸ್ಯರ ಸಭೆಯನ್ನು ಆಯೋಜನೆ



ಮಲ್ಲಮ ನುಡಿ ವಾರ್ತೆ

ಶಹಪುರದ:ಪ್ರವಾಸಿಮಂದಿರದಲ್ಲಿ ನಡೆದ ಜಿಲ್ಲಾ ಸಮಿತಿಯ ಸಭೆಯಲ್ಲಿ ಶಹಪುರ ತಾಲೂಕ ದಲಿತ ಸಂಘರ್ಷ ಸಮಿತಿ ಈ ಸುಚಾಲಕರಾದ ಅಂಬೇಡ್ಕರ್ ವಾದ,ಸರ್ವ ಸದಸ್ಯರ ಸಭೆಯನ್ನು ಆಯೋಜಿಸಲಾಗಿತ್ತು

ಒಂದು ಸಭೆಯ ಅಧ್ಯಕ್ಷತೆಯನ್ನು ನಾಗಣ್ಣ ಬಡಿಗೇರ್ ರಾಜ್ಯ ಸಮಿತಿ ಸದಸ್ಯರು ವಹಿಸಿಕೊಂಡಿದ್ದರು ಮುಖ್ಯ ಅತಿಥಿಯಾಗಿ ರಾಜ್ಯ ಸುಘಟನಾರಾಮಣ್ಣಕಲ್ಲದೇವನಹಳ್ಳಿ ಅವರು ಮತ್ತು ಮರಳಿಸಿದ್ದಪ್ಪ ನಾಯ್ಕಲ್ ಹಾಗೂ ಮಾಳಪ್ಪ ಕಿರದಳ್ಳಿ ಜಿಲ್ಲಾ ಸಂಚಾಲಕರು ಸುನ0ದ ಮದ್ದರಿಕಿ ಜಿಲ್ಲಾ ಮಹಿಳಾ

ಸಂಚಾಲಕರು ಮತ್ತು ಸಾಯಿಬಾಬಾ ಅಣಬೆ ಗ್ರಾಮ ಪಂಚಾಯಿತಿ ನೌಕರರ ಖಅ ,ಖಖ ಜಿಲ್ಲಾ ಅಧ್ಯಕ್ಷರು ಭಾಗವಹಿಸಿದ್ದರು. ಈ ಒಂದು ಸಭೆಯಲ್ಲಿ ಜಿಲ್ಲಾ ಸಮಿತಿಯ ಎಲ್ಲಾ ಪದಾಧಿಕಾರಿಗಳು ಮತ್ತು

ಜಿಲ್ಲೆಯ ಎಲ್ಲಾ ತಾಲೂಕ ಸಂಚಾಲಕರು ಮತ್ತು ಪದಾಧಿಕಾರಿಗಳು ಹಾಗೂ ಬಸವರಾಜ ಆಣಬಿ,ನಾಗರಾಜ ಬೊಮ್ಮನಹಳ್ಳಿ, ಕುಮಾರ್ ಸಾಕ್ರೆಭೀಮರಾಯ ಗಂಗನಾಳ, ನಾಗಪ್ಪ ಮಡಬೂಳ ಶರಬಣ್ಣ ಕಜ್ಜಿ ಇವರು ಉಪಸ್ಥಿತರಿದ್ದರು. ಈ ಒಂದು ಸಭೆಯಲ್ಲಿ ಶಹಪುರ ತಾಲೂಕ ಸಮಿತಿಯ ಪುನರ್ ರಚನೆ ಮಾಡಲಾಯಿತು ತಾಲೂಕ ಸಂಚಾಲಕರಾಗಿ ಚಂದ್ರಕಾಂತ ಬಜೇರಿ,ಸಂಘಟನಾ ಸಂಚಾಲಕರುಗಳಾಗಿ ಮಾನವ

ಮುದುಕನವ ಪ್ರಭು ಬಡಿಗೇರ್. ಶ್ರೀಶೈಲ್ ರಾಜಾಪುರ,ಮಹಾ0ತೇಶ್ ಚಟ್ನಳ್ಳಿ ಮರೆಪ್ಪ ಮರೆಪ್ಪ ಮಹಲ್ ರೋಜಾ. ಖಜಾಂಚಿಯಾಗ ಇವರುಗಳನ್ನು

ಆಯ್ಕೆಮಾಡಲಾಯಿತು ಸುರೇಶ್ ಸಗರ ಸರ್ವಾನುಮತದಿಂದ ಈ ಒಂದು ಸಭೆಯನ್ನು ಚಂದ್ರಕಾಂತ ಬಚೇರಿ, ಸ್ವಾಗತಿಸಿದರು

ನಿರೂಪಣೆಯನ್ನು ಪರಶುರಾಮ ಪೂಜಾರಿಯವರು,ಒಂದನಾರ್ಪಣೆ ಮಾನಪ್ಪ ಹುರುಸಗುಂಡಗಿ ಮಾಡಿದರು ಈ ಒಂದು ಸಭೆಯಲ್ಲಿ ನಾಗಣ್ಣ ಬಡಿಗೇರ್ ಅವರು ಮಾತನಾಡಿ ಸಂಘಟನೆ

ವದಾಧಿಕಾರಿಗಳಾದವರು ಏಳಿಗೆಗಾಗಿ ಅನ್ಯಾಯದ

ಸಮಾಜದ ಹೋರಾಡಿ ಸಮಾಜಕ್ಕೆ ನ್ಯಾಯವನ್ನು ಕೊಡಿಸಬೇಕೆಂದು ಮತ್ತು ಸಂಘಟನೆಯ ಹೆಸರನ್ನು ಉಳಿಸಿಕೊಂಡು ಹೋಗಬೇಕೆ0ದು ಕಿವುಮಾತು ಹೇಳಿದರು.

# ಗಾದಗಿ ಗ್ರಾಮದಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ



ಮಲ್ಲಮ ನುಡಿ ವಾರ್ತೆ

ಬೀದರ್:ತಾಲೂಕಿನ ಗಾದಗಿ ಗ್ರಾಮದಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಮಾಡಲಾಯಿತು ಈ ಸಂದರ್ಭದಲ್ಲಿ ಮಹಿಳೆಯರಿಗೆ ಶಾಲು ಹೊದಿಸಿ ಅವರಿಗೆ ಹಣ್ಣು ಹಂಪಲವನ್ನು ನೀಡಿ ಸನ್ಮಾನಿಸಲಾಯಿತು ಮಹಿಳಾ ದಿನಾಚರಣೆಯ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ ಡಾಕ್ಟರ್ ಶುಭಾಷ್ ಕರ್ಪೂರ ಅವರು ಮಾತನಾಡಿ ಮಹಿಳಾ ದಿನಾಚರಣೆ ಅಂಗವಾಗಿ ಅವರಿಗೆ ಈಗಿನ ಕಾಲದಲ್ಲಿ ಮಹಿಳೆಯರು ದಿನನಿತ್ಯ ಬಹಳ ತಂಬಾಕು ಸೇವನೆಯನ್ನು ಮಾಡುತ್ತಾರೆ ಅದನ್ನು ಶೀಘ್ರವೇ ನಿಲ್ಲಿಸಬೇಕು ಎಂದು ಕರೆಕೊಟ್ಟರು. ಇದೇ ಸಂದರ್ಭದಲ್ಲಿ ಹಿರಿಯ ಪತ್ರಕರ್ತರಾದ ಅಶೋಕ್ ಕುಮಾರ್ ಕರಂಜಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ ಮಹಿಳಾ ದಿನಾಚರಣೆಯ ಅಂಗವಾಗಿ ವಿಸ್ತಾರವಾಗಿ ತಿಳಿಸಿದರು. ಮಹಿಳಾ ದಿನಾಚರಣೆಯನ್ನು 28 ಫೆಬ್ರುವರಿ 1911ರಲ್ಲಿ ಆಸ್ಟ್ರೇಲಿಯಾ ಮತ್ತು ಸ್ವಿಜಲ್ಯಾಂಡ್ ಹಾಗೂ ಇನ್ನಿತರ ದೇಶಗಳು ಸೇರಿ ಈ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಮಾಡಬೇಕೆಂದು ಸಭೆಯಲ್ಲಿ ನಿರ್ಧರಿಸಲಾಯಿತು ಎಂದು ಅವರು ಹೇಳಿದರು ಅವರು ಮುಂದೆ ಮಾತನಾಡುತ್ತಾ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಮಾಡಬೇಕಾದರೆ ಅದಕ್ಕೆ ಒಂದು ದಿನಾಂಕವನ್ನು ನಿಗದಿ ಪಡಿಸಬೇಕೆಂದು ಕೆಲವು ರಾಷ್ಟಗಳು ಮತ್ತೆ ಸಭೆಯನ್ನು ಕರೆದು ಸಭೆಯಲ್ಲಿ ಮಾರ್ಚ್ 8,1977ರಲ್ಲಿ ಈ ದಿನಾಂಕವನ್ನು ನಿರ್ಧರಿಸಲಾಯಿತು ಅಂದಿನಿಂದ ಇಡೀ ಜಗತ್ತಿನಲ್ಲಿ ಮಾರ್ಚ್ 8ರಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಮಾಡಲಾಗುತ್ತಿದೆ ಎಂದರು. ಇದೇ ಸಂದರ್ಭದಲ್ಲಿ ಶಿವರಾಜ್ ಮಾಡಿಗಿಯವರು ಮಾತನಾಡುತ್ತಾ ತಾವೆಲ್ಲರೂ ಒಂದು ಶಕ್ತಿ ಮಹಿಳೆಯರು ಒಂದು ಶಕ್ತಿಯಿಂದಲೇ ನಾವೆಲ್ಲರೂ ಒಗ್ಗಟ್ಟಾಗಿ ಜೀವನ ಸಾಧಿಸುತ್ತಿದ್ದೇವೆ ಎಂದು ಹೇಳಿದರು ಈ ಕಾರ್ಯಕ್ರಮದಲ್ಲಿ ಆನಂದ್ ಕುಮಾರ್, ಮಲ್ಲಿಕಾರ್ಜುನ್ ರಾಗ,ಶಾಂತಿವೀರ್ ಪಾಟೀಲ್, ಜಗದೇವಯ್ಯ ಸ್ವಾಮಿ, ರವಿಕುಮಾರ್, ವೀರಭದ್ರಪ್ಪ ಬುಯ್ಯ, ಕೃಷ್ಣಬಚ್ಚಾ,ಪಂಡಿತ್ ಶಂಭು, ಬಸವರಾಜ ಸತೀಶ್ ಮಂಠಾಳೆ ಚಿಂತಲ್ಗೆರ ಮತ್ತು ಹನುಮಂತ ಸಿಂದೋಲ್ ಹಾಗೂ ಗಾದಗಿ ಗ್ರಾಮದ ನೂರಾರು ಮಹಿಳೆಯರು ಉಪಸ್ಥಿತರಿದ್ದರು. ಶ್ರೀಮತಿ ನಾಗಮ್ಮ ಕಾಗೆನೂರು ಅವರು ನಿರೂಪಿಸಿದರು .

ಸಂಗೀತ ಕರಂಜಿ ಅವರು ಕಾ ಂರ್ು ಕ್ರ ವಂ ವ ನ್ನು ಸ್ವಾಗತಿಸಿದರು.

ಬಳ್ಳಾರಿ: ಜಿಲ್ಲಾ ನ್ಯಾಯಾಲಯದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ

# ಮಹಿಳೆ-ಪುರುಷ ಬಂಡಿಯ ಎರಡು ಚಕ್ರಗಳಿದ್ದಂತೆ: ನ್ಯಾ.ಕೆ.ಜಿ.ಶಾಂತಿ



ಮಲ್ಲಮ ನುಡಿ ವಾರ್ತೆ

ಬಳ್ಳಾರಿ,ಮಾ.08-ಮಹಿಳೆಮತ್ತು ಪುರುಷ ಇಬ್ಬರು ಬಂಡಿಂ-ು ಎರಡು ಚಕ್ರಗಳಿದ್ದಂತೆ. ಇಬ್ಬರೂ ಜೊತೆಗೂಡಿ ಸಮನಾಗಿ ಚಲಿಸಿದಾಗ ಮಾತ್ರ ನಿರ್ದಿಷ್ಟ ಗುರಿ ತಲುಪಲು ಸಾಧ್ಯ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ಹೇಳಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯಾಂಗ,ಜಿಲ್ಲಾ ವಕೀಲರ ಸಂಘ ಮತ್ತು ರೀಡ್ಸ್ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ತಾಳೂರು ರಸ್ತೆಯ ಹೊಸ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ಶನಿವಾರ ಆಯೋಜಿಸಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ಪುರುಷನ ಸಾಧನೆಯ ಹಿಂದೆ ಮಹಿಳೆ ಇರುವ ಹಾಗೆ ಅಭಿವೃದ್ಧಿ ಹೊಂದುತ್ತಿರುವ ಮಹಿಳೆ ಹಿಂದೆಯೂ ಸಹ ಪುರುಷ ಇರುತ್ತಾನೆ.ಹಾಗಾಗಿ ಸಮಾಜದಲ್ಲಿ ಹೆಣ್ಣು ಮತ್ತು ಗಂಡು ಇಬ್ಬರೂ ಸಮಾಜದ ಕಣ್ಣುಗಳಿದ್ದಂತೆ ಎಂದು ಅವರು ಅಭಿಮತ ವ್ಯಕ್ತಪಡಿಸಿದರು.

1908 ರಲ್ಲಿ ಮಹಿಳಾ ಕಾರ್ಮಿಕರು ಕಾರ್ಖಾನೆಗಳಲ್ಲಿ ಕೆಲಸದ ಸಮಯ ಮತ್ತು ಸಮಾನ ವೇತನ ಸೇರಿದಂತೆ ಇತರೆ ಅಗತ್ಯ ಸೌಲಭ್ಯಗಳಿಗಾಗಿ ಪ್ರತಿಭಟನೆ ನಡೆಸಿದರು. ಬಳಿಕ ತಮ್ಮ ಎಲ್ಲಾ ಸೌಲಭ್ಯಗಳನ್ನು ಅವರು ಪಡೆದುಕೊಂಡರು. ಈ ಪ್ರತಿಭಟನೆಯಿಂದ ಪ್ರಪಂಚದಾದ್ಯಂತ ಮಹಿಳಾ ದಿನಾಚರಣೆ ಆಚರಿಸಲು ಕಾರಣವಾಯಿತು ಎಂದು ತಿಳಿಸಿದರು.

ಕಾನೂನಿನಲ್ಲಿ ಮಹಿಳೆಯರಿಗಾಗಿ ಏನೇನು ಸೌಲಭ್ಯಗಳಿವೆ ಎಂಬುದು ಅರಿಯಬೇಕು. ಸಮಾಜದಲ್ಲಿ ಬಾಲ್ಯವಿವಾಹ, ವರದಕ್ಷಿಣೆ,ಲೈಂಗಿಕ ಕಿರುಕುಳ, ಕೌಟುಂಬಿಕ ದೌರ್ಜನ್ಯ, ವಿಚ್ಛೇದನ,ಮಾನಸಿಕ ಹಾಗೂ ದೈಹಿಕ ಹಿಂಸೆ ಮುಂತಾದ ಹಲವಾರು ಸಮಸ್ಯೆಗಳಿಗೆ ಕಾಯ್ದೆ-ಕಾನೂನುಗಳಿದ್ದು, ಮಹಿಳೆಯರು ಇವುಗಳನ್ನು ಅರಿತುಕೊಳ್ಳಬೇಕು ಎಂದು ನ್ಯಾಯಾಧೀಶೆ ಕೆ.ಜಿ.ಶಾಂತಿ ಅವರು ತಿಳಿಸಿದರು. ಎಲ್ಲರಿಗೂ ಸ್ವಾತಂತ್ರ್ಯ ಮತ್ತು ಸಮಾನತೆ ಬೇಕು. ಆದರೆ ಮಹಿಳೆಯರ ಸ್ವಾತಂತ್ರ್ಯ ಸ್ವೇಚ್ಛಾಚಾರವಾದುದಲ್ಲ ಎಂಬುದು ಅರಿಯಬೇಕು. ಮಹಿಳೆಯರು ಉತ್ತಮ ರೀತಿಯಲ್ಲಿ ಅದನ್ನು ಬಳಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಮಹಿಳೆಯು ಮಾತೃ ಸ್ವ-ರೂಪಿ. ತನ್ನ ಜೀವನದಲ್ಲಿ ಎಲ್ಲಾ ಹಂತದ ಕಷ್ಟಗಳನ್ನು ಸಹನೆಯಿಂದ ದಾಟಿಕೊಂಡು ಮುನ್ನಡೆಯುತ್ತಾಳೆ. ಈ ಹಿಂದೆ ಮಹಿಳೆಯು ಕೇವಲ ಅಡುಗೆ ಕೋಣೆಗೆ ಮಾತ್ರ ಸೀಮಿತವಾಗುತ್ತಿದ್ದಳು. ಆದರೆ ಪ್ರಸ್ತುತ ಸಮಾಜದ ಎಲ್ಲಾ ರಂಗಗಳಲ್ಲಿ ಪುರುಷನ ಸಮಾನಾಗಿ ಮಹಿಳೆಯರು ಅಭಿವೃದ್ಧಿ ಹೊಂದಿದ್ದಾರೆ ಎಂದರು.

ಮಹಿಳೆಯರು ತಮ್ಮಲ್ಲಿನ ಕೀಳರಿಮೆ ಬಿಡಬೇಕು. ಧೃತಿಗೇಡಬಾರದು. ಏನೇ ಸಮಸ್ಯೆ ಬಂದರೂ ತಾವು ಅಂದುಕೊಂಡ ಗುರಿ ತಲುಪಿ ಗೆಲುವಿನ ಹಾದಿ ಕಂಡುಕೊಳ್ಳಬೇಕು. ಆಡು ಮುಟ್ಟದ ಸೊಪ್ಪಿಲ್ಲ-ಮಹಿಳೆಯರಿಲ್ಲದ ಕ್ಷೇತ್ರವಿಲ್ಲ ಎಂಬಂತೆ ನನ್ನಿಂದ ಎಲ್ಲವೂ ಸಾಧ್ಯ ಎಂಬ ಸಂಕಲ್ಪ ಹೊಂದಬೇಕು ಎಂದು ಕರೆ ನೀಡಿದರು.

ಮುಖ್ಯವಾಗಿ ಮಹಿಳೆಯರು ಗರಿಕೆಹುಲ್ಲಿನಂತೆ ಬೆಳೆಯಬೇಕು. ಆ ಹುಲ್ಲನ್ನು ಎಷ್ಟೇ ತುಳಿದರೂ ಅದು ಮತ್ತೆ ಮತ್ತೆ ಚಿಗುರೊಡೆ-ಯುತ್ತದೆ. ಹಾಗಾಗಿ ಮಹಿಳೆಯರು ತಮ್ಮ ಆರೋಗ್ಯದೆಡೆ ಗಮನ ಹರಿಸಬೇಕು. ಸಕಾರಾತ್ಮಕ ಚಿಂತನೆಗಳನ್ನು ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಕಾ ಂರ್ು ಕ್ರ ವಂ ದ ಲ್ಲಿ ಪ್ರಧಾನ ಜಿಲ್ಲಾ ಕೌಟುಂಬಿಕ ನ್ಯಾಯಾಧೀಶರಾದ ಸಿದ್ಧಲಿಂಗ ಪ್ರಭು, ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ರಾಘವೇಂದ್ರ ಗೌಡ.ಬಿ.ಜಿ., 2ನೇ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಬಿ.ಜಿ.ಪ್ರಮೋದಾ, 4ನೇ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ವಾಸುದೇವ ರಾಧಕಾಂತ್ ಗುಡಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್. ಎನ್.ಹೊಸಮನೆ, ಒಂದನೇ ಅಪರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶೆ ಅಪರ್ಣ, ಎರಡನೇ ಅಪರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರಾದ ನಸ್ರತ್ ಮುಖ್ತಾರ್ ಅಹ್ಮದ್ ಖಾನ್ ಸೇರಿದಂತೆ ಎಲ್ಲಾ ಗೌರವಾನ್ವಿತ ನ್ಯಾಯಾಧೀಶರು, ವಕೀಲರ ಸಂಘದ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು, ನ್ಯಾಯಾಲಯದ ಸಿಬ್ಬಂದಿ ವರ್ಗ, ರೀಡ್ಸ್ ಸಂಸ್ಥೆಯ ಪದಾಧಿಕಾರಿಗಳು,ಸಾರ್ವಜನಿಕರು ಉಪಸ್ಥಿತರಿದ್ದರು.

ಡಾಟಾ ಎಂಟ್ರಿ ಆಪರೇಟರ್‌ಗಳನ್ನು ಗುತ್ತಿಗೆ ಆಧಾರದ ಮೇಲೆ

# ಪಡೆಯಲು ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಆಹ್ವಾನ

ಮಲ್ಲಮ ನುಡಿ ವಾರ್ತೆ

ಕಲಬುರಗಿ,ಮಾ.08-ಕಲಬುರಗಿ ಜಿಲ್ಲೆಯ ಅಟಲ್ ಜೀ ಜನಸ್ನೇಹಿ ಕೇಂದ್ರಗಳಲ್ಲಿ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ಗುತ್ತಿಗೆ ಆಧಾರದ ಮೇಲೆ 1 ವರ್ಷದ ಅವಧಿಗೆ ನೇಮಕಮಾಡಿಕೊಳ್ಳಲು ಇ-ಪ್ರೊಕ್ಯೂರಮೆಂಟ್ ಸಿಸ್ಟಮ್ ಅಡಿಯಲ್ಲಿ ಆಸಕ್ತಿಯುಳ್ಳವರಿಂದ ಇ-ಪ್ರೊಕ್ಯೂರ್ ಮೆಂಟ್ ಮೂಲಕ ಇ-ಟೆಂಡರ್ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ. ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ಬಿಡ್ ಡಾಕ್ಯುಮೆಂಟ್ ವಿತರಣೆಯು ಮಾರ್ಚ್ 10 ರಂದು ಪ್ರಾರಂಭವಾಗಲಿದ್ದು, ಯಾವುದಾದರೂ ಸ್ಪಷ್ಟೀಕರಣವನ್ನು ಸಲ್ಲಿಸಲು ಕೊನೆಯ ದಿನ ಮಾರ್ಚ್ 15 ರಂದು ಸಂಜೆ 5.30 ಗಂಟೆಯವರೆಗೆ ಇರುತ್ತದೆ. ಟೆಂಡರ್ ಅಪಲೋಡ್ ಮಾಡಲು ಕೊನೆಯ ದಿನ ಮಾರ್ಚ್ 17ರ ಸಂಜೆ 5.30 ಗಂಟೆಯವರೆಗೆ ಇರುತ್ತದೆ. ಮಾರ್ಚ್ 19 ರಂದು ಬೆಳಿಗ್ಗೆ 11 ಗಂಟೆಗೆ ತಾಂತ್ರಿಕ್ ಬಿಡ್ ಹಾಗೂ ಮಾರ್ಚ್ 21ರಂದು ಬೆಳಿಗ್ಗೆ 11 ಗಂಟೆಗೆ ವಾಣಿಜ್ಯ ಬಿಡ್ ತೆರೆಯಲಾಗುತ್ತದೆ.

ಡಾಟಾ ಎಂಟ್ರಿ ಆಪರೇಟರ್‌ಗಳನ್ನು ಗುತ್ತಿಗೆ ಆಧಾರದ ಮೇಲೆ ಪಡೆಯಲು

# ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಆಹ್ವಾನ

ಮಲ್ಲಮ ನುಡಿ ವಾರ್ತೆ

ಕಲಬುರಗಿ,ಮಾ.08.-ಕಲಬುರಗಿ ಜಿಲ್ಲೆಯ ಅಟಲ್ ಜೀ ಜನಸ್ನೇಹಿ ಕೇಂದ್ರಗಳಲ್ಲಿ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ಗುತ್ತಿಗೆ ಆಧಾರದ ಮೇಲೆ 1 ವರ್ಷದ ಅವಧಿಗೆ ನೇಮಕಮಾಡಿಕೊಳ್ಳಲು ಇ-ಪ್ರೊಕ್ಯೂರಮೆಂಟ್ ಸಿಸ್ಟಮ್ ಅಡಿಯಲ್ಲಿ ಆಸಕ್ತಿಯುಳ್ಳವರಿಂದ ಇ-ಪ್ರೊಕ್ಯೂರ್ ಮೆಂಟ್ ಮೂಲಕ ಇ-ಟೆಂಡರ್ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಇ-ಪ್ರೊಕ್ಯೂರ್ ಮೆಂಟ್ ಪೋರ್ಟಲ್ ಮೂಲಕ ಬಿಡ್ ಡಾಕ್ಯುಮೆಂಟ್ ವಿತರಣೆಯು ಮಾರ್ಚ್ 10 ರಂದು ಪ್ರಾರಂಭವಾಗಲಿದ್ದು, ಯಾವುದಾದರೂ ಸ್ಪಷ್ಟೀಕರಣವನ್ನು ಸಲ್ಲಿಸಲು ಕೊನೆಯ ದಿನ ಮಾರ್ಚ್ 15 ರಂದು ಸಂಜೆ 5.30 ಗಂಟೆಯವರೆಗೆ ಇರುತ್ತದೆ. ಟೆಂಡರ್ ಅಪಲೋಡ್ ಮಾಡಲು ಕೊನೆಯ ದಿನ ಮಾರ್ಚ್ 17ರ ಸಂಜೆ 5.30 ಗಂಟೆಯವರೆಗೆ ಇರುತ್ತದೆ. ಮಾರ್ಚ್ 19 ರಂದು ಬೆಳಿಗ್ಗೆ 11 ಗಂಟೆಗೆ ತಾಂತ್ರಿಕ್ ಬಿಡ್ ಹಾಗೂ ಮಾರ್ಚ್ 21ರಂದು ಬೆಳಿಗ್ಗೆ 11 ಗಂಟೆಗೆ ವಾಣಿಜ್ಯ ಬಿಡ್ ತೆರೆಯಲಾಗುತ್ತದೆ.

ಟೆಂಟರ್ ಮೊತ್ತ, ಎ.ಎಂ.ಡಿ. ಮೊತ್ತ,ಟೆಂಡರ್ ತೆರೆಯುವ ಸ್ಥಳ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಾರ್ಯನಿರ್ವಾಹಕ ಇಂಜಿನಿಯರರು, ಜಿಲ್ಲಾ ನಗರಾಭಿವೃದ್ಧಿ ಕೋಶ (ಡಿ.ಯು.ಡಿ.ಸಿ), ಕೊಠಡಿ ಸಂಖ್ಯೆ 11, ಮೊದಲನೇ ಮಹಡಿ, ಮಿನಿ ವಿಧಾನಸೌಧ, ಕಲಬುರಗಿ ಕಚೇರಿಯನ್ನು ಹಾಗೂ ದೂರವಾಣಿ ಸಂ-ಖ್ಯೆ 08472-278604ಗೆ ಸಂಪರ್ಕಿಸಲು ಕೋರಲಾಗಿದೆ.

ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮ ವಿಚಾರ ಸಂಕಿರಣ:

# ಮದ್ಯವಸನಿಗಳಾದಲ್ಲಿ ಭವಿಷ್ಯದ ಕನಸಿಗೆ ಕೊಳ್ಳಿ ಇಟ್ಟಂತೆ-ಬಿ.ಫೌಜಿಯಾ ತರನ್ನುಮ್




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.8–ಉತ್ತಮ ಭವಿಷ್ಯರೂಪಿಸಿಕೊಳ್ಳಬೇಕಾದ ವಿದ್ಯಾರ್ಥಿ ಸಮುದಾಯವು ಮದ್ಯ ಮತ್ತು ಮಾದಕ ವಸ್ತುಗಳಂತಹ ದುಶ್ಚಟಗಳಿಗೆ ಬಲಿಯಾದಲ್ಲಿ ನಿಮ್ಮ ಭವಿಷ್ಯದ ಕನಸುಗಳಿಗೆ ನೀವೆ ಕೊಳ್ಳಿ ಇಟ್ಟಂತಾಗುತ್ತದೆ ಎಂದು ಜಿಲ್ಲಾಧಿಕಾರಿ ಬಿ.ಫೌ–ಜಿಯಾ ತರನ್ನುಮ್ ಹೇಳಿದರು.

ಶುಕ್ರವಾರ ಕಲಬುರಗಿ ಜಿಲ್ಲಾಡಳಿತ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಬೆಂಗಳೂರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಲಬುರಗಿ ಹಾಗೂ ಕಲಬುರಗಿ ಸರ್ಕಾರಿ ಮಹಾವಿದ್ಯಾಲಯ (ಸ್ವಾಯತ್ತ)ಕಲಬುರಗಿ ಇವರ ಸಂಯುಕ್ತಾಶ್ರಯದಲ್ಲಿ ಕಾಲೇಜಿನ ಡಾ.ಅಂಬೇಡ್ಕರ್ ಸಭಾಂಗಣದಲ್ಲಿ ಆಯೋಜಿಸಿದ ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮ" ಕುರಿತು ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದ ಅವರು, ಪರೀಕ್ಷಾರ್ಥವಾಗಿಯೂ ಒಮ್ಮೆನೂ ಈ ಮದ್ಯದ ವಸ್ತುಗಳನ್ನು ಬಳಸಬೇಡಿ ಎಂದು ವಿದ್ಯಾರ್ಥಿಗಳಲ್ಲಿ ಮನವಿ ಮಾಡಿದರು.

ಮದ್ಯವ್ಯಸನಿಗಳಾದಲ್ಲಿ ಸಾಮಾಜಿಕವಾಗಿ ವ್ಯಕ್ತಿಗತ ಗೌರವ, ಘನತೆ ಕಳೆದುಕೊಳ್ಳಬೇಕಾಗುತ್ತದೆ. ಇದರ ಜೊತೆಗೆ ಆರ್ಥಿಕವಾಗಿ ಸಮಸ್ಯೆ ಎದುರಿಸಬೇಕಾದ ಅನಿವಾರ್ಯತೆ ಒದಗಿಬರುತ್ತದೆ. ಹೀಗಾಗಿ ಇಂತಹ ಮದ್ಯ ಮತ್ತು ಮಾದಕ ವಸ್ತುಗಳಿಂದ ದೂರ ಇರುವುದರ ಜೊತೆಗೆ ಸಹಪಾಠಿ, ಪಾಲಕರು, ಬಂಧು–ಮಿತ್ರರಿಗೆ ಅರಿವು ಮೂಡಿಸುವ ಜವಾಬ್ದಾರಿ ವಿದ್ಯಾರ್ಥಿ ಸಮುದಾಯದ ಮೇಲಿದೆ ಎಂದರು. ಎರಡೇ ತಿಂಗಳಲ್ಲಿ 200 ಪ್ರಕರಣ: ಕಳೆದ ಜನವರಿ ಮತ್ತು ಫೆಬ್ರವರಿ ಮಾಹೆಯಲ್ಲಿ ಕಲಬುರಗಿ ನಗರ ವ್ಯಾಪ್ತಿಯಲ್ಲಿಯೇ 200 ಡ್ರಗ್ಸ್ ಪ್ರಕರಣಗಳು ದಾಖಲಾಗಿವೆ. ಹಿಂದೆಲ್ಲ ಬೆಂಗಳೂರು, ಮುಂಬೈ, ಚೆನ್ನೈ, ಹೈದ್ರಾಬಾದ, ದಿಲ್ಲಿದಂತಹ ಮೆಟ್ರೋ ನಗರದಲ್ಲಿದ್ದ ಈ ಮಾಯಾಜಾಲದ ಲೋಕ ನಿಧಾನವಾಗಿ ಟೈರ್–2 ಸಿಟಿಗಳಿಗೂ ತಲುಪಿದೆ. ಅಚ್ಚರಿಯೆಂದರೆ 18–30 ವಯಸ್ಸಿನ ಯುವ ಸಮುದಾಯ ಬಲಿಯಾಗುತ್ತಿರುವ ತುಂಬಾ ಖೇದಕರ ಸಂಗತಿ ಎಂದರು. ಯಾವುದೇ ವ್ಯಕ್ತಿ ಮದ್ಯ ಚಟಕ್ಕೆ ಬಲಿಯಾದಲ್ಲಿ ಆತನ ಜೊತೆಗೆ ಇಡೀ ಕಟುಂಬ ಬೀದಿಗೆ ಬರಬೇಕಾಗುತ್ತದೆ. ಸಮಯ, ಸನ್ನಿವೇಶ, ಕೆಟ್ಟ ಸ್ನೇಹಿತರ ಸಹವಾಸದಿಂದ ಒಮ್ಮೆ ಮಾಯಾ ಲೋಕಕ್ಕೆ ಎಂಟ್ರೀ ಕೊಟ್ಟರೆ ಹಿಂದಿರುಗುವುದು ವಿರಳ. ಹೀಗಾಗಿ ಯುವ ಸಮುದಾಯ ಇದಕ್ಕೆ ಬಲಿಯಾಗಬಾರದು ಕರೆ ನೀಡಿದ ಅವರು, ಯಾರೇ ಡ್ರಗ್ಸ್ ಸೇವನೆ ಮಾಡಿದಲ್ಲಿ ಅಂತಹವರ ವಿರುದ್ದ ಎನ್.ಡಿ.ಪಿ.ಎಸ್. ಕಾಯ್ದೆ ಪ್ರಕಾರ ಕಾನೂನು ಕ್ರಮ ಕೈಗೊಳ್ಳಲು ಅವಕಾಶವಿದ್ದು, ಇಂತಹ 100 ಕೇಸ್ ಫೈಲ್ ಮಾಡಲಾಗಿದೆ ಎಂದ ಅವರು, ಮದ್ಯ ಮತ್ತು ಮಾದಕ ಮುಕ್ತ ಕರ್ನಾಟಕ್ಕಾಗಿ ಎಲ್ಲರು ಕೈಜೋಡಿಸಬೇಕೆಂದು ಮನವಿ ಮಾಡಿದರು. ಹಣ ಕೊಟ್ಟು ಕಾಯಿಲೆಗೆ ಆಹ್ವಾನಿಸೋದು ಬೇಕಾ?: ಕಲಬುರಗಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಮನೋವೈದ್ಯ ಡಾ.ಮೊಹಮ್ಮದ್ ಇರ್ಫಾನ್ ಮಹಾಗಾವಿ ಅವರು ತಮ್ಮ ವಿಶೇಷ ಉಪನ್ಯಾಸದಲ್ಲಿ ಮಾತನಾಡುತ್ತಾ, ಸಿಗರೇಟ್, ತಂಬಾಕು, ಗುಟಕಾ, ಮದ್ಯ ಸೇವನೆಯಿಂದ ಮಾನಸಿಕ ನೆಮ್ಮದಿ ಹಾಳು ಹಾಳಾಗುವುದಲ್ಲದೆ ಶಾರೀರಿಕವಾಗಿಂಯೂ ಹಾನಿ ಮಾಡುತ್ತದೆ. ಬುದ್ದಿ ಭ್ರಮಣೆಯಾಗುತ್ತದೆ. ಹಣ ಕೊಟ್ಟು ಮಾದಕ ವಸ್ತುಗಳನ್ನು ಖರೀದಿಸಿ ಅದರಿಂದ ಕಾಯಿಲೆ ತರಿಸಿಕೊಳ್ಳುವುದು ಬೇಕಾ? ಎಂದು ಪ್ರಶ್ನಿಸಿದ ಅವರು, ಒಮ್ಮೆ ಕ್ಯಾನ್ಸರ್ ಕಾಯಿಲೆ ಬಂದರೆ ಅದನ್ನು ಗುಣಪಡಿಸಲು ಇಂದಿನ ದಿನಮಾನದಲ್ಲಿ 5–7 ಲಕ್ಷ ರೂ. ವೆಚ್ಚ ಮಾಡಬೇಕಾಗುತ್ತದೆ. ಹೀಗೆ ದುಶ್ಚಟದಿಂದ ಆರ್ಥಿಕ ದಿವಾಳಿಗೂ ಕಾರಣವಾಗುತ್ತದೆ ಎಂದರು. ಮದ್ಯ ವ್ಯಸನಿಗಳಿಗೆ ಭ್ರಮ ಲೋಕದಿಂದ ಹೊರತರಲು ಆಪ್ತ ಸಮಾಲೋಚನೆ ತುಂಬಾ ಅವಶ್ಯಕವಾಗಿದೆ. ಜಿಲ್ಲೆಯ ಜಿಮ್ಸ್, ಇ.ಎಸ್.ಐ.ಸಿ., ಕೆ.ಬಿ.ಎನ್, ಬಸವೇಶ್ವರ ಆಸ್ಪತ್ರೆಯಲ್ಲಿ ಮನೋವೈದ್ಯರಿದ್ದು, ಮದ್ಯವ್ಯಸನಿಗಳಿಗೆ ಇಲ್ಲಿಗೆ ಕರೆತಂದಲ್ಲಿ ಸೂಕ್ತ ಚಿಕಿತ್ಸೆ ನೀಡಿ ಅವರನ್ನು ಚಟದಿಂದ ವಿಮುಖ ಮಾಡಲಾಗುತ್ತದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಲಬುರಗಿ ಸರ್ಕಾರಿ ಮಹಾವಿದ್ಯಾಲಯದ (ಸ್ವಾಯತ್ತ) ಕಾಲೇಜಿನ ಪ್ರಾಂಶುಪಾಲರಾದ ಡಾ. ಸವಿತಾ ತಿವಾರಿ ಮಾತನಾಡಿ, ವಿದ್ಯಾರ್ಥಿಗಳು ಆರೋಗ್ಯದ ಕಡೆ ಹೆಚ್ಚಿನ ಗಮನಹರಿಸಬೇಕು. ಮಾದಕ ವಸ್ತುದಂತಹ ದುಶ್ಚಟಕ್ಕೆ ಬಲಿಯಾಗಬಾರದು. ಇತರೆ ರಾಜ್ಯಗಳಂತೆ ಇಲ್ಲಿಯೂ ಸಹ ಗುಟಕಾ, ತಂಬಾಕು ಬ್ಯಾನ್ ಮಾಡಬೇಕು ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಕಲಬುರಗಿ ಜಿಲ್ಲಾ ಘಟಕದ ಅಧ್ಯಕ್ಷ ಬಾಬುರಾವ್ ಯಡ್ರಾಮಿ ಸೇರಿದಂತೆ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ನೂರಾರು ಸಂಖ್ಯೆಯಲ್ಲಿ ವಿದ್ಯಾರ್ಥಿಗಳಿದ್ದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕ ಜಡಿಯಪ್ಪ ಗೆದ್ಲಗಟ್ಟಿ ಸ್ವಾಗತಿಸಿದರು. ಕಾಲೇಜಿನ ಸಾಂಸ್ಕೃತಿಕ ಸಂಚಾಲಕ ಡಾ.ಬಲಭೀಮ ಸಾಂಗ್ಲಿ ನಿರೂಪಿಸಿದರು. ವಿದ್ಯಾರ್ಥಿ ಕಲ್ಯಾಣಾಧಿಕಾರಿ ಡಾ.ಸುರೇಶ ಮಾಳೆಗಾಂವ ವಂದಿಸಿದರು. ಇದೇ ಸಂದರ್ಭದಲ್ಲಿ ಲೋಹಿಯಾ ಕಲಾ ತಂಡದಿಂದ ಬೀದಿ ನಾಟಕ ಮೂಲಕ ಮದ್ಯಪಾನದಿಂದಾಗುವ ದುಷ್ಪರಿಣಾಮ ಕುರಿತು ಜನ ಜಾಗೃತಿ ಮೂಡಿಸಲಾಯಿತು. ಆರೋಗ್ಯ ಇಲಾಖೆಯಿಂದ ವಿಶೇವಾಗಿ ಮಳಿಗೆ ತೆರೆದು ವಿವಿಧ ಪೋಸ್ಟರ್‌ಗಳ ಪ್ರದರ್ಶನ ಮೂಲಕ ವಿದ್ಯಾರ್ಥಿಗಳಲ್ಲಿ ಮದ್ಯಪಾನ ಸೇವನೆಯಿಂದ ಆರೋಗ್ಯದ ಮೇಲಾಗುವ ಪರಿಣಾಮಗಳ ಕುರಿತು ಅರಿವು ಮೂಡಿಸಲಾಯಿತು.

# ರಾಯಚೂರು ಜಿಲ್ಲೆಯ ಅಭಿವೃದ್ಧಿಗೆ ವಿಶೇಷ ಒಲವು: ಸಚಿವ ಎನ್.ಎಸ್.ಬೋಸರಾಜು




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.08– ಆಯವ್ಯಯದಲ್ಲಿ ಮಾನ್ಯ ಮುಖ್ಯಮಂತ್ರಿಗಳು ರಾಯಚೂರ ಜಿಲ್ಲೆಗೆ ಹಲವು ಪ್ರಮುಖ ಯೋಜನೆಗಳನ್ನು ಘೋಷಣೆ ಮಾಡಿದ್ದಾರೆ ಎಂದು ಸಚಿವರಾದ ಎನ್ ಎಸ್ ಬೋಸರಾಜು ಅವರು ತಿಳಿಸಿದ್ದಾರೆ.

ರಾಯಚೂರು ನಗರದಲ್ಲಿರುವ ರಾಜೀವ್ ಗಾಂಧಿ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆಯಲ್ಲಿ ವಿಶ್ವ ಮಟ್ಟದ ಕ್ಯಾನ್ಸರ್ ಚಿಕಿತ್ಸೆಯನ್ನು ದೊರಕಿಸುವ ಹಿನ್ನಲೆಯಲ್ಲಿ ಕಿದ್ವಾಯಿ ಫೆರಿಫೆರಲ್ ಚಿಕಿತ್ಸಾ ಕೇಂದ್ರದ ಸ್ಥಾಪನೆ. ಇದಕ್ಕೆ 50 ಕೋಟಿ ಅನುದಾನ ಮೀಸಲು. ಕೆಕೆಆರ್‌ಡಿಬಿ ಅನುದಾನದ ಅಡಿಯಲ್ಲಿ ರಾಯಚೂರು ಹಾಗೂ ಸಿಂಧನೂರಿನಲ್ಲಿ ಜಿಟಿಟಿಸಿ ಸ್ಥಾಪನೆಗೆ ಕ್ರಮ. ರಾಯಚೂರು ನಗರಸಭೆಯನ್ನು, ಮಹಾನಗರ ಪಾಲಿಕೆಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದ್ದು ಅಭಿವೃದ್ದಿಗೆ ಅನುದಾನ ನೀಡುವ ಘೋಷಣೆ. 219 ಕೋಟಿ ರೂಪಾಯಿಗಳ ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ರಾಯಚೂರು ವಿಮಾನನಿಲ್ದಾಣದ ಕಟ್ಟಡ ಕಾಮಗಾರಿಗಳನ್ನು ಕೈಗೊಳ್ಳಲು 53 ಕೋಟಿ ರೂಪಾಯಿಗಳನ್ನು ನೀಡಲಾಗಿದೆ. 1696 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಕೈಗೊಳ್ಳಲಾಗಿರುವ ರಾಯಚೂರು–ಸಿಂಧನೂರು 20 ಕಿಲೋಮೀಟರ್ ರಸ್ತೆ ಕಾಮಗಾರಿಯನ್ನ ಪ್ರಸ್ತುತ ವರ್ಷದಲ್ಲಿ ಮುಗಿಸುವ ಘೋಷಣೆ ಮಾಡಿದ್ದಾರೆ. ಅಲ್ಲದೇ, ರಾಯಚೂರು ನಗರದ ಸುತ್ತರಿಂಗ್ ರೋಡ್ ನಿರ್ಮಾಣದ ಘೋಷಣೆಯೂ ಮಾಡಿದ್ದಾರೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಉದ್ಯೋಗಾವಕಾಶಗಳ ಸೃಷ್ಟಿಗೆ ಆದ್ಯತೆ ನೀಡಿರುವ ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಕೇಂದ್ರದ ಅನುದಾನದೊಂದಿಗೆ ಪಿಎಂ ಮಿತ್ರ ಟೆಕ್ಸ್‌ಟೈಲ್ ಪಾರ್ಕ್ ಸ್ಥಾಪಿಸಲು ಮುಂದಾಗಿದ್ದಾರೆ. ಕಲ್ಯಾಣ ಕರ್ನಾಟಕದ ಹೆಬ್ಬಾಗಿಲು ಆಗಿರುವ ರಾಯಚೂರು ಜಿಲ್ಲೆಯ ಅಭಿವೃದ್ದಿಗೆ ಈ ಬಾರಿಯ ಆಯವ್ಯಯದಲ್ಲಿ ಸಾಕಷ್ಟು ಕೊಡುಗೆಗಳನ್ನು ನೀಡಿದ್ದು ಬಹಳ ಸಂತಸದ ವಿಷಯವಾಗಿದೆ. ರಾಯಚೂರಿಗೆ ಹಲವಾರು ಯೋಜನೆಗಳನ್ನ ಘೋಷಿಸಿರುವುದಕ್ಕೆ ಮಾನ್ಯ ಮುಖ್ಯಮಂತ್ರಿಗಳಿಗೆ ತಾವು ಅಭಿನಂದನೆ ಸಲ್ಲಿಸುವುದಾಗಿ ಸಚಿವರು ತಿಳಿಸಿದ್ದಾರೆ. ಇಂದಿನ ಬಜೆಟ್ ಭಾಷಣದಲ್ಲಿ ರಾಯಚೂರು ಜಿಲ್ಲೆಯ ಸಮಗ್ರ ಅಭಿವೃದ್ದಿಗೆ ರಾಜ್ಯ ಸರಕಾರ ಒತ್ತು ನೀಡಿದೆ ಎಂದು ಸಚಿವರು ತಿಳಿಸಿದ್ದಾರೆ.

# ಶಿಕ್ಷಕರು ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡುವ ಜೊತೆಗೆ ಅವರ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡಿ : ಅನಪೂರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಪ್ರಸಕ್ತ ದಿನಗಳಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಮಹತ್ವವಿದೆ, ಗಿರಿಜಿಲ್ಲೆಯಲ್ಲಿ ಶೈಕ್ಷಣಿಕವಾಗಿ ನಾವೂ ಸಾಧಿಸಬೇಕಾಗಿರುವುದು ಬಹಳಷ್ಟಿದೆ, ಕಾರಣ ಶಿಕ್ಷಕರು ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡುವ ಜೊತೆಗೆ ಅವರಲ್ಲಿರುವ ಇತರ ಪ್ರತಿಭೆಗಳನ್ನು ಗುರುತಿಸಿ, ಸೂಕ್ತ ಪ್ರೋತ್ಸಾಹ ನೀಡಬೇಕು, ಸ್ಪರ್ಧಾ ಮನೋಭಾವನೆ ಅಂದಾಗ ಮಾತ್ರ ಅವರು ಸರ್ವಾಂಗೀಣ ಬೆಳವಣಿಗೆ ಸಾಧಿಸಲು ಸಹಕಾರಿಯಾಗುತ್ತದೆ ಎಂದು ನಗರಸಭೆ ಅಧ್ಯಕ್ಷೆ ಕು. ಲಲಿತಾ ಅನಪೂರ ಸಲಹೆ ನೀಡಿದರು.

ನಗರದ ಲಕ್ಷ್ಮೀ ನಗರದಲ್ಲಿ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಹಮ್ಮಿಕೊಂಡಿದ್ದ 2024–25ನೇ ಸಾಲಿನ ವಾರ್ಷಿಕ ಸ್ನೇಹ ಸಮ್ಮೇಳನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಣಕ್ಕಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಸಾಕಷ್ಟು ಅನುದಾನ ನೀಡುವ ಮೂಲಕ ಬದಲಾವಣೆಗೆ ಶ್ರಮಿಸುತ್ತಿವೆ, ಆದರೆ ಗಿರಿ ಜಿಲ್ಲೆಯಲ್ಲಿ ಮಾತ್ರ ಪರಿವರ್ತನೆ ಕಾಣುತ್ತಿಲ್ಲ, ಇದಕ್ಕೆ ಕಾರಣ ಏನೆಂಬುದನ್ನು ಎಲ್ಲರೂ ಸೇರಿ ಚರ್ಚಿಸಿ, ರೂಪುರೇಷಗಳನ್ನು ತಯಾರಿಸಿ ಅನುಷ್ಟಾನಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುವುದು ಅನಿವಾರ್ಯ ಎಂದು ಅಭಿಪ್ರಾಯ ಪಟ್ಟರು.

ಸರ್ಕಾರಿ ಶಾಲೆಗಳಲ್ಲಿ ಕೂಡ ಪ್ರತಿಭಾವಂತ ವಿದ್ಯಾರ್ಥಿಗಳು ಅಭ್ಯಾಸ ಮಾಡುತ್ತಿದ್ದಾರೆ, ಅದಕ್ಕೆ ಕಾರಣ ಪ್ರಾಮಾಣಿಕ ಶಿಕ್ಷಕರು, ಅವರಲ್ಲಿ ಈ ಶಾಲೆಯ ಪ್ರಭಾರಿ ಮುಖ್ಯ ಗುರುಗಳಾದ ಸುವರ್ಣ ರಾಠೋಡ ಅವರ ಇಚ್ಛಾಶಕ್ತಿ, ಪರಿಶ್ರಮದಿಂದ ಶಾಲೆಯಲ್ಲಿ ಮಕ್ಕಳ ಶೈಕ್ಷಣಿಕ ಬೆಳವಣಿಗೆ ಪೂರಕ ವಾತಾವರಣ ನಿರ್ಮಾಣವಾಗಿರುವುದಕ್ಕೆ ಶ್ಲಾಘನೀಯ, ಇದು ಇತರರಿಗೆ ಮಾದರಿಯಾಗಿಲಿ ಎಂದು ತಿಳಿಸಿದರು.

ನಗರದಲ್ಲಿರುವ ಎಲ್ಲಾ ಸರ್ಕಾರಿ ಶಾಲೆಗಳಿಗೆ ನಗರಸಭೆಯಿಂದ ಮೂಲ ಸೌಕರ್ಯಗಳನ್ನು ಒದಗಿಸಲು ನಮ್ಮ ತಂಡ ಕ್ರೀಯಾಶೀಲವಾಗಿದೆ, ಏನೇ ಸಮಸ್ಯೆಯಿದ್ದರೂ ತಮ್ಮ ಗಮನಕ್ಕೆ ತಂದರೆ, ಕೂಡಲೇ ಪರಿಹಾರಕ್ಕೆ ಯತ್ನಿಸುತ್ತೇವೆ ಎಂದು ತಿಳಿಸಿದರು.

ಶಿಕ್ಷಣ ಇಲಾಖೆ ಸಮನ್ವಯಾಧಿಕಾರಿಗಳಾದ ಮಲ್ಲಿಕಾರ್ಜುನ ಪೂಜಾರಿ ಮಾತನಾಡಿ, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯಲ್ಲಿ ಶಿಕ್ಷಕರ ಪಾತ್ರದ ಜೊತೆಗೆ ಪೋಷಕರ, ಸಮುದಾಯದ ಜವಾಬ್ದಾರಿ ಕೂಡ ಅಡಗಿದೆ, ಶಾಲೆಯಿಂದ ಮನೆಗೆ ಬರುವ ವಿದ್ಯಾರ್ಥಿಗಳ ಚಟುವಟಿಕೆ ಮೇಲೆ ಸೂಕ್ತ ನಿಗಾವಹಿಸಬೇಕು, ಸಲಹೆ ಸೂಚನೆಗಳನ್ನು ನೀಡಬೇಕು, ಅಂದಾಗ ಮಾತ್ರ ಅವರು ಒಳ್ಳೆಯ ಮಾರ್ಗದಲ್ಲಿ ಶಿಕ್ಷಣ ಪಡೆದು ತಮ್ಮ ಗುರಿ ತಲುಪುತ್ತಾರೆ ಎಂದು ಹೇಳಿದರು.

ಇಸಿಓ ಕಿಶನ್ ಪವಾರ ಮಾತನಾಡಿ, ಇಂತಹ ವಾರ್ಷಿಕ ಸ್ನೇಹಸಮ್ಮೇಳನದಿಂದ ವಿದ್ಯಾರ್ಥಿಗಳಲ್ಲಿರುವ ಹಲವಾರು ಪ್ರತಿಭೆಗಳು ಸಾರ್ವಜನಿಕವಾಗಿ ಅನಾವರಣಗೊಂಡು ಅವರಲ್ಲಿ ದೈಹಿಕ–ಮಾನಸಿಕ ಬದಲಾವಣೆಯಾಗುತ್ತದೆ ಎಂದರು.

ಸಮಾರಂಭದಲ್ಲಿ ಕಾರ್ಯಕ್ರಮ ನಿಮಿತ್ಯ ಹಮ್ಮಿಕೊಂಡಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ಹಾಗೂ ಪ್ರಶಸ್ತಿ ಪತ್ರಗಳನ್ನು ವಿತರಿಸಲಾಯಿತು,

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆ ಎಸ್‌ಡಿಎಂಸಿ ಅಧ್ಯಕ್ಷೆ ಪದ್ಮಾ ವಹಿಸಿದರು,

ಶಾಲೆ ಮುಖ್ಯಗುರುಗಳಾದ ಸುವರ್ಣಾ ರಾಠೋಡ ಪ್ರಾಸ್ತಾವಿಕವಾಗಿ ಮಾತನಾಡಿ ಶಾಲಾ ವಾರ್ಷಿಕ ಪ್ರಗತಿ ವರದಿ ವಾಚಿಸಿದರು.

ವೇದಿಕೆ ಮೇಲೆ ನಗರಸಭೆ ಸದಸ್ಯ ಹಣಮಂತ ಇಟಗಿ, ತಾಲ್ಲೂಕಾ ವೀರಶೈವ ಸಮಾಜದ ಅಧ್ಯಕ್ಷ ರಾಜುಗೌಡ ಚಾಮನಳ್ಳಿ, ಅಕ್ಕಮಹಾದೇವಿ, ಸತೀಶ ಶಹಾಪೂರ, ಶಿವಪ್ಪ ಮುಷ್ಟೂರಕರ, ಶ್ರೀನಾಥ ಜೈನ್, ರಮೇಶ ರಾಠೋಡ ಸೇರಿದಂತೆ ಶಿಕ್ಷಣ ಇಲಾಖೆಯ ಸಿಆರ್‌ಪಿಗಳಾದ ವೆಂಕಟರಡ್ಡಿ, ಗುಂಡುರಾವ ಕುಲಕರ್ಣಿ, ಅಶೋಕ ಕಡತದ ಸೇರಿದಂತೆ ಪಾಲಕ–ಪೋಷಕರು, ಸಾರ್ವಜನಿಕರು ಉಪಸ್ಥಿತರಿದ್ದರು.

ನಂತರ ನಡೆದ ವಿದ್ಯಾರ್ಥಿಗಳ ಸಾಂಸ್ಕೃತಿಕ ಕಾರ್ಯಕ್ರಮ ಜನಮನ ಸೆಳೆಯಿತು,

ಸಾಹಿತಿ ಗುರುಪ್ರಸಾದ ವೈದ್ಯ ನಿರೂಪಿಸಿ, ವಂದಿಸಿದರು.

# ಮಹಿಳೆ ಅಬಲೆ ಅಲ್ಲ ಸಬಲೆ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಮಾ 8 ಇಲ್ಲಿನ ಶ್ರೀ ಬಸವೇಶ್ವರ ದೇವಸ್ಥಾನ ಶಿಕ್ಷಣ ಸಂಸ್ಥೆ ಅಡಿಯಲ್ಲಿ ಹಾಗೂ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಸಂಲಗ್ನತೆಯಲ್ಲಿ NSS ಮತ್ತು ಸಾಂಸ್ಕೃತಿಕ ಘಟಕದಿಂದ ಅಕ್ಕಮಹಾದೇವಿ ಪದವಿ ಮಹಿಳಾ ಮಹಾವಿದ್ಯಾಲಯದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಆಚರಿಸಲಾಯಿತು. ಮುಖ್ಯ ಅತಿಥಿಯಾಗಿ ಮಂಠಾಳ ಪಿ.ಎಸ್.ಐ. ಸುವರ್ಣಾ ಮಲಶೆಟ್ಟಿ ಮಾತನಾಡಿ ವಿದ್ಯಾರ್ಥಿಗಳಿಗೆ ಆತ್ಮವಿಶ್ವಾಸ ಹೆಚ್ಚಿಸಿ ಮಹಿಳಾ ಮಹನೀಯರನ್ನು ನೆನೆಸಿ ಅವರು ಸಾಧನೆಗಳನ್ನು ಹೇಳಿದರು. ಅಪರಾಧದ ಕಾನೂನು ಅರಿವು ಮೂಡಿಸಿ ಸಮಾಜದಲ್ಲಿ ಆಗುವ ಧೋರಣೆಯನ್ನು ಖಂಡಿಸಿ ಧೈರ್ಯದಿಂದ ಬದುಕಬೇಕು ಎಂದು ಹೇಳಿದರು. ಸ್ಪರ್ಧಾತ್ಮಕ ಪರೀಕ್ಷೆ ಬರೆದು IAS, ಖಕಖ ನಂತಹ ಪರೀಕ್ಷೆ ತಯಾರಿ ನಡೆಸಲು ಮನೋಸ್ಥೈರ್ಯ ವಿದ್ಯಾರ್ಥಿಗಳಿಗೆ ತುಂಬಿದ್ದರು.


ಮುಖ್ಯ ಅತಿಥಿ ಉಪನ್ಯಾಸಕರಾದ ಕನ್ಯಾಕುಮಾರಿ. ಆಢಳಿತಾಧಿಕಾರಿ ಡಾ.ಮಲ್ಲಿಕಾರ್ಜುನ ಲಕಶೆಟ್ಟಿ ಪ.ಪೂ.ಕಾಲೇಜಿನ ಪ್ರಾಚಾರ್ಯರಾದ ಡಾ. ರುದ್ರಮಣಿ ಮಠಪತಿ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಭೀಮಾಶಂಕರ ಬಿರಾದಾರ . ಅಕ್ಕಮಾಹಾದೇವಿ ಮಹಿಳಾ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಮಾಯಾ ಮುರಾಳೆ ಅಧ್ಯಕ್ಷತೆ ವಹಿಸಿದ್ದರು. ಪೂಜಾ ಗಂಗು ಉಪನ್ಯಾಸಕರು ನಿರೂಪಿಸಿದರು. ಕು. ಸಪ್ನಾ ಬಿರಾದಾರ ಉಪನ್ಯಾಸಕರು ಸ್ವಾಗತಿಸಿದರು. ದಶರಥ NSS ಕೋಶ ಉಪನ್ಯಾಸಕರು ವಂದಿಸಿದರು.

# ತಾಯಿಂದಿರು ಮಕ್ಕಳಿಗೆ ಹೆಣ್ಣಿನ ಮೇಲೆ ಗೌರವ ಕೊಡುವುದನ್ನು ಕಲಿಸಬೇಕು: ಗೀತಾರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಮಹಿಳೆ ಎಲ್ಲ ಕ್ಷೇತ್ರದಲ್ಲಿ ಮುನ್ನುಗ್ಗುತ್ತಾ ತನ್ನದೇ ಛಾಪು ಮೂಡಿಸಿದ್ದಾಳೆ ಎಂದು ಪಟ್ಟಣದ ಬಸವನಗರದ ರೇಣುಕಾ ಅವರ ನಿವಾಸದಲ್ಲಿ ಆಯೋಜಿಸಿದ ವಿಶ್ವ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಗೀತಾರೆಡ್ಡಿ ಮಾತನಾಡುತ್ತಾ ತಿಳಿಸಿದರು. ಸಮಾನತೆಯನ್ನುವುದು ಮತ್ತೊಬ್ಬರಿಂದ ಪಡೆಯುವುದಲ್ಲ, ಸಮಾನತೆ ಎಂಬುದು ನಾವೇ ಪಡೆದುಕೊಳ್ಳುವುದು. ಸಮಾನತೆ ಪಡೆಯಬೇಕು ಎಂದರೆ ಹೆಣ್ಣು ಮಕ್ಕಳು ಉತ್ತಮ ರೀತಿಯಲ್ಲಿ ವಿದ್ಯಾಭ್ಯಾಸ ಮಾಡಬೇಕು. ತಾಯಂದಿರು ಮನೆಯಲ್ಲಿ ಹೆಣ್ಣುಗಂಡು ಎಂಬ ತಾರತಮ್ಯ ತೋರಬಾರದು. ಮನೆಯಲ್ಲಿ ತಾಯಿಂದಿರು ಮಕ್ಕಳಿಗೆ ಹೆಣ್ಣಿನ ಮೇಲೆ ಗೌರವ ಕೊಡುವುದನ್ನು ಕಲಿಸಬೇಕು, ಇದರಿಂದ ಅತ್ಯಾಚಾರ ನಿಲ್ಲಿಸಬಹುದು. ಮನೆಯಲ್ಲಿ ತಾಯಂದಿರು ಹೆಣ್ಣುಮಕ್ಕಳನ್ನು ಸ್ವಾತಂತ್ರವಾಗಿ ಬೆಳೆಸಬೇಕು ಎಂದರು. ಹೆಣ್ಣು–ಗಂಡು ಎಂಬ ಭೇದಭಾವ ಹುಟ್ಟುವುದೇ ಮಹಿಳೆ ಗರ್ಭಾವಸ್ಥೆಯಲ್ಲಿ. ಹೆಣ್ಣು ಹುಟ್ಟಿದರೆ ಹೆಚ್ಚು ವೆಚ್ಚವಾಗುತ್ತದೆ ಎಂಬ ಮನೋಭಾವ ಇನ್ನೂ ಇದೆ. ಹೆಣ್ಣನ್ನು ಸ್ವಾತಂತ್ರವಾಗಿ ಬೆಳೆಸಬೇಕು, ಹೆಣ್ಣನ್ನು ಸಮಾಜ ಮುಖಿಯಾಗಿ ಬೆಳೆಸಲು ತಂದೆ–ತಾಯಿಯರು ಕೈಜೋಡಿಸಬೇಕು ಎಂದರು. ಮಂಕಾವತಿ, ಆಶಾ, ವೀರಮ್ಮ, ಲತಾ, ಭವ್ಯರಾಣಿ, ಗೌರಮ್ಮ, ನೀತಾ, ಅಶ್ವಿನಿ ಉಪಸ್ಥಿತರಿದ್ದರು.

# ವಿಜೃಂಭಣೆಯ ಮಳೆರಾಜೇಂದ್ರಸ್ವಾಮಿ ರಥೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.8– ಜಲವನ್ನು ಪೂಜಿಸುವ, ಮಳೆ ಸೂಚನೆ ನೀಡುವ ಮುರನಾಳ ಶ್ರೀ ಮಳೆರಾಜೇಂದ್ರಸ್ವಾಮಿ ಮಠದ ಮಹಾರಥೋತ್ಸವ ಶನಿವಾರ ಹೊಸ ಮುರನಾಳ ಗ್ರಾಮದಲ್ಲಿ ಸಂಭ್ರಮದಿಂದ ಜರುಗಿತು. ಅನೇಕ ಹರ ಗುರು ಚರಮೂರ್ತಿಗಳ ಸಾನಿಧ್ಯದಲ್ಲಿ, ಸಹಸ್ರಾರು ಜನ ಭಕ್ತರ ಸಮ್ಮುಖದಲ್ಲಿ ರಥೋತ್ಸವ ಜರುಗಿತು. ನೆರೆದ ಭಕ್ತರು ತೇರಿಗೆ ಹೂ, ಹಣ್ಣು, ಉತ್ತತ್ತಿ ಎಸೆದು ಭಕ್ತಿ ಸಮರ್ಪಣೆ ಮಾಡಿದರು. ಬೆಳಿಗ್ಗೆ ಶ್ರೀಮಠದಲ್ಲಿ ಮಳೆರಾಜೇಂದ್ರಸ್ವಾಮಿಯ ಮೂರ್ತಿಗೆ ಅಭಿಷೇಕ ಮಹಾಮಂಗಳಾರತಿ, ಭಗವತದ್ಗೀತಾ ಪಾರಾಯಣ ನಡೆಯಿತು. ವಿಶೇಷ ಪುಷ್ಪಾಲಂಕಾರ ಮಾಡಲಾಗಿತ್ತು. ಹಲವಾರು ಜನ ಭಕ್ತರು ದೀರ್ಘದಂಡ ನಮಸ್ಕಾರ ಹಾಕಿ ಹರಕೆ ತೀರಿಸಿದರು. ಮಧ್ಯಾಹ್ನ ಮಹಿಳೆಯರ ಆರತಿ ಸೇವೆಯೊಂದಿಗೆ ಶ್ರೀ ಸ್ವಾಮಿಯ ಪಲ್ಲಕ್ಕಿ ಉತ್ಸವ ನಡೆಯಿತು. ನಂತರ ಕುದುರೆಯನ್ನೇರಿದ ಮೇಘರಾಜ ಸ್ವಾಮಿಗಳು, ನಂದಿಕೋಲು, ಪುರವಂತರ ಸೇವೆ, ಭಾಜಾ ಭಜಂತ್ರಿ, ಕರಡಿ ಮಜಲಿನ ಸಂಭ್ರಮದೊಂದಿಗೆ ಸಣ್ಣ ರಥೋತ್ಸವ(ಉಚ್ಚಯ್ಯ) ಜರುಗಿತು. ಆರತಿ ಸೇವೆಯಲ್ಲಿ ಮುಸ್ಲಿಂ ಮಹಿಳೆಯರು ದೀಪದ ಆರತಿಗಳಿಗೆ ಎಣ್ಣೆ ನೀಡಿದರು. ಸಣ್ಣ ರಥೋತ್ಸವದ ನಂತರ ಮಠದಲ್ಲಿ ಮಳೆರಾಜೇಂದ್ರಸ್ವಾಮಿ ಮೂರ್ತಿಗೆ ಮಠದ ಪೂಜ್ಯರಾದ ಮೌನೇಶ್ವರ ಸ್ವಾಮಿಗಳು ಸಕಲ ಭಕ್ತಾಧಿಗಳೊಡನೆ ವಿಶೇಷ ಮಂಗಳಾರತಿ ನೆರವೇರಿಸಿದರು. ಸಂಜೆ ಶ್ರೀಮಠದ ಮಠಾಧೀಶರಾದ ಮೌನೇಶ್ವರಸ್ವಾಮಿಗಳ ಸಾನಿಧ್ಯದಲ್ಲಿ ನಡೆದ ಜಾತ್ರೆಯಲ್ಲಿ ಗ್ರಾಮದ ಹಿರಿಯರು, ಸುತ್ತಮುತ್ತಲಿನ ಗ್ರಾಮಗಳು ಮತ್ತು ವಿವಿಧ ಜಿಲ್ಲೆ ಹಾಗೂ ಹೊರ ರಾಜ್ಯದ ಭಕ್ತರು ಪಾಲ್ಗೊಂಡಿದ್ದರು.

# ಕಲ್ಯಾಣ ಕರ್ನಾಟಕಕ್ಕೆ 5 ಸಾವಿರ ಕೋಟಿ ರೂ. ಅನುದಾನ:ಡಿ.ಕೆ.ಶಿವಕುಮಾರ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.8:ಕರ್ನಾಟಕ ರಾಜ್ಯದ 2025-26ನೇ ಸಾಲಿನ ಆಯವ್ಯಯದಲ್ಲಿ ಮಹಿಳೆಯರಿಗೆ ಹೆಚ್ಚಿನ ಪ್ರಾಶಸ್ತ್ಯ ನೀಡಲಾಗಿದ್ದು, ಈ ಮಹಿಳಾ ದಿನಾಚರಣೆಯ ಅಂಗವಾಗಿ ಐತಿಹಾಸಿಕವಾದ ಬಜೆಟ್‌ನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ 5 ಸಾವಿರ ಕೋಟಿ ರೂ. ಅನುದಾನ ನೀಡಲಾಗಿದೆ ಎಂದು ರಾಜ್ಯದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹೇಳಿದರು.ಶನಿವಾರ ವಿವಿಧ ಕಾರ್ಯಕ್ರಮಗಳ ನಿಮಿತ್ತ ಕಲಬುರಗಿಗೆ ಆಗಮಿಸಿರುವ ಅವರು ನಗರದ ಐವಾನ್.ಎ.ಶಾಹಿ ಅತಿಥಿ ಗೃಹದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ರಾಜ್ಯದ ಎಲ್ಲಾ ವರ್ಗಗಳಿಗೆ ಸಮತೋಲನ ಬಜೆಟ್ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಐತಿಹಾಸಿಕ 16ನೇ ಬಾರಿಗೆ ಮಂಡಿಸಿದ್ದಾರೆ ಎಂದರು. ಚುನಾವಣೆ ಸಮಯದಲ್ಲಿ ಘೋಷಿಸಿದಂತೆ ಬಜೆಟ್‌ನಲ್ಲಿ ಕಲ್ಯಾಣ ಕರ್ನಾಟಕಕ್ಕೆ 5 ಸಾವಿರ ಕೋಟಿ ರೂ. ಅನುದಾನ ನೀಡುವ ಸಂಪ್ರದಾಯ ಈ ವರ್ಷವು ಮುಂದುವರೆಸಿದ್ದು, ಕಲ್ಯಾಣ ಕರ್ನಾಟಕ ಅಭಿವೃದ್ಧಿಗಾಗಿ ಇಂದು 1,000 ಕೋಟಿ ರೂ. ವೆಚ್ಚದಲ್ಲಿ ಕಲ್ಯಾಣ ಪಥ ಯೋಜನೆಯಡಿ ಗ್ರಾಮೀಣಾ ರಸ್ತೆಗಳ ಅಭಿವೃದ್ಧಿ ಕಾರ್ಯ-ಕ್ಕೆ ಚಾಲನೆ ನೀಡಲಾಗುತ್ತಿದೆ ಎಂದರು.ಕಲ್ಯಾಣ ಕರ್ನಾಟಕ ಟಿಬಿ ಡ್ಯಾಂ ವ್ಯಾಪ್ತಿಯ ನೀರಾವರಿಗೆ ಸಂಬಂಧಿಸಿದಂತೆ ಪೋಲಾಗುತ್ತಿರುವ ನೀರನ್ನು ಬಳಸಿಕೊಳ್ಳಲು ಪಕ್ಕದ ರಾಜ್ಯಗಳಾದ ಆಂಧ್ರ-ತೆಲಂಗಾಣ ಸಿ.ಎಂ.ಗಳ ಜೊತೆ ಸಭೆ ನೆಡೆಸಲು ಚರ್ಚಿಸಲಾಗುತ್ತಿದೆ ಎಂದರು.

ಕಲ್ಯಾಣ ಕರ್ನಾಟಕ ವ್ಯಾಪ್ತಿಯ ಜನರ ಆರೋಗ್ಯ ಮತ್ತು ಶಿಕ್ಷಣಕ್ಕೆ ಸಂಬಂಧಿಸಿದಂತೆ ಹೆಚ್ಚಿನ ಅಭಿವೃದ್ಧಿಗಾಗಿ ಕಾಳಜಿ ವಹಿಸಲಾಗುವುದು. ನೀರಾವರಿ ವಲಯಲ್ಲೆ 27,000 ಕೋಟಿ ರೂ. ಅನುದಾನ ಮೀಸಲಿಡಲಾಗಿದೆ. ಬಜೆಟ್‌ನಲ್ಲಿ ಘೋಷಿಸಿರುವಂತೆ 500 ಹೊಸ ಕೆ.ಪಿ.ಎಸ್. ಮಾದರಿ ಶಾಲೆಗಳನ್ನು ಶೀಘ್ರದಲ್ಲಿ ಆರಂಭಿಸಲಾಗುವುದು ಎಂದ ಅವರು, ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಇಡಿ ದೇಶದಲ್ಲಿಯೇ ಮೊದಲ ಬಾರಿಗೆ ಗುತ್ತಿಗೆಯಲ್ಲಿ ಮೀಸಲಾತಿ ಒದಗಿಸಿದೆ ಎಂದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್,ಐ.ಟಿ.-ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಮಾತನಾಡಿ, ಕಲ್ಯಾಣ ಪಥ ಮತ್ತು ಪ್ರಗತಿ ಪಥ ಎರಡೆ-ರೆಡು ಯೋಜನೆಗಳು ಕಲ್ಯಾಣ ಕರ್ನಾಟಕಕ್ಕೆ ಸಿಗುತ್ತಿರುವದು ಈ ಭಾಗಕ್ಕೆ ಒಳ್ಳೆಯ ಸಂಗತಿಯಾಗಿದೆ. ರಾಜ್ಯದ ಈ ಎರಡು ಯೋಜನೆಗಳಿಂದ ಕಲ್ಯಾಣ ಕರ್ನಾಟಕದ ಬಹುಭಾಗದ ಗ್ರಾಮೀಣ ರಸ್ತೆಗಳು ಅಭಿವೃದ್ಧಿಯಾಗಲಿವೆ ಎಂದು ಹೇಳಿದರು.ಈ ಭಾಗದ ತೊಗರಿಗೆ ಪರಿಹಾರ ಒದಗಿಸಬೇಕೆಂಬ ರೈತರ ಬೇಡಿಕೆ ಕುರಿತು ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಸಚಿವ ಪ್ರಿಯಾಂಕ್ ಖರ್ಗೆ ಅವರು, ಕಳೆದ ವರ್ಷ ನೆಟೆ ರೋಗ ಬಂದಾಗ ಹೆಚ್ಚಿನ ಪರಿಹಾರ ಜಿಲ್ಲೆಯಲ್ಲಿ ಒದಗಿಸಿದೆ. ಈ ವರ್ಷ ಸಹ ಒಣ ರೋಗದಿಂದ ಬೆಳೆ ಹಾನಿಯಾಗಿದ್ದು ಗಮನಕ್ಕಿದೆ. ಈ ಕುರಿತು ಬೆಂಗಳೂರು ಮತ್ತಯ ರಾಯಚೂರು ಕೃಷಿ ವಿ.ವಿ.ಯ ವಿಜ್ಞಾನಿಗಳ ತಂಡ ಅಧ್ಯಯನ ನಡೆಸಿ ಕೃಷಿ ಇಲಾಖೆಗೆ ವರದಿ ಬಂದಿದೆ. ಕೃಷಿ ಇಲಾಖೆ ಶಿಫಾರಸ್ಸಿನ ಮೇಲೆ ಸರ್ಕಾರ ಕ್ರಮ ವಹಿಸಲಿದೆ. ವೈಜ್ಞಾನಿಕವಾಗಿ ಸಮಸ್ಯೆಯನ್ನು ಅರಿಯಲು ಸಂಬಂಧಪಟ್ಟ ಇನ್ಸೂರೆನ್ಸ್ ಅಧಿಕಾರಿಗಳೊಂದಿಗೆ ಮಾತನಾಡಿ ರೈತರಿಗೆ ಸಹಾಯವಾಗುವಂತೆ ಸೂಕ್ತ ಪರಿಹಾರ ಸಿಗುವಂತೆ ಕ್ರಮ ಕೈಗೊಳ್ಳಲಾಗಿದೆ, ಅಂತಿಮ ವರದಿಗಾಗಿ ಕಾಯುತ್ತಿದ್ದೇವೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷ ಡಾ ಅಜಯ್ ಸಿಂಗ್ ಅವರು ಮಾತನಾಡಿ ಕಲ್ಯಾಣ ಪಥ ಹಾಗೂ ಪ್ರಗತಿಪಥ ಈ ಎರಡು ಯೋಜನೆಗಳಿಂದ ಕಲ್ಯಾಣ ಕರ್ನಾಟಕ ಭಾಗಕ್ಕೆ 2 ಸಾವಿರ ಕೋಟಿ ರೂ. ಅನುದಾನ ರಸ್ತೆ ಅಭಿವೃದ್ಧಿಗೆ ಸಿಗಲಿದೆ. ಇದರ ಹೊರತಾಗಿಯೂ ರಾಜ್ಯ ಸರ್ಕಾರ ಸಾವಿರಾರು ಕೋಟಿ ರೂ. ಈ ಭಾಗಕ್ಕೆ ಹಣ ಖರ್ಚು ಮಾಡಲಾಗುತ್ತಿದೆ ಎಂದರು.

# ಬೀದರ ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಶ್ರಮಿಸೋಣ:ಪ್ರೊ.ಬಿ.ಎಸ್.ಬಿರಾದಾರ




ಮಲ್ಲಮ್ಮ ನುಡಿ ವಾರ್ತೆ

ಬೀದರ:ಮಾ.08: ಬೀದರ ವಿಶ್ವವಿದ್ಯಾಲಯಕ್ಕೆ ನೂತನವಾಗಿ ಕರ್ನಾಟಕ ಸರ್ಕಾರ ನೇಮಿಸಿದ ಆರು ಜನ ಸಿಂಡಿಕೇಟ್ ಸದಸ್ಯರು ಆಗಮಿಸಿ ಇಂದು ವರದಿ ಮಾಡಿಕೊಂಡರು.

ಅವರಲ್ಲಿ ಶ್ರೀ ಶಿವನಾಥ ಪಾಟೀಲ್ ಮಾಧವರಾವ್ ಪಾಟೀಲ್ (ಸಾಮಾನ್ಯ), ಶ್ರೀ ಸಚಿನ್ ಶಿವರಾಜ್ (ಸಾಮಾನ್ಯ), ಶ್ರೀ ವಿಠಲ್‌ದಾಸ್

ಪ್ಯಾಗೆ ದೇವಿದಾಸ ಪ್ಯಾಗೆ (ಪರಿಶಿಷ್ಟಜಾತಿ), ಶ್ರೀ ಅರ್ಜುನ್ ಮತೆಪ್ಪ ಕನಕ (ಹಿಂದುಳಿದ ವರ್ಗ), ಶ್ರೀ ಅಬ್ದುಲ್ ಸತ್ತಾರ್ ಚಾಂದ್‌ಸಾಬ್ (ಅಲ್ಪಸಂಖ್ಯಾತರು) ಹಾಗೂ ಶ್ರೀಮತಿ ವೈಷ್ಣವಿ ಆರ್.ಪಾಟೀಲ್ ರವರು ಇಂದು ಸರ್ಕಾರ ನೀಡಿದ ತಮ್ಮ ಜವಾಬ್ದಾರಿಗೆ ವರದಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ಬೀದರ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೋ.ಬಿ.ಎಸ್.ಬಿರಾದಾರರವರು ಮಾತನಾಡುತ್ತಾ, ನೂತನ ಸಿಂಡಿ-ಕೇಟ್ ಸದಸ್ಯರ ಆಗಮನದಿಂದ ವಿಶ್ವವಿದ್ಯಾಲಯಕ್ಕೆ ವಿಶೇಷ ಶಕ್ತಿ ಬಂದಂತಾಗಿದೆ. ವಿಶಾಲವಾದ 322 ಎಕರೆಯಲ್ಲಿ ವ್ಯಾಪಿಸಿರುವ ಬೀದರ ವಿಶ್ವವಿದ್ಯಾಲಯವು 124 ಕಾಲೇಜುಗಳ ಸಂಯೋಜನೆಯೊಂದಿಗೆ 14 ಸ್ನಾತಕೋತ್ತರ ಪದವಿ ಕೋರ್ಸುಗಳು

ಹಾಗೂ 26000 ವಿದ್ಯಾರ್ಥಿಗಳು ಪ್ರವೇಶ ಪಡೆದಂತಹ ವಿಶ್ವವಿದ್ಯಾಲಯವಾಗಿದೆ. ನೂತನ ವಿಶ್ವವಿದ್ಯಾಲಯವು ಅಭಿವೃದ್ಧಿ ಹೊಂದಬೇಕಾದರೆ ಎಲ್ಲಾ ಸಿಂಡಿಕೇಟ್ ಸದಸ್ಯರ ಸಹಕಾರ ಮಾರ್ಗದರ್ಶನ ಅವಶ್ಯಕತೆಯಿದೆ. ಎಲ್ಲರ ಸಹಕಾರದೊಂದಿಗೆ ಮಾದರಿ ವಿಶ್ವವಿದ್ಯಾಲಯದೊಂದಿಗೆ ವಿಶ್ವವಿದ್ಯಾಲಯ ಕಟ್ಟೋಣವೆಂದರು.

ನೂತನ ವಿಶ್ವವಿದ್ಯಾಲಯವು ಈ ಭಾಗಕ್ಕೆ ವರದಾನವಾಗಿದೆ. ಈ ಭಾಗದ ವಿದ್ಯಾರ್ಥಿಗಳ ಧ್ಯೇಯೋದ್ದೇಶಗಳನ್ನು ಈಡೇರಿಸುವಲ್ಲಿ ಕೈಜೋಡಿಸೋಣ, ಎಲ್ಲರೂ ಒಗ್ಗೂಡಿ ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಕಂಕಣಬದ್ಧರಾಗೋಣವೆಂದರು.

ಬೀದರ ವಿಶ್ವವಿದ್ಯಾಲಯದ ಆಡಳಿತ ಕುಲಸಚಿವರಾದ ಸು-ರೇಖಾ ಕೆ.ಎ.ಎಸ್ ರವರು ಎಲ್ಲರನ್ನು ಸ್ವಾಗತಿಸಿದರು, ಬೀದರ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾದ ಪ್ರೋ.ಪರಮೇಶ್ವರನಾಯ್ಕ.ಟಿರವರು ಸರ್ವರನ್ನು ವಂದಿಸಿದರು. ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಶಿಕ್ಷಕ/ಶಿಕ್ಷಕೇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಗೋ ರಕ್ಷಣೆ ಎಲ್ಲರ ಹೊಣೆ:ಸಚಿವ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.8:ನಮ್ಮ ದೇಶದಲ್ಲಿ ಪಾರಂಪರಿಕವಾಗಿ ಹಸುಗಳಿಗೆ ಗೋ ಮಾತಾ ಎಂದು ಕರೆಯಲಾಗುತ್ತದೆ. ಗೋವುಗಳ ರಕ್ಷಣೆ ಮಾಡುವುದು ಎಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಅರಣ್ಯ,ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅಭಿಪ್ರಾಯಪಟ್ಟರು.

ಬೆಂಗಳೂರಿನ ಹೆಸರಗಟ್ಟಾ ಮುಖ್ಯರಸ್ತೆಯ ಚಿಕ್ಕಸಂದ್ರಾದಲ್ಲಿರುವ ಬಾಲಾಜಿ ರಾಗಾ ಒಡೆತನದ ಸಂಗಮ ಗೋ ಶಾಲೆ ಮತ್ತು ಹೈ ಲ್ಯಾಂಡ್ ಹೋಟಲ್‌ಗೆ ಭೇಟಿ ನೀಡಿ ಗೋವುಗಳಿಗೆ ನೈವೇದ್ಯ ಉಣಬಡಿಸಿ,ತಮ್ಮ ಮನದಾಳದ ಮಾತುಗಳು ಹೊರಹಾಕಿದರು.

ಪ್ರತಿ ನಿತ್ಯ ಬೆಳಿಗ್ಗೆ ಎದ್ದ ತಕ್ಷಣ ಗೋವುಗಳ ಮುಖ ನೋಡಿದರೆ ಮನಸ್ಸಿನಲ್ಲಿ ಅಹ್ಲಾದವುಂಟಾಗುತ್ತದೆ.ಪೂರ್ವಜರು ಗೋವುಗಳಿಗೆ ದೇವರು ಎಂದು ಪೂಜಿಸುವ ಸಂಸ್ಕೃತಿ ಈಗಲೂ ಎಲ್ಲ ಕಡೆ ಕಾಣುತ್ತೇವೆ. ಗೋವುಗಳ ಪರಿಶುದ್ಧ ಹಾಲು,ಹಸುವಿನ ಸಗಣಿಯಿಂದ ವಿಭೂತಿ ತಯಾ ??ರಿಸುವುದು ಸೇರಿದಂತೆ ಇನ್ನಿತರ ವೈಜ್ಞಾನಿಕ ಆಧಾರಿತ ವಸ್ತುಗಳು ಮಾನವನ ಸದೃಢ ಶರೀರಕ್ಕೆ ಅತ್ಯಂತ ಉಪಯುಕ್ತವಾಗಿವೆ.ಬೀದರ ಜಿಲ್ಲೆಯ ಖಟಕ ಚಿಂಚೋಳಿಯ ಯುವ ಉದ್ಯಮಿ ಬಾಲಾಜಿ ರಾಗಾ ಅವರು ಧೈರ್ಯದಿಂದ ರಾಜಧಾನಿ ಬೆಂಗಳೂರಿನಲ್ಲಿ ತನ್ನ ಸ್ವಂತ ಬಲದ ಮೇಲೆ ಸಂಗಮ ಗೋ ಶಾಲೆ ಮತ್ತು ಹೈ ಲ್ಯಾಂಡ್ ಹೋಟಲ್ ನಡೆಸಿ ಅನೇಕ ಕುಟುಂಬಸ್ಥರಿಗೆ ಆಶ್ರಯದಾತರಾಗಿದ್ದಾರೆ.ಅವರ ಸ್ವಾವಲಂಬಿ ಬದುಕು ಇತರರಿಗೆ ಮಾದರಿಯಾಗಿದೆ ಎಂದರು.

ಗೋ ಶಾಲೆ ಮತ್ತು ಹೈ ಲ್ಯಾಂಡ್ ಹೋಟಲ್ ವ್ಯವಸ್ಥಾಪಕ ನಿರ್ದೇಶಕ ಬಾಲಾಜಿ ರಾಗಾ ಪ್ರತಿಕ್ರಿಯೆಸಿ ,ನಮ್ಮ ಗೋ ಶಾಲೆಗೆ ಸಚಿವ ಖಂಡ್ರೆ ಭೇಟಿ ನೀಡಿರುವುದರಿಂದ ನಮ್ಮ ಕುಟುಂಬಸ್ಥರಿಗೆ ಹಂಡೆ ಹಾಲು ಕುಡಿದಷ್ಟು ಖುಷಿಯಾಗಿದೆ.ನಾನು ಕಲಿತಿದ್ದು 10ನೇ ತರಗತಿ ವರೆಗೆ,2023ರಲ್ಲಿ ಬೆಂಗಳೂರಿಗೆ ಆಗಮಿಸಿ ಗೋ ಶಾಲೆ ಮತ್ತು ಹೈ ಲ್ಯಾಂಡ್ ಹೋಟಲ್ ನಡೆಸುತ್ತಿದ್ದೇನೆ.ಗೋ ಶಾಲೆಯಲ್ಲಿ ಗುಜರಾತಿ ಗಿರ್, ಕಾಂಗ್ರಿಸ್,ತುಂಗನೂರ,ಸಾಯಿ ವಾಲಾ ಸೇರಿದಂತೆ ಇನ್ನಿತರ ತಳಿಗಳು ಸಾಕುತ್ತೇವೆ.ಹಸುಗಳಿಗೆ ರಾಗಿ ಹುಲ್ಲು,ಸೈಲೇಜ್,ಗೋಧಿ ಹಿಟ್ಟು, ಆಹಾರವಾಗಿ ನೀಡಲಾಗುತ್ತದೆ.ಎಟು ಮಿಲ್ಕಿಂದ ಹೋಟಲ್ ಗ್ರಾಹಕರಿಗೆ ಕಾಫಿ ಬಡಿಸಲಾಗುತ್ತದೆ.ಸರ್ಕಾರದ ಯಾವುದೇ ಧನ ಸಹಾಯ ಪಡೆಯದೇ ಆತ್ಮಸ್ಥೈರ್ಯದಿಂದ ಉದ್ಯೋಗ ಆರಂಭಿಸಿದ್ದೇನೆ. ಹೈ ಲ್ಯಾಂಡ್ ಹೋಟಲ್‌ನಲ್ಲಿ ಆಯುರ್ವೇದಿಕ,ನ್ಯಾಚರೋಪತಿ,ಆಕ್ಯುಪಂಪಚರ್,ಯೋಗಾ ಚಿಕಿತ್ಸೆ ನೀಡಲಾಗುತ್ತದೆ.ನನಗೆ ಸನಾತನ ಭಾರತೀಯ ಸಂಸ್ಕೃತಿ ಮೇಲೆ ಅಪಾರ ನಂಬಿಕೆಯಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಬಸವರಾಜ ವಂಕೆ,ಪ್ರವೀಣ ಪಾಟೀಲ,ಅಂಬಾದಾಸ ಕೋರೆ,ಮಹಮ್ಮದ ಮುಕ್ತಾರ,ಕಬೀರ ಅಹಮ್ಮದ,ರಾಜಣ್ಣ,ಶ್ರೀಕಂಟೆಪ್ಪ,ಚೇತನ ಸೇರಿದಂತೆ ಅನೇಕರಿದ್ದರು.

# ರಾಷ್ಟ್ರೀಯ ಲೋಕ ಅದಾಲತ್: 262 ಪ್ರಕರಣ ಇತ್ಯರ್ಥಪಡಿಸಿ 5.79 ಕೋಟಿ ರೂ. ಪರಿಹಾರಕ್ಕೆ ಆದೇಶ



ಕಲಬುರಗಿ,ಮಾ.8:ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಶನಿವಾರ ಕಲಬುರಗಿ ಹೈಕೋರ್ಟ್ ಪೀಠದಲ್ಲಿ ಜರುಗಿದ ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮದಲ್ಲಿ 262 ಪ್ರಕರಣ ಪರಸ್ಪರ ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿ 5,79,96,200 ರೂ. ಪರಿಹಾರ ನೀಡುವಂತೆ ಜನತಾ ಅದಾಲತ್ ಆದೇಶಿಸಿದೆ.

ಹೈಕೋರ್ಟ್ ಉಚ್ಚ ನ್ಯಾಯಾಲಯ ಕಾನೂನು ಸೇವಾ ಸಮಿತಿಯಿಂದ ಆಯೋಜಿಸಿದ ಲೋಕಾ ಅದಾಲತ್ ಕಾರ್ಯಕ್ರಮದಲ್ಲಿ ಮೋಟಾರು ವಾಹನ ವಿಮೆ, ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳನ್ನು ವಕೀಲರು ಮತ್ತು ಕಕ್ಷಿದಾರರ ಸಮಕ್ಷಮ ರಾಜಿ ಸಂಧಾನ ಮೂಲಕ ಇತ್ಯರ್ಥಪಡಿಸಲಾಯಿತು.

ಈ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಧೀಶರಾದ ನ್ಯಾ. ಸಿ.ಎಮ್. ಜೋಶಿ ಮತ್ತು ನ್ಯಾ. ವಿಜಯಕುಮಾರ್ ಎ. ಪಾಟೀಲ್ ಅವರು ಭಾಗವಹಿಸಿದ್ದರು ಎಂದು ಕಲಬುರಗಿ ಉಚ್ಚ ನ್ಯಾಯಾಲಯ ಕಾನೂನು ಸೇವಾ ಸಮಿತಿಯ ಕಾರ್ಯದರ್ಶಿ ದಯಾನಂದ ವೀ.ಹಿರೇಮಠ ತಿಳಿಸಿದ್ದಾರೆ.

# ಆರೋಗ್ಯ ಎಷ್ಟು ಮುಖ್ಯವೋ ಅಷ್ಟೇ ಕ್ರೀಡೆ ಕೂಡ ಮುಖ್ಯ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮಾ.8:ತಾ.ಪಂ.ನ ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ ಅವರ ಆದೇಶದಂತೆ ಕಮಲನಗರ ತಾಲೂಕಿನ ಡೋಣಗಾಂವ (ಎಂ) ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ನಡೆಯುತ್ತಿರುವ ಕಾಮಗಾರಿ ಸ್ಥಳದಲ್ಲಿ ವಿಶ್ವ ಮಹಿಳಾ ದಿನಾಚರಣೆ ಪ್ರಯುಕ್ತ ನರೇಗಾ ಮಹಿಳಾ ಕೂಲಿ ಕಾರ್ಮಿಕರಿಗಾಗಿ ಆಯೋಜನೆ ಮಾಡಿರುವ ಆರೋಗ್ಯ ಶಿಬಿರ ಮತ್ತು ಕ್ರೀಡಾಕೂಟದ ಕಾರ್ಯಕ್ರಮದಲ್ಲಿ ತಾ.ಪಂ. ಸಹಾಯಕ ನಿರ್ದೇಶಕರಾದ ಹಣಮಂತರಾಯ ಕೌಟಗೆ ಮಾತನಾಡಿದರು.ಸಮಾಜದ ಕಟ್ಟುಪಾಡಗಳ ಹೊರತಾಗಿಯೂ ಕೂಡ ಈಗಿನ ಆಧುನಿಕ ದಿನಗಳಲ್ಲಿ ಮಹಿಳೆಯರು ಸಾಧನೆಯ ಶಿಖರವನ್ನೇರುತ್ತಿದ್ದಾರೆ.ಹಾಗಾಗಿ ವಿಶ್ವಾದ್ಯಂತ ಮಹಿಳೆಯರಿಗಾಗಿ ಗೌರವಾನ್ವಿತವಾಗಿ ಈ ಒಂದು ದಿನವನ್ನು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನಾಗಿ ಆಚರಿಸುತ್ತಾರೆ ಎಂದು ತಿಳಿಸಿದರು.

ಮಹಿಳಾ ದಿನಾಚರಣೆಯ ಅಂಗವಾಗಿ ಕೂಲಿ ಕಾರ್ಮಿಕರಿಗೆ ಹಮ್ಮಿಕೊಂಡಿದ್ದ ಕ್ರೀಡಾಕೂಟ ಹಾಗೂ ಆರೋಗ್ಯ ತಪಾಸಣೆಯನ್ನು ಎಲ್ಲರು ಸದುಪಯೋಗ ಪಡೆದುಕೊಳ್ಳಿ. ಆರೋಗ್ಯದ ವಿಷಯದಲ್ಲಿ ನಿರ್ಲಕ್ಷ್ಯ ತೋರದೆ ತಿಂಗಳಿಗೆವೊಮ್ಮೆಯಾದ್ರು ಬಿಪಿ, ಶುಗರ್ ತಪಾಸಣೆ ಮಾಡಿಸಿಕೊಳ್ಳಿ ಹೊರಗಡೆ ತಿಂಡಿ,ತಿನಿಸುಗಳನ್ನು ತಿನ್ನುವುದು ಕಡಿಮೆ ಮಾಡಿ ಹಿಮೋಗ್ಲೋಬಿನ್ ಹೆಚ್ಚಿಸುವ ಆಹಾರಗಳಾದ ತರಕಾರಿ,ಬೆಲ್ಲ, ಶೇಂಗಾ ಸೇರಿದಂತೆ ಪೌಷ್ಟಿಕ ಆಹಾರ ಸೇವಿಸಿ ಎಂದರು.

ಉದ್ಯೋಗ ಖಾತರಿ ಯೋಜನೆಯಡಿ ದಿನಕ್ಕೆ 349 ರೂ.ಕೂಲಿ ನೀಡಲಾಗುತ್ತಿದ್ದು, ವಾರ್ಷಿಕವಾಗಿ 34900 ರೂಗಳನ್ನು ನೀಡಲಾಗುತ್ತದೆ. ಹಾಗೆಯೇ ಯೋಜನೆಯಡಿ ವೈಯಕ್ತಿಕ ಕಾಮಗಾರಿಗಳಾದ ಬಚ್ಚಲು ಗುಂಡಿ, ಎರೆಹುಳು ತೊಟ್ಟಿ, ದನದಕೊಟ್ಟಿಗೆ, ಕುರಿಶೆಡ್, ಕೋಳಿಶೆಡ್, ತೋಟಗಾರಿಕಾ ಬೆಳೆಗಳಾದ ಪಪ್ಪಾಯ,ಮಾವು, ಸಿಬೆ ಹಾಗೂ ಇನ್ನಿತರೆ ಬೆಳೆಗಳನ್ನು ತೆಗೆದುಕೊಂಡು ಆರ್ಥಿಕವಾಗಿ ಸಬಲರಾಗಿರಿ ಯಾರಿಗೆ ಸ್ವಂತ ಜಮೀನು ಇಲ್ಲವೋ ಅವರು ಉದ್ಯೋಗ ಖಾತ್ರಿಯಲ್ಲಿ ಕೆಲಸ ಮಾಡಿ ಆರ್ಥಿಕವಾಗಿ ಸದೃಢರಾಗಿರಿ ಎಂದರು.ಬಳಿಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಏಕೀಕೃತ ಸಹಾಯವಾಣಿ 8277506000 ಬಗ್ಗೆ ಮಾಹಿತಿ ನೀಡಿದರು.ಪಂಚಾಯತ ಅಭಿವೃದ್ಧಿ ಅಧಿಕಾರಿ ವಿಜಯಕುಮಾರ ಮಾತನಾಡಿ ಒಂದು ಆರ್ಥಿಕ ವರ್ಷದಲ್ಲಿ ಒಂದು ಕುಟುಂಬಕ್ಕೆ 100 ದಿನಗಳ ಕೆಲಸವನ್ನು ಕೊಡಲಾಗುತ್ತದೆ 65 ವರ್ಷ ಮೇಲ್ಪಟ್ಟ ವೃದ್ಧರು, ಅಂಗವಿಕಲರು ಹಾಗೂ ಲಿಂಗತ್ವ ಅಲ್ಪಸಂಖ್ಯಾತರಿಗೆ, ಗರ್ಭಿಣಿ ಮಹಿಳೆಯರಿಗೆ ಕೆಲಸದಲ್ಲಿ ರಿಯಾಯತಿ ನೀಡುವ ಮೂಲಕ ಪ್ರೋತ್ಸಾಹಿಸಲಾಗುತ್ತಿದೆ. ಚಿಕ್ಕ ಮಕ್ಕಳ ರಕ್ಷಣೆಗೆಂದೆ ಕೂಸಿನ ಮನೆಯನ್ನು ನಿರ್ಮಿಸಲಾಗಿದೆ. ನಿಮ್ಮ ಮೂರು ವರ್ಷದ ಒಳಗಿನ ಮಗುವನ್ನು ಕೆಲಸಕ್ಕೆ ಬರುವಾಗ ಬಿಟ್ಟು ಬಂದರೆ ಆರೈಕೆದಾರರು ಮಗುವಿನ ಲಾಲನೆ ಪಾಲನೆ ಮಾಡುತ್ತಾರೆ ಇಂತಹ ಸರ್ಕಾರದ ಯೋಜನೆಗಳನ್ನು ಪಡೆದುಕೊಳ್ಳಿ ಎಂದು ಹೇಳಿದರು. ಆರೊಗ್ಯಾಧಿಕಾರಿ ಸಂದೀಪ ಬಿರಾದಾರ ಮಾತನಾಡಿ ಬೇಸಿಗೆ ಶುರುವಾಗಿದರಿಂದ ಬಿಸಿಲಿನ ತಾಪಕ್ಕೆ ಆರೋಗ್ಯದಲ್ಲಿ ಸಾಕಷ್ಟು ವ್ಯತ್ಯಾಸಗಳಾಗುತ್ತವೆ. ದೇಹ ನಿರ್ಜಲೀಕರಣವಾಗಲು ಪ್ರಾರಂಭಿಸುತ್ತದೆ. ಅದಕ್ಕೆ ಆರೋಗ್ಯವನ್ನು ಕಡ್ಡಾಯವಾಗಿ ತಪಾಸಣೆ ಮಾಡಿಸಿಕೊಳ್ಳಲೇಬೇಕು. ಮತ್ತು ಓ ಆರ್ ಎಸ್‌ನ್ನು ನೀರಲ್ಲಿ ಬೆರೆಸಿ ಕೂಡಿಯುವುದರಿಂದ ಕರುಳಿನ ಮೂಲಕ ನೀರನ್ನು ಹೆಚ್ಚಿಸುತ್ತದೆ ಎಂದು ವಿವರಿಸಿದರು.

ನಂತರ ಮಹಿಳೆಯರು ಮತ್ತು ಪುರುಷರಿಗೆ ಮ್ಯೂಸಿಕಲ್ ಚೇರ್, ಲೇಮನ ಸ್ಪೂನ್, ಕೆರೆ ದಂಡೆ, ಓಟದ ಸ್ಪರ್ಧೆ ಏರ್ಪಡಿಸಿ, ವಿಜೇತರಾದ ಕೂಲಿಕಾರರಿಗೆ ಬಹುಮಾನವನ್ನು ಸಹಾಯಕ ನಿರ್ದೇಶಕರು ವಿತರಣೆ ಮಾಡಿದರು.ಈ ಸಂದರ್ಭದಲ್ಲಿ ಗ್ರಾ.ಪಂ. ಅಧ್ಯಕ್ಷರಾದ ದೈವಶೇಲಾ ರಾಮದಾಸ್,ಉಪಾಧ್ಯಕ್ಷರಾದ ಶಾಂತಿ ಸಾಗರ, ಸದಸ್ಯರಾದ ಅಜಯ ರಮೇಶ, ಒದಿನಾ ಕೊಂಡಿಬಾ,ಪಿಎಚ್‌ಸಿ ಆಶಾರಾಣಿ, ತಾಂತ್ರಿಕ ಸಂಯೋಜಕರಾದ ಅಮರ ಬಿರಾದಾರ, ತಾಂತ್ರಿಕ ಸಹಾಯಕರಾದ ವಿನೋದ, ಐಇಸಿ ಸಂಯೋಜಕರಾದ ಸವಿತಾ ನಾಗೇಶ, ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕರಾದ ಕವಿತಾ ಬಿರಾದಾರ, ರಾಜೀವ ಗಾಂಧಿ ಸಂಯೋಜಕರಾದ ಸಂಪತ್ತ,ಗ್ರಾ.ಪಂ.ಕಾರ್ಯದರ್ಶಿ ಆದಿತ್ಯ, ಡಿಇಓ ಮಕಬೂಲ್, ಬಿಲ್ ಕಲೆಕ್ಟರ್ ಸಂಗಮೇಶ,ಗ್ರಾಮ ಕಾಯಕ ಮಿತ್ರ ರೇಷ್ಮಾ,ಮೇಟಿ ಕೆವಳಾಬಾಯಿ, ಕೂಲಿಕಾರರು ಹಾಗೂ ಇತರರು ಇದ್ದರು.

# ಕಮಲನಗರ:ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮಾ.8:ಪಟ್ಟಣದ ಡಾ॥ಚನ್ನಬಸವ ಪಟ್ಟದ್ದೇವರು ಪ್ರೌಢ ಶಾಲೆ ಹಾಗೂ ಶ್ರೀ ಗುರಪ್ಪಾ ಟೊಣ್ಣೆ ಪ್ರಾಥಮಿಕ ಶಾಲೆಯಲ್ಲಿ ಶನಿವಾರ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಜರುಗಿತು.

ಶಾಲೆಯ ಅಡಳಿತಾಧಿಕಾರಿಗಳಾದ ಚನ್ನಬಸವ ಘಾಳೆಯವರು ಕಾರ್ಯಕ್ರಮ ಉದ್ಘಾಟನೆ ಮಾಡಿ ಮಾತನಾಡಿದರು,ಆದುನಿಕ ಯುವದಲ್ಲಿ ಮಹಿಳೆಯರು ಇನ್ನು ಮುಂದೆ ಪುರುಷರ ಮೇಲೆ ಅವಲಂಬಿತವಾಗಿರದೆ ಸ್ವಅವಲಂಬನೆಯಾಗಿ ಇರಬೇಕು. ಪ್ರತಿಯೊಂದು ವಿಷಯದಲ್ಲೂ ಸ್ವತಂತ್ರರು ಮತ್ತು ಆತ್ಮವಿಶ್ವಾಸ ಹೊಂದಿದ್ದಾರೆ ಮತ್ತು ಪುರುಷರಿಗೆ ಸಮನಾವಾಗಿ ಎಲ್ಲವನ್ನೂ ಮಾಡಲು ಸಮರ್ಥರಾಗಿದ್ದಾರೆ. ಅಲ್ಲದೆ ನಾವು ಅವರಲ್ಲಿ ಪ್ರತಿಯೊಬ್ಬರು ಲಿಂಗದ ಕಾರಣದಿಂದಲ್ಲ ಬದಲಾಗಿ ಅವರ ಸ್ವಂತ ಗುರುತಿಗಾಗಿ ಗೌರವಿಸಬೇಕು ಇದಲ್ಲದೆ, ಮನೆ ಮತ್ತು ಸಮಾಜದ ಸುಧಾರಣೇಗೆ ಮಹಿಳೆಯರು ಮತ್ತು ಪುರುಷರು ಇಬ್ಬರೂ ಸಮಾನವಾಗಿ ಕೊಡುಗೆ ನೀಡುತ್ತಾರೆ ಎಂಬುದನ್ನು ನಾವು ಒಪ್ಪಿಕೊಳ್ಳಬೇಕು.

ಪ್ರತಿಯೊಬ್ಬ ಮಹಿಳೆ ಅಸಾಧಾರಣಳು, ಅವಳು ಎಲ್ಲಿ ಕೆಲಸ ಮಾಡಿದರೂ ಅದು ಮನೆಯಾಗಿರಲಿ ಅಥವಾ ಕಚೇರಿಯಾಗಿರಲಿ ಅವರು ತಮ್ಮ ಸುತ್ತಿಲಿನ ಪ್ರಪಂಚಕ್ಕೆ ಬದಲಾವಣೆ ತರುತ್ತಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ 10ನೇ ತರಗತಿಯ ವಿದ್ಯಾರ್ಥಿಯಾದ ಮಹೇಶ್ವರಿ ಅವಿನಾಶ ದೇಶಸೇವೆ ಮಾಡಿರುವ ಕಿತ್ತೂರ ರಾಣಿ ಚನ್ನಮ್ಮ, ಮದರ ತೆರೆಸ್ಸಾ, ಸಾವಿತ್ರಿಬಾಯಿ ಫುಲೆ, ಒನಕೆ ಒಬವ್ವ, ವಿವಿಧ ಮಹೀಳೆರನ್ನು ಸ್ಮರಿಸುತ್ತ ಮಾತನಾಡಿದಳು ಅದೆ ರೀತಿ 4ನೇ ತರಗತಿಯ ವಿದ್ಯಾರ್ಥಿನಿ ಪ್ರಗತಿ ಪ್ರಕಾಶ ಕಾರ್ಯಕ್ರಮವನ್ನು ಉದೇಶಿಸಿ ಮಾತನಾಡಿದಳು.

ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕಿಯರಾದ ಪಲ್ಲಿವಿ ನಾಯ್ಕ, ರಾಜೇಶ್ವರಿ ಬಿರಾದರ, ವಿಜಯಲಕ್ಷ್ಮಿ ಎಕಲಾರೆ, ಶಾಂತಾ ಮಡಿವಾಳ, ಶಿವಲಿಲಾ ಧರೆಗಾವೆ, ಶೋಭಾ ಪಾಟೀಲ, ಜ್ಯೋತಿ ಘಾಳೆ, ದೀಪಿಕಾ ಪಾಟೀಲ ಆಸ್ಮಾ ಪಠಾಣ, ರಾಜೇಶ್ವರು ಸಿರಸಗೆ, ರಂಜನಾ ಪಾಟೀಲ, ರಾಗೀಣಿ ದೇಶಮುಖ ಯವರು ಹಾಗೂ ಮಕ್ಕಳು ಇದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.